ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 98 ಸಂಚಿಕೆ- 98 | PAGE-8 ಪುಟ-8 | ಶನಿವಾರ 24.05.2025 | RS.2/- ಬೆಲೆ 2/-

## ಗ್ಯಾಂಗ್ ರೇಪ್ ಆರೋಪಿಗಳು ಮತ್ತೆ 'ಅಂದರ್'; ಜಾಮೀನು ರದ್ದು



ಮಲ್ಲಮ್ಮ ನುಡಿ ವಾರ್ತೆ ಹಾವೇರಿ:ಮೇ.23: ಜಾಮೀನು ಸಿಕ್ಕ ಬಳಿಕ ಜೈಲಿನಿಂದ ಬಿಡುಗಡೆಯಾಗಿ ಕಾರುಗಳಲ್ಲಿ ರೋಡ್ ಶೋ ಮಾಡಿ ವಿಜಯೋತ್ಸವ ಮಾಡಿದ್ದ ಹಾನಗಲ್ ಗ್ಯಾಂಗ್ ರೇಪ್ ಪ್ರಕರಣದ ಏಳು ಆರೋಪಿಗಳನ್ನು ಪೊಲೀಸರು ಮತ್ತೆ ಜೈಲಿಗೆ ಅಟ್ಟಿದ್ದಾರೆ.

ಹಾನಗಲ್ ಗ್ಯಾಂಗ್ ರೇಪ್ ಪ್ರಕರಣದ ಪ್ರಮುಖ ಏಳು ಆರೋಪಿಗಳಿಗೆ ಜಾಮೀನು ದೊರೆತ ಬೆನ್ನಿಗೆ, ಐದು ಕಾರುಗಳಲ್ಲಿ 20ಕ್ಕೂ ಹೆಚ್ಚು ಹಿಂಬಾಲಕರೊಂದಿಗೆ ವಿಜಯೋತ್ಸವ ರೀತಿಯಲ್ಲಿ ಮೆರವಣಿಗೆ ನಡೆಸಿದ್ದರು.

ಮೂರು ದಿನಗಳ ಹಿಂದೆ, ಹಾವೇರಿ ಸಬ್ ಜೈಲಿನಿಂದ ಜಾಮೀನಿನ ಮೇಲೆ ಬಿಡುಗಡೆಯಾದ ಸಾಮೂಹಿಕ ಅತ್ಯಾಚಾರ ಪ್ರಕರಣದ ಆರೋಪಿಗಳಾದ ಅಫ್ತಾದ್‌ಚಂದನ ಕಟ್ಟಿ, ಮದರ್‌ಸಾಬ್ ಮಂಡಕ್ಕಿ, ಸಮಿವುಲ್ಲ ಲಾಲನವರ್, ಮೊಹ್ಮದ್ ಸಾದಿಕ್ ಅಗಸಿನಿ, ಶೋಯಿಬ್ ಮುಲ್ಲ, ತೌಸಿಫ್‌ಚೋಟಿ ಮತ್ತು ರಿಯಾಜ್‌ಸವಿಕೇರಿ ಇವರುಗಳು ಕಾರುಗಳಲ್ಲಿ, ಬೈಕ್‌ಗಳಲ್ಲಿ ಕುಳಿತು ವಿಜಯೋತ್ಸವದ ರೀತಿಯಲ್ಲಿ ಮೆರವಣಿಗೆ ನಡೆಸಿರುವ ವೀಡಿಯೊಗಳು ವೈರಲ್ ಆಗಿದ್ದವು.

ಆರೋಪಿಗಳ ಈ ನಡೆಗೆ ತೀವ್ರ ಆಕ್ರೋಶ ವ್ಯಕ್ತವಾಗಿತ್ತು. ಇದೀಗ ವಿಜಯೋತ್ಸವ ನಡೆಸಿದ್ದ ಆರೋಪಿಗಳಿಗೆ ಶಾಕ್ ನೀಡಿದ್ದು, ಎಲ್ಲ 7 ಆರೋಪಿಗಳನ್ನು ಬಂಧಿಸಿ ಮತ್ತದೇ ಹಾವೇರಿ ಜೈಲಿಗೆ ಅಟ್ಟಿದ್ದಾರೆ.

### ವಿಜಯೋತ್ಸವ ತಂದ ಸಂಕಷ್ಟ

ಇನ್ನು ಜಾಮೀನು ಸಿಕ್ಕ ಬೆನ್ನಲ್ಲೇ ಜೈಲಿನಿಂದ ಬಿಡುಗಡೆಯಾಗಿದ್ದ 7 ಆರೋಪಿಗಳು ರೋಡ್ ಶೋ ಮಾಡುವ ಮೂಲಕ ವಿಜಯೋತ್ಸವ ಆಚರಿಸಿದ್ದರು. ಅವರ ಕುಟುಂಬ ಸದಸ್ಯರು ಮತ್ತು ಸ್ನೇಹಿತರು ಸಬ್ ಜೈಲಿನಿಂದ ಸುಮಾರು 30 ಕಿ.ಮೀ ದೂರದಲ್ಲಿರುವ ಅವರ ಊರು ಅಕ್ಕಿಹಾಳೂರಿಗೆ ಮೆರವಣಿಗೆ ಏರ್ಪಡಿಸಿದ್ದರು. 10 ಕಾರುಗಳು, 30 ಬೈಕ್ ಗಳು, ಡಿಜೆ ಸಂಗೀತದೊಂದಿಗೆ ದಾರಿಯುದ್ದಕ್ಕೂ ವಿಕ್ಟರಿ ಚಿನ್ಹೆ ತೋರಿಸುತ್ತಾ ಆರೋಪಿಗಳು ರೋಡ್ ಶೋ ಮಾಡಿದ್ದರು. ಅವರ ವಿಜಯೋತ್ಸವದ ವೀಡಿಯೊವನ್ನು ಸಹ ಮಾಡಿ ಸಾಮಾಜಿಕ ಮಾಧ್ಯಮದಲ್ಲಿ ಪ್ರಸಾರ ಮಾಡಲಾಗಿತ್ತು.

### ವಿಜಯೋತ್ಸವ ವೈರಲ್, ಜಾಮೀನು ಕ್ಯಾನ್ಸಲ್

ಇನ್ನು ಸಾಮೂಹಿಕ ಅತ್ಯಾಚಾರ ಆರೋಪಿಗಳ ವಿಜಯೋತ್ಸವದ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗುತ್ತಿದ್ದಂತೆಯೇ ಈ ವಿಚಾರ ಅರಿತ ನ್ಯಾಯಾಲಯ ಪ್ರಕರಣದ ಎಲ್ಲ 7 ಆರೋಪಿಗಳ ಜಾಮೀನು ಅನ್ನು ರದ್ದು ಪಡಿಸಿದೆ. ಈ ಬೆಳವಣಿಗೆ ಬೆನ್ನಲ್ಲೇ ಹಾವೇರಿ ಪೊಲೀಸರು ಎಲ್ಲ 7 ಆರೋಪಿಗಳನ್ನು ಮತ್ತೆ ಬಂಧಿಸಿ ಸಬ್ ಜೈಲಿಗೆ ಕಳುಹಿಸಿದ್ದಾರೆ.

ಜಾಮೀನು ನಿಯಮ ಉಲ್ಲಂಘನೆ

ಜಾಮೀನು ನೀಡಿಕೆ ನಿಯಮಗಳನ್ನು ಆರೋಪಿಗಳು ಉಲ್ಲಂಘಿಸಿದ ಹಿನ್ನಲೆಯಲ್ಲಿ ನ್ಯಾಯಾಲಯ ಜಾಮೀನು ರದ್ದು ಪಡಿಸಿದೆ ಎಂದು ಪೊಲೀಸ್ ವರಿಷ್ಠಾಧಿಕಾರಿ (ಎಸ್‌ಪಿ) ಅಂಶು ಕುಮಾರ್ ಎಸ್ ತಿಳಿಸಿದ್ದಾರೆ.

'ಸಾಮೂಹಿಕ ಅತ್ಯಾಚಾರ ಪ್ರಕರಣದಲ್ಲಿ ಜಿಲ್ಲಾ ನ್ಯಾಯಾಲಯದಿಂದ ಇತ್ತೀಚೆಗೆ ಜಾಮೀನು ಪಡೆದ ಏಳು ಆರೋಪಿಗಳನ್ನು ಜಾಮೀನು ನಿಯಮಗಳನ್ನು ಉಲ್ಲಂಘಿಸಿದ ನಂತರ ಪೊಲೀಸ್ ಇಲಾಖೆ ಬಂಧಿಸಿದೆ. ಆರೋಪಿಗಳು ಹಾನಗಲ್ ಪಟ್ಟಣ ಪೊಲೀಸ್ ಠಾಣೆಯಲ್ಲಿ ರೌಡಿ ಶೀಟರ್‌ಗಳಾಗಿದ್ದು, ಜಾಮೀನು ಪಡೆದು ಮೆರವಣಿಗೆಯಲ್ಲಿ ಭಾಗವಹಿಸಿದ್ದರು' ಎಂದಿದ್ದಾರೆ.

'ಕಾನೂನುಬಾಹಿರ ಮೆರವಣಿಗೆಯ ವಿರುದ್ಧ ಐಪಿಸಿ ಸೆಕ್ಷನ್ 189(2), 191(2), 281, 351(2), 351(3) ಮತ್ತು 190 ಬಿಎನ್‌ಎಸ್-2023 ಅಡಿಯಲ್ಲಿ ಪ್ರಕರಣ ದಾಖಲಾಗಿದೆ. ಹಾನಗಲ್ ಪಟ್ಟಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ವಿಡಿಯೊ ವೈರಲ್ ಆದ ನಂತರ ಪೊಲೀಸರು ವೀಡಿಯೊಗಳನ್ನು ಪರಿಶೀಲಿಸಿದ್ದು, ಎಲ್ಲಾ ಆರೋಪಿಗಳನ್ನು ಮೆರವಣಿಗೆಯಲ್ಲಿ ಇದ್ದರು ಎಂದು ದೃಢಪಡಿಸಿದರು' ಎಂದು ಅವರು ಹೇಳಿದರು.

ಏನಿದು ಪ್ರಕರಣ? ಹಾವೇರಿಯಲ್ಲಿ 2024ರ ಜನವರಿ 8 ರಂದು ಖಾಸಗಿ ಹೋಟೆಲ್‌ನಲ್ಲಿ ದಂಪತಿಗಳು ತಂಗಿದ್ದರು. ಆಗ 26 ವರ್ಷದ ಮಹಿಳೆಯನ್ನು ಹೋಟೆಲ್‌ನಿಂದ ಎಳೆದೊಯ್ದು ಆರೋಪಿಗಳು ಹತ್ತಿರದ ಅರಣ್ಯ ಪ್ರದೇಶಕ್ಕೆ ಕೊಂಡೊಯ್ದು ಸಾಮೂಹಿಕ ಅತ್ಯಾಚಾರ ಎಸಗಿದ್ದರು. ಸಂತಸ್ತೆ ನೀಡಿದ ದೂರಿನಂತೆ ಪೊಲೀಸರು ಈ ಪ್ರಕರಣದಲ್ಲಿ 19 ಜನರನ್ನು ಬಂಧಿಸಿದ್ದರು.

ಅವರಲ್ಲಿ ಈಗ ಜಾಮೀನಿನ ಮೇಲೆ ಬಿಡುಗಡೆಯಾಗಿರುವ 7 ಪ್ರಮುಖ ಆರೋಪಿಗಳು ಕೂಡ ಇದರಲ್ಲಿ ಸೇರಿದ್ದಾರೆ. ಈ ಪೈಕಿ 10 ತಿಂಗಳ ಹಿಂದೆಯೇ 12 ಆರೋಪಿಗಳಿಗೆ ಜಾಮೀನು ಸಿಕ್ಕಿತ್ತು. ಆದರೆ ಪ್ರಮುಖ ಆರೋಪಿಗಳ ಜಾಮೀನು ಅರ್ಜಿಗಳನ್ನು ಹಲವು ಬಾರಿ ನ್ಯಾಯಾಲಯ ತಿರಸ್ಕರಿಸಿತ್ತು.

ಈಗ ಉಳಿದ 7 ಆರೋಪಿಗಳಿಗೆ ನ್ಯಾಯಾಲಯ ಜಾಮೀನು ಮಂಜೂರು

(2ನೇ ಪುಟ ನೋಡಿ)

## 51 ಸಾವಿರ ಅತಿಥಿ ಶಿಕ್ಷಕರ ನೇಮಕಕ್ಕೆ ಸರ್ಕಾರ ಆದೇಶ

ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:ಮೇ.23: ರಾಜ್ಯದ ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳಿಗೆ ತಾತ್ಕಾಲಿಕವಾಗಿ ಅತಿಥಿ ಶಿಕ್ಷಕರ ನೇಮಕಕ್ಕೆ ಸರ್ಕಾರ ಆದೇಶ ಹೊರಡಿಸಿದೆ. ಸರ್ಕಾರಿ ಪ್ರಾಥಮಿಕ ಶಾಲೆಗಳಿಗೆ 40,000 ಹಾಗೂ ಸರ್ಕಾರಿ ಪ್ರೌಢಶಾಲೆಗಳಿಗೆ 11,000 ಶಿಕ್ಷಕರ ನೇಮಕ ಮಾಡಿಕೊಳ್ಳಲು ಸರ್ಕಾರ ಮಂಜೂರಾತಿ ನೀಡಿ ಆದೇಶಿಸಿದೆ.

2025-26ನೇ ಸಾಲಿನಲ್ಲಿ ಪೂರ್ವ ನಿಗದಿಯಂತೆ ಶಾಲಾ ಶೈಕ್ಷಣಿಕ ಚಟುವಟಿಕೆಗಳನ್ನು ಪ್ರಾರಂಭಿಸಿ ನಿರ್ವಹಣೆ ಮಾಡಬೇಕಾಗಿದೆ. ಶಾಲಾ ಪ್ರಾರಂಭದ ದಿನವೇ ಶಾಲೆಗಳಲ್ಲಿ ಖಾಲಿ ಇರುವ ಬೋಧಕ ಹುದ್ದೆಗಳಿಗೆ ಎದುರಾಗಿ ವಿದ್ಯಾರ್ಥಿಗಳ


(2ನೇ ಪುಟ ನೋಡಿ)

## ರಾಜೇಶ್ವರ ಶಿವಾಚಾರ್ಯರ ಸೇವೆ ಸ್ಮರಣೀಯ:ಪಾಟೀಲ



ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ:ಮೇ.23: ರಾಜೇಶ್ವರ ಶಿವಾಚಾರ್ಯರು ಈ ಭಾಗದಲ್ಲಿ ಶಿಕ್ಷಣ, ಕೃಷಿ, ಆಧ್ಯಾತ್ಮ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಕಳೆದ 25 ವರ್ಷಗಳಿಂದ ಸೇವೆ ಸಲ್ಲಿಸುತ್ತಿರುವುದು ಸ್ಮರಣೀಯವಾಗಿದೆ. ಶ್ರೀಗಳು ತಮ್ಮ ಕಾರ್ಯದಿಂದ ಜನಮಾನಸದಲ್ಲಿ ತಮ್ಮ ಛಾಪನ್ನು ಮೂಡಿಸಿದ್ದಾರೆ ಎಂದು ಮಾಜಿ ಸಚಿವ ರಾಜಶೇಖರ ಪಾಟೀಲ ನುಡಿದರು. ಅವರು ತಾಲೂಕಿನ ಗಡಿ ಭಾಗದ ಮೇಹಕರ ಗ್ರಾಮದಲ್ಲಿ ರಾಜೇಶ್ವರ ಶಿವಾಚಾರ್ಯರ ಪಟ್ಟಾಧಿಕಾರ ರಜತ ಮಹೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಿ ರಂಭಾಪುರಿ ಪೀಠದ ಜಗದ್ಗುರು ಡಾ.ವೀರಸೋಮೇಶ್ವರ ಶಿವಾಚಾರ್ಯರ ಮತ್ತು ರಾಜೇಶ್ವರ ಶಿವಾಚಾರ್ಯರ ಆಶೀರ್ವಾದ ಪಡೆದು ಮಾತನಾಡಿದರು. ಮೂರು ದಿನಗಳ ಕಾಲ ನಡೆದ ಗುರು ಪಟ್ಟಾಧೀಕಾರ ಮಹೋತ್ಸವ ಕಾರ್ಯಕ್ರಮ ಸಡಗರ ಸಂಭ್ರಮಗಳಿಂದ ನಡೆಯಲು ಇಲ್ಲಿನ ಭಕ್ತರ ಪರಿಶ್ರಮ ಕಾರಣ. ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಗುರುಗಳ ಆಶೀರ್ವಾದ ಪಡೆಯುವ ಮೂಲಕ ಗುರುಪಟ್ಟಾಧಿಕಾರದ ರಜತ ಮಹೋತ್ಸವವನ್ನು ಯಶಸ್ವಿಗೊಳಿಸಿದ್ದಾರೆ. ಇದಕ್ಕೆ ರಾಜೇಶ್ವರ ಶಿವಾಚಾರ್ಯರು ಸಮಾಜಕ್ಕೆ ಸಲ್ಲಿಸಿದ ಸೇವೆಯೇ ಕಾರಣ. ಶ್ರೀಗಳ ಆಶೀರ್ವಾದ ಸದಾ ಸರ್ವರ ಮೇಲಿರಲಿ ಎಂದು ಭಗವಂತನಲ್ಲಿ ಪ್ರಾರ್ಥಿಸುವುದಾಗಿ ತಿಳಿಸಿದರು. ಈ ಸಂದರ್ಭದಲ್ಲಿ ಹುಮನಾಬಾದ್ ಪಿಎಲ್ ಡಿ ಬ್ಯಾಂಕ್ ಅಧ್ಯಕ್ಷ ಮಲ್ಲಿಕಾರ್ಜುನ ಮಾಶಟ್ಟಿ ಉಪಸ್ಥಿತರಿದ್ದರು

## ಸುಳ್ಳಿಗೆ ಮತ್ತೊಂದು ಹೆಸರು ಕುಮಾರಸ್ವಾಮಿ: ಡಿಸಿಎಂ
### ಡಿ.ಕೆ.ಶಿವಕುಮಾರ್ ಕಿಡಿ ನ್ಯಾಷನಲ್ ಹೆರಾಲ್ಡ್ ಗೆ 25 ಲಕ್ಷ ಕೊಟ್ಟಿದ್ದೇನೆ



ಮಲ್ಲಮ್ಮನುಡಿ ವಾರ್ತೆ ವಿಜಯಪುರ : ಮೇ 23:"ಸುಳ್ಳಿಗೆ ಮತ್ತೊಂದು ಹೆಸರು ಕುಮಾರಸ್ವಾಮಿ" ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ಕಿಡಿಕಾರಿದರು.

ವಿಜಯಪುರ ಜಿಲ್ಲೆ ಕೊಲ್ಹಾರದಲ್ಲಿ ಮಾಧ್ಯಮಗಳಿಗೆ ಶುಕ್ರವಾರ ಪ್ರತಿಕ್ರಿಯೆ ನೀಡಿದರು. ಚಿನ್ನ ಕಳ್ಳಸಾಗಣೆಯ ರನ್ಯಾ ರಾವ್ ಪ್ರಕರಣದ ಮಾಹಿತಿಯನ್ನು ನೀವೇ ನೀಡಿದ್ದೀರ ಎನ್ನುವ ಕುಮಾರಸ್ವಾಮಿ ಆರೋಪದ ಬಗ್ಗೆ ಕೇಳಿದಾಗ, "ಕುಮಾರಸ್ವಾಮಿ ಒಬ್ಬ ಮೆಂಟಲ್. ಅವರ ಮಾನಸಿಕ ಆರೋಗ್ಯ ಹದಗೆಟ್ಟಿರ ಬೇಕು. ತಲೆ ಕೆಟ್ಟು ಹೋಗಿದೆ" ಎಂದು ಜರಿದರು.

ರಾಮನಗರದ ನಾಮಫಲಕಕ್ಕೆ ಚಿನ್ನದ ತಗಡು ಹೊಡೆಯಲಾಗುತ್ತದೆಯೇ ಎನ್ನುವ ಕುಮಾರಸ್ವಾಮಿ ಅವರ ಸರಣಿ ಟೀಕೆಗಳ ಕುರಿತು ಕೇಳಿದಾಗ, "ಕುಮಾರಸ್ವಾಮಿ ರಾಜಕೀಯ ಮಾಡಲು ರಾಮನಗರಕ್ಕೆ ಏಕೆ ಬಂದರು? ಹಾಸನದಲ್ಲಿಯೇ ಏಕೆ ರಾಜಕೀಯ ಮಾಡಲಿಲ್ಲ. ಮೊದಲು ಎಚ್.ಡಿ.ಕುಮಾರಸ್ವಾಮಿ ಎನ್ನುವ ಹೆಸರಿನಲ್ಲಿರುವ ಅವರ ಊರಿನ ಹೆಸರು ಹಾಗೂ ತಂದೆಯ ಹೆಸರನ್ನು ಏಕೆ ಇನ್ನು ಇಟ್ಟುಕೊಂಡಿದ್ದಾರೆ. ಮೊದಲು ಅದನ್ನು ಬದಲಾವಣೆ ಮಾಡಿಕೊಳ್ಳಲಿ" ಎಂದು ತಿರುಗೇಟು ನೀಡಿದರು.

"ನಾವು ಬೆಂಗಳೂರು ಜಿಲ್ಲೆಯವರು. ಒಂದೊಂದು ಊರಿನ ಹೆಸರಿಗೆ ತನ್ನದೇ ಆದ ಇತಿಹಾಸವಿರುತ್ತದೆ. ಮದ್ರಾಸ್ ಅನ್ನು ಮತ್ತೆ ಏಕೆ ಚೆನ್ನೈ ಎಂದು ಕರೆದರು. ಗುಲ್ಬರ್ಗಾವನ್ನು ಕಲಬುರ್ಗಿ ಎಂದು ಮರುನಾಮಕರಣ ಮಾಡಲಾಗಿದೆ. ನಮಗೂ ನಮ್ಮದೇ ಆದಂತಹ ಆಸೆ ಇರುತ್ತದೆ. ಅವರಿಗೆ ಏನು ತೊಂದರೆಯಾಗಿದೆ?" ಎಂದು ಪ್ರಶ್ನಿಸಿದರು.

ರಿಯಲ್ ಎಸ್ಟೇಟ್ ಗಾಗಿ ಹೆಸರು ಬದಲಾವಣೆ ಮಾಡಲಾಗಿದೆ ಎನ್ನುವ ಆರೋಪದ ಬಗ್ಗೆ ಕೇಳಿದಾಗ, "ಹೌದು, ನಮ್ಮ ಹಳ್ಳಿಯ ಜನ ಉದ್ಧಾರವಾಗಬೇಕು. ಎಲ್ಲರಿಗೂ ಉದ್ಯೋಗ ಸಿಗಬೇಕು. ನಮ್ಮ ಜನರ ಆಸ್ತಿ ಮೌಲ್ಯ ಜಾಸ್ತಿಯಾಗಬೇಕು. ಪ್ರತಿಯೊಬ್ಬ ರೈತನಿಗೂ ಒಳ್ಳೆಯದಾಗಬೇಕು. ಹೊರಗಡೆ ದೇಶದಿಂದ ಜನರು ಬಂದು ಬಂಡವಾಳ ಹೂಡಿಕೆ ಮಾಡಬೇಕು. ಅಭಿವೃದ್ಧಿ ಆಗಬೇಕು ಎಂಬುದು ನಮ್ಮ ಆಸೆ" ಎಂದರು.

"ಸಂಸತ್ ಕ್ಷೇತ್ರವನ್ನು ಮೊದಲು ಕನಕಪುರ ಎಂದು ಕರೆಯಲಾಗುತ್ತಿತ್ತು. ಅದನ್ನು ಬೆಂಗಳೂರು ಗ್ರಾಮಾಂತರ ಎಂದು ಆನಂತರ ಏಕೆ ಮಾಡಿದರು? ರಾಮನಗರದ ಹೆಸರು ಬದಲಾವಣೆ ಮಾಡುತ್ತಿಲ್ಲ. ಜತೆಗೆ ರಾಮನಗರವೇ ಜಿಲ್ಲಾ ಕೇಂದ್ರವಾಗಿರುತ್ತದೆ. ನಾವು ಕೇವಲ ಜಿಲ್ಲೆಯ ಹೆಸರನ್ನು ಬದಲಾವಣೆ ಮಾಡುತ್ತಿದ್ದೇವೆ" ಎಂದು ತಿಳಿಸಿದರು.

ನ್ಯಾಷನಲ್ ಹೆರಾಲ್ಡ್ ಗೆ ರಾಜಾರೋಷವಾಗಿ 25 ಲಕ್ಷ ಕೊಟ್ಟಿದ್ದೇವೆ

ನ್ಯಾಷನಲ್ ಹೆರಾಲ್ಡ್ ಪ್ರಕರಣದಲ್ಲಿ ನಿಮ್ಮ ಹೆಸರು ಡಿ.ಕೆ.ಸುರೇಶ್ ಅವರ ಹಾಗೂ ತೆಲಂಗಾಣ ಮುಖ್ಯಮಂತ್ರಿ ರೇವಂತ ರೆಡ್ಡಿ ಅವರ ಹೆಸರು ಇರುವುದರ ಬಗ್ಗೆ ಕೇಳಿದಾಗ, "ನಮ್ಮ ಪಕ್ಷ ನಡೆಸುವಂತಹ ಪತ್ರಿಕೆ. ಅದಕ್ಕೆ ನಾನು ಹಾಗೂ ಸುರೇಶ್ 25 ಲಕ್ಷ ದುಡ್ಡು ಕೊಟ್ಟಿದ್ದೇವೆ. ನಮ್ಮ ಟ್ರಸ್ಟ್ ನಿಂದಲೂ ದೇಣಿಗೆ ನೀಡಿದ್ದೇವೆ" ಎಂದರು.

ದೇಣಿಗೆ ನೀಡಿರುವುದರಿಂದ ನಿಮಗೆ ತೊಂದರೆಯಾಗುತ್ತದೆಯೇ ಎಂದಾಗ, "ನಾವು ದುಡಿದಂತಹ ಆಸ್ತಿಯಿಂದ ರಾಜಾರೋಷವಾಗಿ ಹಣ ನೀಡಿದ್ದೇವೆ. ನಾವು ಕದ್ದುಮುಚ್ಚಿ ಹಣ ನೀಡಿಲ್ಲ" ಎಂದು ಹೇಳಿದರು.

## ಸಚಿವ ಪ್ರಿಯಾಂಕ್ ಖರ್ಗೆ ಪಾಪದ ಕೊಡ ತುಂಬಿದೆ: ರವಿಕುಮಾರ



ಮಲ್ಲಮ್ಮನುಡಿ ವಾರ್ತೆ ಕಲಬುರಗಿ: ಮೇ.23: ಸಚಿವ ಪ್ರಿಯಾಂಕ್ ಖರ್ಗೆ ಅವರ ಪಾಪದ ಕೊಡ ತುಂಬಿದ್ದು, ಚಿತ್ತಾಪುರದ ಪ್ರವಾಸಿ ಮಂದಿರದಲ್ಲಿ ರಾಜ್ಯ ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ಅವರಿಗೆ ಐದು ಗಂಟೆಗಳ ಕಾಲ ದಿಬ್ಬಂಧನ ವಿಧಿಸಿದ ಘಟನೆಗೆ ಸಂಬಂಧಿಸಿದಂತೆ ರಾಜ್ಯದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯಿತಿರಾಜ್, ಐಟಿಬಿಟಿ ಮತ್ತು ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಅವರನ್ನು ಕೂಡಲೇ ಸಂಪುಟದಿಂದ ವಜಾಗೊಳಿಸುವಂತೆ ಹಾಗೂ ಮೂವರು ಪೋಲಿಸ್ ಅಧಿಕಾರಿಗಳು ಮತ್ತು ಸಿಬ್ಬಂದಿಗಳನ್ನು ಅಮಾನತ್ತಿಗೆ ಒಳಪಡಿಸುವಂತೆ ಒತ್ತಾಯಿಸಿ ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ಮೇ 24ರಂದು ಶನಿವಾರ ಬೆಳಿಗ್ಗೆ 10-30ಕ್ಕೆ ಬಿಜೆಪಿ ಧರಣಿ ಸತ್ಯಾಗ್ರಹ ಹಮ್ಮಿಕೊಂಡಿದೆ ಎಂದು ರಾಜ್ಯ ವಿಧಾನ ಪರಿಷತ್ ವಿರೋಧ ಪಕ್ಷದ ಮುಖ್ಯ ಸಚೇತಕ ಎನ್.

(2ನೇ ಪುಟ ನೋಡಿ)

## ಮೂರು ಟ್ರ್ಯಾಕ್ಟರ್ ಕಳ್ಳತನ: ಮೂವರ ಬಂಧನ





ಮಲ್ಲಮ್ಮನುಡಿ ವಾರ್ತೆ ಕಲಬುರಗಿ: ಮೇ.23: ಫರತಾಬಾದ್ ಠಾಣೆ-ಯ ಪೋಲಿಸರು ಕಾರ್ಯಾಚರಣೆ ಕೈಗೊಂಡು ಮೂರು ಟ್ರ್ಯಾಕ್ಟರ್‌ಗಳ ಕಳ್ಳತನ ಪ್ರಕರಣಗಳನ್ನು ಬೇಧಿಸಿ ಮೂವರು ಆರೋಪಿಗಳನ್ನು ಬಂಧಿಸಿದ್ದಾರೆ.

ಬಂಧಿತರನ್ನು ಅಫಜಲಪುರ ತಾಲ್ಲೂಕಿನ ಹಸರಗುಂಡಗಿ ಗ್ರಾಮದ ಚಾಲಕ ರಿಯಾಜ್ ಪಟೇಲ್ ತಂದೆ ರಸೀಪದ್ ಪಟೇಲ್ ಗುಡನಾಳ್ (25), ಫರತಾಬಾದ್ ಗ್ರಾಮದ ಚಾಲಕ ರಾಜಶೇಖರ್ ತಂದೆ ನಾಗಪ್ಪ ಮಂದರವಾಡ (20) ಮತ್ತು ಅಫಜಲಪುರ ತಾಲ್ಲೂಕಿನ ಬಂದರವಾಡ ಗ್ರಾಮದ ಕೂಲಿಕಾರ ನಾಗರಾಜ್ ತಂದೆ ಚಂದ್ರಕಾಂತ್ ಬಾಲಮಾರ್ (25) ಎಂದು ಗುರುತಿಸಲಾಗಿದೆ.

ಬಂಧಿತರಿಂದ ಮೂರು ಲಕ್ಷ ರೂ.ಗಳ ಮೌಲ್ಯದ ಒಂದು ನೀಲಿ ಬಣ್ಣದ ನ್ಯೂ ಹೋಲಂಡ 5500 ಟುರ್ಬೋ ಸೂಪರ್ ಕಂಪೆನಿಯ ಟ್ರ್ಯಾಕ್ಟರ್ ಇಂಜಿನ್, ಆರು ಲಕ್ಷ ರೂ.ಗಳ ಮೌಲ್ಯದ ಒಂದು ಕೆಂಪು ಬಣ್ಣದ ಮಹಿಂದ್ರಾ ಅರ್ಜುನ್ ಟ್ರ್ಯಾಕ್ಟರ್ ಇಂಜಿನ್, 2,50 ಲಕ್ಷ ರೂ.ಗಳ ಮೌಲ್ಯದ ಒಂದು ಕೆಂಪು ಬಣ್ಣದ ಸರಪಂಚ್ ಸೇರಿದಂತೆ ಒಟ್ಟು 11.50 ಲಕ್ಷ ರೂ.ಗಳ ಮೌಲ್ಯದ ಮೂರು ಟ್ರ್ಯಾಕ್ಟರ್‌ಗಳನ್ನು ಪೋಲಿಸರು ವಶಪಡಿಸಿಕೊಂಡಿದ್ದಾರೆ.

ಕಲಬುರಗಿ ತಾಲ್ಲೂಕಿನ ಹಾಗರಗುಂಡಗಿ ಗ್ರಾಮದ ಗುಂಡಪ್ಪ ತಂದೆ ಹಣಮಂತ್ ನೀಲೂರ್ ಅವರು ಕಳೆದ ಮಾರ್ಚ್ 14ರಂದು ಫರತಾಬಾದ್ ಠಾಣೆಗೆ ದೂರು ಸಲ್ಲಿಸಿ, ಹಾಗರಗುಂಡಗಿ ಗ್ರಾಮದ ಸೀಮಾಂತರದಲ್ಲಿ ಬರುವ

(2ನೇ ಪುಟ ನೋಡಿ)

Iqra Eductional & Welfare Charitable Trust(R)

UNIQUE MODEL SCHOOL

Quality Education ENGLISH MEDIUM Reg.3575/2019

2025-26 ADMISSIONS OPEN Nursery LKG,UKG 1st to 7th

TEACHER WANTED

We are Looking for experienced Teachers at our school For the Academic Year 2025-26

| SI.No | Post | Subject | Vanc. | Qualification |
|---|---|---|---|---|
| 01 | Asst.Teacher | English | 02 | Bachelor Degree/ D.Ed/B.Ed |
| 02 | Asst.Teacher | Kannada | 02 | Bachelor Degree/ D.Ed/B.Ed |
| 03 | Asst.Teacher | Hindi | 02 | Bachelor Degree/ D.Ed/B.Ed |
| 04 | Asst.Teacher | Maths | 02 | Bachelor Degree/ D.Ed/B.Ed |
| 05 | Asst.Teacher | Science | 02 | Bachelor Degree/ D.Ed/B.Ed |
| 06 | Asst.Teacher | S.Science | 02 | Bachelor Degree/ D.Ed/B.Ed |

Walk- In- Interview : - 27-05-2025 on Tuesday At.10am

JANTA COLONY NEAR BOYS HOSTEL AURAD(B)
CELL : 9503935041, 9449514621,9480636684

ಒಂದನೇ ಪುಟದಿಂದ

## ಕಳ್ಳತನ: ಮೂವರ ಬಂಧನ

ಮಾಣಿಕರಾವ್ ಗಚ್ಚಿನಮನಿ ಅವರ ಹೊಲ ಸರ್ವೆ ನಂಬರ್ 208ರ 11 ಎಕರೆ ಜಮೀನಿನಲ್ಲಿ ನೇಗಿಲು ಹೊಡೆದು ಟ್ರ್ಯಾಕ್ಟರನ್ನು ಮಾರ್ಚ್ 12ರಂದು ಸಂಜೆ ಆರು ಗಂಟೆಗೆ ಕೆಲಸ ಮುಗಿಸಿಕೊಂಡು ಹೊಲದಲಿ ಬಿಟ್ಟು ಬಂದಿರುತ್ತೇನೆ. ಮಾರ್ಚ್ 13ರಂದು ಬೆಳಿಗ್ಗೆ ಬಂದು ನೋಡಿದಾಗ ಟ್ರ್ಯಾಕ್ಟರ್ ಕಳ್ಳತನ ಮಾಡಿಕೊಂಡು ಹೋಗಿದ್ದು, ಪತ್ತೆ ಹಚ್ಚಿ ಕೊಡಲು ಕೋರಿದ್ದರು.

ನಗರ ಉಪ ಪೋಲಿಸ್ ಆಯುಕ್ತರಾದ ಶ್ರೀಮತಿ ಕನ್ನಿಕಾ ಸಿಕ್ರಿವಾಲ್, ಪ್ರವೀಣ್ ಎಚ್. ನಾಯಕ್ ಅವರ ಮಾರ್ಗದರ್ಶನದಲ್ಲಿ ಸಬ್ ಅರ್ಬನ್ ಉಪ ವಿಭಾಗದ ಸಹಾಯಕ ಪೋಲಿಸ್ ಆಯುಕ್ತ ಡಿ.ಜಿ. ರಾಜಣ್ಣ ಅವರ ನೇತೃತ್ವದಲ್ಲಿ ಫರತಾಬಾದ್ ಪೋಲಿಸ್ ಠಾಣೆಯ ಪಿಐ ಮಲ್ಲಿಕಾರ್ಜುನ್ ಸಿ. ಇಕ್ಕಳಕಿ, ಸಿಬ್ಬಂದಿಗಳಾದ ಗಡ್ಡೆಪ್ಪ ಕೋರೆ, ತುಕಾರಾಮ್, ಕಲ್ಯಾಣಕುಮಾರ್, ಸಾಜೀದ್ ಪಾಶಾ, ಆನಂದ್, ಎಂ.ಆರ್. ಪಟೇಲ್, ಕು. ಸಂಗೀತಾ ಕಲ್ಲನವರು ಸೇರಿ ಕಾರ್ಯಾಚರಣೆ ಕೈಗೊಂಡು ಮೂವರು ಆರೋಪಿಗಳನ್ನು ಬಂಧಿಸುವಲ್ಲಿ ಯಶಸ್ವಿಯಾದರು. ಕಾರ್ಯಾಚರಣೆ ಕುರಿತು ನಗರ ಪೋಲಿಸ್ ಆಯುಕ್ತ ಡಾ. ಶರಣಪ್ಪ ಎಸ್.ಡಿ., ಅವರು ಶ್ಲಾಘಿಸಿದ್ದಾರೆ.

## ಕೊಡ ತುಂಬಿದೆ: ರವಿಕುಮಾರ

ರವಿಕುಮಾರ್ ಅವರು ತಿಳಿಸಿದರು.

ನಗರದಲ್ಲಿ ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ತಿರಂಗಾ ಯಾತ್ರೆಯಲ್ಲಿ ಪಾಲ್ಗೊಳ್ಳಲು ಚಿತ್ತಾಪುರಕ್ಕೆ ಹೋದಾಗ ಕಾಂಗ್ರೆಸ್ ಕಾರ್ಯಕರ್ತರ ಪ್ರತಿಭಟನೆಯ ನೆಪ ಮಾಡಿ ಐದು ಗಂಟೆಗಳ ಕಾಲ ಪೋಲಿಸರೇ ಛಲವಾದಿ ನಾರಾಯಣಸ್ವಾಮಿ ಅವರಿಗೆ ಪ್ರವಾಸಿ ಮಂದಿರದಲ್ಲಿ ಕೂಡಿಹಾಕಿದರು. ಸಚಿವ ಪ್ರಿಯಾಂಕ್ ಖರ್ಗೆ ಅವರ ಅಣತಿಯಂತೆ ಪೋಲಿಸರು ಹಾಗೂ ಕಾಂಗ್ರೆಸ್ ಕಾರ್ಯಕರ್ತರು ನಡೆದುಕೊಂಡಿದ್ದು, ದಿಗ್ಬಂಧನ ಹಾಕಿ ತಿರಂಗಾ ಯಾತ್ರೆಯಲ್ಲಿ ಛಲವಾದಿ ನಾರಾಯಣಸ್ವಾಮಿ ಅವರು ಪಾಲ್ಗೊಳ್ಳದಂತೆ ಮಾಡಿದ್ದಾರೆ ಎಂದು ಆರೋಪಿಸಿದರು.

ಪೋಲಿಸರು ಸಹ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆಯವರು ಹೇಳಿದ ಹಾಗೆ ಕೇಳಿದ್ದಾರೆ. ಛಲವಾದಿ ನಾರಾಯಣಸ್ವಾಮಿ ಅವರು ವಿರೋಧ ಪಕ್ಷದ ನಾಯಕರಿದ್ದರೂ ಸಹ ಅದನ್ನು ಪರಿಗಣಿಸದೇ ಅವರಿಗೆ ಪ್ರವಾಸಿ ಮಂದಿರದಲ್ಲಿ ಕೂಡಿ ಹಾಕಿದ್ದು ತಪ್ಪು ಎಂದು ಹೇಳಿದ ಅವರು, ಪ್ರತಿಭಟನೆಕಾರರ ವಿರುದ್ಧ ಕ್ರಮ ಕೈಗೊಳ್ಳದೇ ಪ್ರತಿ ಪಕ್ಷ ನಾಯಕನಿಗೆ ಒಳಗೆ ದಿಗ್ಬಂಧನ ವಿಧಿಸುವ ಮೂಲಕ ಪ್ರತಿಪಕ್ಷನ ನಾಯಕನ ಸ್ಥಾನಕ್ಕೆ ಪೋಲಿಸರು ಚ್ಯುತಿ ತಂದಿದ್ದಾರೆ. ಹಾಗಾಗಿ ಜಿಲ್ಲಾ ಹೆಚ್ಚುವರಿ ಪೋಲಿಸ್ ವರಿಷ್ಠಾಧಿಕಾರಿ ಮಹೇಶ್ ಮೇಘಣ್ಣನವರ್, ಚಂದ್ರಶೇಖರ್ ತಿಗಡಿ ಹಾಗೂ ಶಂಕರಗೌಡ ಪಾಟೀಲ್ ಹಾಗೂ ಸಿಬ್ಬಂದಿಗಳನ್ನು ಕೂಡಲೇ ಅಮಾನತ್ತಿಗೆ ಒಳಪಡಿಸಬೇಕು ಎಂದು ಒತ್ತಾಯಿಸಿದರು.

ಸಚಿವ ಪ್ರಿಯಾಂಕ್ ಖರ್ಗೆ ಅವರಿಗೆ ನಾಯಿ ಎಂದಿದ್ದಕ್ಕೆ ಪಾರಿತೋಷಕ ಕೊಡಬೇಕೆ? ಎಂಬ ಪ್ರಿಯಾಂಕ್ ಅವರ ಪ್ರಶ್ನೆಗೆ ಪ್ರತಿಕ್ರಿಯಿಸಿದ ಎನ್. ರವಿಕುಮಾರ್ ಅವರು, ಅವರ ತಂದೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ್ ಖರ್ಗೆಯವರು ಪ್ರಧಾನಿ ನರೇಂದ್ರ ಮೋದಿ ಅವರಿಗೆ ವಿಷಸರ್ಪ ಎಂದು ಜರಿದಿದ್ದಾರೆ. ಅವರಿಗೆ ಏನು ನೋಬೆಲ್ ಪ್ರಶಸ್ತಿ ಕೊಡಬೇಕೆ? ಎಂದು ತಿರುಗೇಟು ನೀಡಿದರು.

ಛಲವಾದಿ ನಾರಾಯಣಸ್ವಾಮಿ ಅವರಿಗೆ ದಿಗ್ಬಂಧನ ವಿಧಿಸಿದ್ದನ್ನು ಖಂಡಿಸಿ ನಗರದಲ್ಲಿ ಮೇ 24ರಂದು ಶನಿವಾರ ಬೃಹತ್ ಪ್ರತಿಭಟನೆ ಮಾಡಲಾಗುವುದು. ಪ್ರತಿಭಟನೆಯಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ, ಮಾಜಿ ಮುಖ್ಯಮಂತ್ರಿ ಬಸವರಾಜ್ ಬೊಮ್ಮಾಯಿ, ವಿರೋಧ ಪಕ್ಷದ ನಾಯಕ ಆರ್. ಅಶೋಕ್, ಮಾಜಿ ಸಚಿವ ಹಾಗೂ ರಾಜ್ಯ ವಿಧಾನ ಪರಿಷತ್ ಸದಸ್ಯ ಸಿ.ಟಿ. ರವಿ ಹಾಗೂ ರಾಜ್ಯದ ನಾಯಕರು, ಶಾಸಕರು, ಮಾಜಿ ಶಾಸಕರು ಪಾಲ್ಗೊಳ್ಳುವರು ಎಂದು ಅವರು ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ಪಕ್ಷದ ಜಿಲ್ಲಾಧ್ಯಕ್ಷ ಅಶೋಕ ಬಗಲಿ, ರಾಜ್ಯ ವಿಧಾನ ಪರಿಷತ್ ಸದಸ್ಯ ಬಿ.ಜಿ. ಪಾಟೀಲ್ ಮುಂತಾದವರು ಉಪಸ್ಥಿತರಿದ್ದರು.

## ನೇಮಕಕ್ಕೆ ಸರ್ಕಾರ ಆದೇಶ

ಶೈಕ್ಷಣಿಕ ಹಿತದೃಷ್ಟಿಯಿಂದ ಖಾಯಂ ಶಿಕ್ಷಕರ ನೇಮಕವಾಗುವವರೆಗೆ ಅಥವಾ ಶೈಕ್ಷಣಿಕ ಅಂತ್ಯದ ವರೆಗೆ ತಾತ್ಕಾಲಿಕವಾಗಿ ಅತಿಥಿ ಶಿಕ್ಷಕರನ್ನು ನೇಮಕ ಮಾಡಿಕೊಳ್ಳಲಾಗುವುದು ಎಂದು ಸರ್ಕಾರ ಪ್ರಕಟಣೆಯಲ್ಲಿ ತಿಳಿಸಿದೆ.

ನೇಮಕಾತಿ ಮಾಡಿಕೊಳ್ಳುವ ಒಟ್ಟು 51 ಸಾವಿರ ಅತಿಥಿ ಶಿಕ್ಷಕರ ಗೌರವಧನ ಪಾವತಿಗಾಗಿ ಅವಶ್ಯವಿರುವ ಅನುದಾನದ ವಿವರ ಹಾಗೂ ಅತಿಥಿ ಶಿಕ್ಷಕರ ಜಿಲ್ಲಾ, ತಾಲೂಕುವಾರು ವಿವರಗಳೊಂದಿಗೆ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸುವಂತೆ ಸೂಚಿಸಲಾಗಿದೆ.

## ಮತ್ತೆ 'ಅಂದರ್'; ಜಾಮೀನು ರದ್ದು

ಮಾಡಿತ್ತು. 3 ದಿನಗಳ ಹಿಂದೆ ಹಾನಗಲ್ ಗ್ಯಾಂಗ್ ರೇಪ್ ಪ್ರಕರಣದ ಪ್ರಮುಖ 7 ಆರೋಪಿಗಳಿಗೆ ಜಾಮೀನು ಸಿಕ್ಕಿದೆ. ಹಾವೇರಿ ಹೆಚ್ಚುವರಿ ಜಿಲ್ಲಾ ಮತ್ತು ಸೆಷನ್ ನ್ಯಾಯಾಲಯವು ಜಾಮೀನು ಮಂಜೂರು ಮಾಡಿತ್ತು.

**ಸಂತ್ರಸ್ಥೆಯಿಂದ ಗುರುತು ಪತ್ತೆ ವಿಫಲ ಹಿನ್ನಲೆಯಲ್ಲಿ ಜಾಮೀನು**

ಈ ಪ್ರಕರಣದಲ್ಲಿ ಸಂತ್ರಸ್ಥ ಮಹಿಳೆ ಈ 7 ಆರೋಪಿಗಳನ್ನು ಗುರುತಿಸಲು ವಿಫಲವಾದ ಹಿನ್ನೆಲೆಯಲ್ಲಿ ಮತ್ತು ಸಂತ್ರಸ್ತೆ ಮ್ಯಾಜಿಸ್ಟ್ರೇಟ್ ಮುಂದೆ ನೀಡಿದ್ದ ಹೇಳಿಕೆಗಳನ್ನು ಉಳಿಸಿಕೊಳ್ಳಲು ವಿಫಲವಾದ ಹಿನ್ನೆಲೆಯಲ್ಲಿ ಪ್ರಕರಣದ ಪ್ರಮುಖ 7 ಆರೋಪಿಗಳಿಗೆ ನ್ಯಾಯಾಲಯ ಜಾಮೀನು ಮಂಜೂರು ಮಾಡಿತ್ತು. o1 ಆರೋಪಿ ಅಫ್ತಾದ್ ಚಂದನಕಟ್ಟಿ, o2 ಮದರ್ ಸಾಬ್ ಮಂಡಕ್ಕಿ, o3 ಸಮಿವುಲ್ಲಾ ಲಾಲನವರ, o4 ಮಹಮದ್ ಸಾದಿಕ್ ಅಗಸಿಮನಿ, o8 ಶೊಯಿಬ್ ಮುಲ್ಲಾ, o11 ತೌಸಿಪ್ ಚೋಟಿ, o12 ರಿಯಾಜ್ ಸಾವಿಕೇರಿಗೆ ಜಾಮೀನು ಮಂಜೂರು ಮಾಡಿತ್ತು.

# ಬಸವಗಿರಿಯ ನಿಗರ್ಸದ ಮಡಿಲಲ್ಲಿ ಸಾಮೂಹಿಕ ವಚನ ಪಾರಾಯಣ

# ಅಕ್ಕ ಅನ್ನಪೂರ್ಣತಾಯಿ ಪ್ರಥಮ ಸ್ಮರಣೋತ್ಸವ ಆರಂಭ




ಮಲ್ಲಮ್ಮ ನುಡಿ ವಾರ್ತೆ

ಬೀದರ.ಮೇ.23:ಲಿಂಗಾಯತ ಮಹಾ ಮಠದ ವತಿಯಿಂದ ಇಲ್ಲಿಯಬಸವಗಿರಿಯನಿಸರ್ಗದ ಮಡಿಲಲ್ಲಿ ಧಾರ್ಮಿಕ ವಿಧಿ ವಿಧಾನಗಳೊಂದಿಗೆ ಅಕ್ಕ ಅನ್ನಪೂರ್ಣತಾಯಿ ಅವರ ಪ್ರಥಮಸ್ಮರಣೋತ್ಸವಶುಕ್ರವಾರ ಆರಂಭಗೊಂಡಿತು.

ಮೊದಲಿಗೆ ಗುರುವಚನ ಪರುಷಕಟ್ಟೆಗೆತೆರಳಿ,ಪ್ರಭುದೇವ ಸ್ವಾಮೀಜಿಅವರಸಾನಿಧ್ಯದಲ್ಲಿ ಗುರುವಚನಗಳಿಗೆಪುಷ್ಪವೃಷ್ಟಿಗೈದು, ಗೌರವಸಮರ್ಪಿಸಲಾಯಿತು.

ಬಳಿಕಧಾರವಾಡದಬಸವ ಭಕ್ತ ಬಸವರಾಜ ಹಡಪದ ಅವರುಷ???ಸ್ಥಲಧ್ವಜಾರೋ–ಣಗೈದರು.ಧ್ವಜಗೀತೆಯನಂತರ ಶರಣ ಸಂಕುಲದಿಂದ ಬಸವ ಜಯಘೋಷಮೊಳಗಿದವು. ಅನಂತರ ಅಕ್ಕನವರ ಐಕ್ಯ ಮಂಟಪದಲ್ಲಿ ವಚನಗಳನ್ನು ಓದಿ,ಬಸವಮಂತ್ರಪಠಣಗೈದು, ಪುಷ್ಪಾರ್ಚನೆ ಮಾಡಿ ಭಕ್ತಿ ಸಮರ್ಪಣೆ ಮಾಡಲಾಯಿತು.

ಮಳೆರಾಯನಕೃಪೆಯಿಂದ ತಂಪಾದ ವಾತಾವರಣದಲ್ಲಿ ಕೋಗಿಲೆ,ನವಿಲುಗಳಶಬ್ದಗಳ ಮಧ್ಯೆ ವಚನ ಪಾರಾಯಣ ಸುಸೂತ್ರವಾಗಿ ನಡೆಯಿತು. ನೆರೆದವರಲ್ಲಿ ಭಕ್ತಿ ಉಕ್ಕಿಸಿತು.

**ಅಕ್ಕನಬಸವನಿಷ್ಠೆಅನುಕರಣೀಯ**

ಅಕ್ಕಅನ್ನಪೂರ್ಣತಾಯಿಬಸವ ತತ್ವಪ್ರಚಾರಕ್ಕೆತಮ್ಮ ಬದುಕು ಸಮರ್ಪಿಸಿಕೊಂಡಿದ್ದರು.ಅವರ ಬಸವ ನಿಷ್ಠೆ ಅನುಕರಣೀಯ ಎಂದು ಲಿಂಗಾಯತ ಮಹಾ ಮಠದ ಪ್ರಭುದೇವ ಸ್ವಾಮೀಜಿ ಹೇಳಿದರು.

ಇಲ್ಲಿಯ ಬಸವಗಿರಿಯಲ್ಲಿ ಅಕ್ಕ ಅನ್ನಪೂರ್ಣತಾಯಿ ಪ್ರಥಮ ಸ್ಮರಣೋತ್ಸವದ ಮೊದಲ ದಿನವಾದ ಶುಕ್ರವಾರ ನಡೆದ ಸಾಮೂಹಿಕ ವಚನ ಪಾರಾಯಣ ಹಾಗೂ ಅನುಭಾವ ಗೋಷ್ಠಿಯ ಸಾನಿಧ್ಯ ವಹಿಸಿ ಅವರು ಮಾತನಾಡಿದರು.

ನನಗೆ ಅಕ್ಕನವರು ಗುರುವಾಗಿದ್ದರೆ, ಅವರಿಗೆ ಬಸವಣ್ಣ ಗುರುವಾಗಿದ್ದರು. ಕಾರಣ,ಅಕ್ಕನವರಬೋಧನೆಗಳೇ ನನಗೆ ಬಸವಣ್ಣನವರ ಬೋಧನೆಗಳಾಗಿವೆ. ಅಕ್ಕ ನನಗೆ ಗುರುವಷ್ಟೇ ಅಲ್ಲ; ತಾಯಿಯಾಗಿಯೂಪೋಷಿಸಿದ್ದಾರೆ ಎಂದು ನೆನೆದರು.

ಭಕ್ತಿ ಇದ್ದಲ್ಲಿ ಶಕ್ತಿ ಇರುತ್ತದೆ. ಕೇವಲ ತತ್ವ ಅರಿತರೆ ಸಾಲದು. ಅದನ್ನು ಕಾರ್ಯರೂಪಕ್ಕೆ ತರಬೇಕು. ಆಗ ಮಾತ್ರ ಬದುಕು ಅರಳುತ್ತದೆ. ವಿಸ್ತಾರಗೊಳ್ಳುತ್ತದೆ ಎಂದು ತಿಳಿಸಿದರು.

ಚರಜಂಗಮ ಸಿದ್ರಾಮಪ್ಪ ಕಪಲಾಪುರೆ ಮಾತನಾಡಿ, ಅರಣ್ಯದಂತಿದ್ದ ಈ ನೆಲ ಅಕ್ಕನವರು ಪಾದವಿಟ್ಟಿದ್ದರಿಂದ ಬಸವಗಿರಿ ಆಯಿತು. ಪವಿತ್ರ ಕ್ಷೇತ್ರವಾಯಿತು. ಅಕ್ಕನವರು ಮನೆ ಮನೆಗಳ ಮೇಲೆ ಬಸವ ಧ್ವಜ ಹಾರಿಸುವುದು, ವಚನ ಓದುವುದು, ಬಸವ ಚರಿತ್ರೆ ಓದುವುದನ್ನು ಕಲಿಸಿ ಅನಿಷ್ಠ ಪದ್ಧತಿಗಳನ್ನುಹೊಡೆದೋಡಿಸಿದರು ಎಂದು ಹೇಳಿದರು.

ಇನ್ನೊಬ್ಬರ ನೋವು ನಲಿವುಗಳಿಗೆ ಸ್ಪಂದಿಸಿ ಧೈರ್ಯ ತುಂಬುತ್ತಿದ್ದ ಮಾತೃಸ್ವರೂಪಿ ಅಕ್ಕನನ್ನು ಕಳೆದುಕೊಂಡು ಸಮಾಜ ಬಡವಾಗಿದೆ ಎಂದು ತಿಳಿಸಿದರು.

ವಚನಗಳನ್ನು ಓದುವುದರಿಂದ ನಾಲಿಗೆ, ಕಿವಿ, ಹೃದಯವಷ್ಟೇ ಅಲ್ಲ;ಜೀವನವೂಶುದ್ಧವಾಗುತ್ತದೆ. 108 ವಚನಗಳನ್ನು ಓದಿದರೆ ಬದುಕಿನ ಹಲವು ಕಷ್ಟಗಳು ಪರಿಹಾರಗೊಳ್ಳುತ್ತವೆ ಎಂದರು.

ಅಕ್ಕನವರು ಹೆಣ್ಣುಮಕ್ಕಳಿಗೆ ಸ್ಫೂರ್ತಿಯಾಗಿದ್ದರು. ವಚನ ವೈಭವ ಅಕ್ಕನವರಿಂದ ಜಾರಿಯಾಯಿತು ಎಂದು ಭಾಲ್ಕಿ ಹಿರೇಮಠದ ಮಹಾಲಿಂಗ ಸ್ವಾಮೀಜಿ ಸ್ಮರಿಸಿದರು.

ವಚನಗಳನ್ನು ಓದಿ, ಅನುಷ್ಠಾನಿಸುವುದು ವಚನ ಪಾರಾಯಣದ ಉದ್ದೇಶ. ವಚನ ಪಾರಾಯಣದಿಂದ ಮಾತು ಮೌನವಾಗಿ ಅಪರಿಮಿತ ಆನಂದ ಲಭಿಸುತ್ತದೆ ಎಂದು ಪರುಷಕಟ್ಟೆಯ ಚನ್ನಬಸವಣ್ಣ ಹೇಳಿದರು.

ಇನ್ನೊಬ್ಬರಲ್ಲಿ ದೋಷ ಹುಡುಕುವುದನ್ನುಬಿಟ್ಟು,ತ್ಯಾಗ ಭಾವನೆ ಬೆಳೆಸಿಕೊಳ್ಳಬೇಕು. ಪರ ಚಿಂತೆ ನಮಗೇಕಯ್ಯ ಎಂಬ ಬಸವಾಣಿಯನ್ನು ಮರೆಯಬಾರದು. ಅಕ್ಕನವರು ಹೇಳಿದಂತೆ ಯಾವಾಗಲೂ ಸಕಾರಾತ್ಮಕ ಚಿಂತನೆಗಳನ್ನು ಮೈಗೂಡಿಸಿಕೊಳ್ಳಬೇಕು ಎಂದು ತಿಳಿಸಿದರು.

ಕಲ್ಪನಾ ಬೀದೆ ಅಕ್ಕನವರ ಜೀವನ ಹಾಗೂ ಸಂದೇಶಗಳನ್ನು ಬಣ್ಣಿಸುವ ಸ್ವರಚಿತ ಕವನ ವಾಚಿಸಿದರು.

ಕಲಬುರಗಿಯ ಪತಿಷ್ಠಾನದ ಅಧ್ಯಕ್ಷರಾಜಶೇಖರಯಂಕಂಚಿ, ಉದ್ಯಮಿಗಳಾದ ಚಂದ್ರಶೇಖರ ಹೆಬ್ಬಾಳೆ, ಜೈರಾಜ ಖಂಡ್ರೆ, ಹುಮನಾಬಾ???ನಮಲ್ಲಿಕಾರ್ಜುನ ರಟಕಲ್, ಸಾಹಿತಿ ರಮೇಶ ಮಠಪತಿ ಉಪಸ್ಥಿತರಿದ್ದರು.

ಚಂದ್ರಕಾಂತ ಪಟ್ನೆ, ಕಂಟೆಪ್ಪಗಂದಿಗುಡೆ,ರೇವಣಪ್ಪ ಮೂಲಗೆ ಹಾಗೂ ಮಹೇಶ ಬಿರಾದಾರತಂಡದವರವಚನ ಸಂಗೀತ ಗಮನ ಸೆಳೆಯಿತು. ಲಿಂಗಾಯತ ಸೇವಾ ದಳದ ಅಧ್ಯಕ್ಷ ಅಭಿಷೇಕ ಮಠಪತಿ ಸ್ವಾಗತಿಸಿದರು.ಸಿ.ಎಸ್.ಪಾಟೀಲ, ಅಣವೀರಕೂಡಂಬಲಶರಣು ಸಮರ್ಪಿಸಿದರು.

# 26ರಂದು ಔರಾದನಲ್ಲಿ ತಿರಂಗಾ ಯಾತ್ರೆ

## ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಿ: ಶಾಸಕ ಪ್ರಭು ಚವ್ಹಾಣ



ಮಲ್ಲಮ್ಮ ನುಡಿ ವಾರ್ತೆ

ಔರಾದ:ಮೇ.23:ಪಹಲ್ಗಾಮ್‌ನಲ್ಲಿ ನಡೆದ ಉಗ್ರರ ದಾಳಿಯ ಪ್ರತಿಕಾರವಾಗಿ ಭಾರತೀಯ ಸೇನೆ ನಡೆಸಿದ ಆಪರೇಷನ್ ಸಿಂಧೂರ್ ಕಾರ್ಯಾಚರಣೆ ಯಶಸ್ವಿಯಾದ ಹಿನ್ನೆಲೆಯಲ್ಲಿ ಔರಾದ(ಬಿ)ಪಟ್ಟಣದಲ್ಲಿಮೇ.26ರ ಬೆಳಗ್ಗೆ 9 ಗಂಟೆಗೆ ತಿರಂಗಾ ಯಾತ್ರೆ ಹಮ್ಮಿಕೊಳ್ಳಲಾಗಿದೆ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿಪಾಲ್ಗೊಳ್ಳಬೇಕೆಂದು ಮಾಜಿ ಸಚಿವರು ಹಾಗೂ ಔರಾದ(ಬಿ) ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ತಿಳಿಸಿದ್ದಾರೆ.

ಶಾಸಕರ ಕಛೇರಿಯ ಸಭಾಂಗಣದಲ್ಲಿಮೇ.22ರಂದು ಪೂರ್ವಭಾವಿ ಸಭೆ ನಡೆಸಿ ಮಾತನಾಡಿದ ಅವರು,ಔರಾದ ಪಟ್ಟಣದ ಪ್ರವಾಸಿ ಮಂದಿರದ ಹತ್ತಿರದಿಂದ ಯಾತ್ರೆಹೊರಟು ಪ್ರಮುಖ ರಸ್ತೆಗಳ ಮುಖಾಂತರ ಎಪಿಎಂಸಿ ವೃತ್ತದ ವರೆಗೆ ಬಂದು ಕೊನೆಗೊಳ್ಳಲಿದೆ ಎಂದು ಮಾಹಿತಿ ನೀಡಿದರು.

ದೇಶದಲ್ಲಿ ಶತೃರಾಷ್ಟ್ರದ ಪ್ರೇರಣೆಯಿಂದಉಗ್ರರುನಾಗರಿಕರ ಮೇಲೆ ನಡೆಸಿದ ಅಟ್ಟಹಾಸಕ್ಕೆ ದೇಶದ ಹೆಮ್ಮೆಯ ಸೈನಿಕರು ಸೇಡು ತೀರಿಸಿಕೊಂಡಿದ್ದಾರೆ. ಪ್ರತಿ ಸಾರಿ ದೇಶದಲ್ಲಿ ಅಶಾಂತಿ ಸೃಷ್ಟಿಸಲುಯತ್ನಿಸುವಪಾಕಿಸ್ತಾನಕ್ಕೆ ಉತ್ತಮ ಪಾಠ ಕಲಿಸಿಕೊಟ್ಟಿದ್ದಾರೆ. ನಮ್ಮ ಹೆಮ್ಮೆಯ ಸೈನಿಕರಿಗೆ ಗೌರವ ಸೂಚಿಸುವುದು ನಮ್ಮೆಲ್ಲರ ಕರ್ತವ್ಯ. ಹಾಗಾಗಿ ಔರಾದ್‌ನಲ್ಲಿಯೂ ತಿರಂಗಾ ಯಾತ್ರೆನಡೆಸಲಾಗುತ್ತಿದೆ. ಮಾಜಿ ಸೈನಿಕರು, ಮಠಾಧೀಶರು, ಹಿರಿಯ ನಾಗರಿಕರು, ಚಿಂತಕರು, ಸರ್ಕಾರಿ, ಖಾಸಗಿ ನೌಕರರು, ಸಂಘ ಸಂಸ್ಥೆಗಳ ಪದಾಧಿಕಾರಿಗಳು,ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಭಾಗವಹಿಸುವ ಮೂಲಕ ದೇಶಕ್ಕಾಗಿ ಹೋರಾಡುತ್ತಿರುವ ಭದ್ರತಾ ಪಡೆಗಳಿಗೆ ಗೌರವ ಸಲ್ಲಿಸೋಣ ಎಂದರು.

ಪ್ರಧಾನ ಮಂತ್ರಿಗಳಾದ ನರೇಂದ್ರ ಮೋದಿಯವರು ಅಧಿಕಾರಕ್ಕೆ ಬಂದ ಮೇಲೆ ಭಾರತೀಯ ಸೇನೆಗೆ ಹೆಚ್ಚಿನ ಶಕ್ತಿ ನೀಡಿದ್ದಾರೆ. ಉಗ್ರರು, ದೇಶವಿರೋಧಿಗಳ ವಿರುದ್ಧ ಕ್ರಮ ಕೈಗೊಳ್ಳಲು ಸಂಪೂರ್ಣ ಅಧಿಕಾರ ನೀಡಿದ್ದಾರೆ. ಇದ–ರಿಂದ ನಮ್ಮ ಸೇನೆ ಹೆಚ್ಚು ಬಲಿಷ್ಠವಾಗಿದೆ.ಪಾಕಿಸ್ತಾನದೊಳಗೆ ನುಗ್ಗಿ ಉಗ್ರರ ನೆಲೆಗಳನ್ನು ಧ್ವಂಸಗೊಳಿಸಿ ಉಗ್ರರಿಗೆ ರಕ್ಷಣೆ ಕೊಡುತ್ತಿರುವ ಪಾಕಿಸ್ತಾನಕ್ಕೆ ಚುರುಕು ಮುಟ್ಟಿಸಿದ್ದಾರೆ. ಈ ಮೂಲಕ ಭಾರತೀಯ ಸೇನೆಯ ಶಕ್ತಿಯನ್ನು ವಿಶ್ವಕ್ಕೆ ತೋರಿಸಿಕೊಟ್ಟಿದ್ದಾರೆ ಎಂದು ಹೇಳಿದರು.

ಈಸಂದರ್ಭದಲ್ಲಿಮುಖಂಡರಾದ ರಾಮಶೆಟ್ಟಿಪನ್ನಾಳೆ,ಧೊಂಡಿಬಾ ನರೋಟೆ,ಶಿವರಾಜ ಅಲ್ಮಾಜೆ, ಅರಹಂತ ಸಾವಳೆ, ರಾಮ ನರೋಟೆ, ಡಾ.ವೈಜಿನಾಥ ಬುಟ್ಟೆ, ಮಲ್ಲಿಕಾರ್ಜುನ ದಾನಾ,ಬಸವರಾಜ ಪಾಟೀಲ ಕಮಲನಗರ, ಮಹೇಶ್ವರ ಸ್ವಾಮಿ,ದೇವಾನಂದ ಪಾಟೀಲ, ರಾಜಕುಮಾರ ಸೋರಳ್ಳಿ,ಪ್ರಕಾಶ ಜೀರ್ಗೆ, ಬಂಟಿ ರಾಂಪೂರೆ ಸೇರಿದಂತೆ ಇತರರಿದ್ದರು.

## ಎಸ್ಸೆಸ್ಸೆಲ್ಸಿ ಮರು ಮೌಲ್ಯಮಾಪನ:ಖಡಕೇಶ್ವರ ಶಾಲೆಯ ವಿದ್ಯಾರ್ಥಿನಿ ಅಶ್ವಿತಾಗೆ 602 ಅಂಕ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಮೇ.23: ಇಲ್ಲಿಯ ಖಡಕೇಶ್ವರ ಪ್ರೌಢ ಶಾಲೆಯ ವಿದ್ಯಾರ್ಥಿನಿ ಅಶ್ವಿತಾ ಸುನಿಲ ಅವರು ಎಸ್ಸೆಸ್ಸೆಲ್ಸಿ ಮರುಮೌಲ್ಯಮಾಪನದಲ್ಲಿ 6 ಅಂಕ ಅಧಿಕ ಪಡೆದು ಶಾಲೆಯ ಪ್ರಥಮ ಸ್ಥಾನ ಕೊಂಡಿದ್ದಾರೆ.

596 ಅಂಕ ಗಳಿಸಿದ್ದ ಅಶ್ವಿತಾ ಶಿಕ್ಷಕರ ಸಲಹೆ ಮೇರೆಗೆ ಮರುಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸಿದ್ದರು. ಮರು ಮೌಲ್ಯಮಾಪನದ ವೇಳೆ ಸಮಾಜ ವಿಜ್ಞಾನದಲ್ಲಿ ಆರು ಅಧಿಕ ಅಂಕ ಗಳಿಸಿದ್ದರಿಂದ 602 ಅಂಕ ಗಳಿಸಿದ್ದಾರೆ ಎಂದು ಶಾಲೆಯ ಮುಖ್ಯಗುರು ಆನಂದ ಕಲ್ಯಾಣೆ ತಿಳಿಸಿದ್ದಾರೆ.

ಹರ್ಷ : ವಿದ್ಯಾರ್ಥಿಯ ಸಾಧನೆಗೆ ಸಂಸ್ಥೆಯ ಅಧ್ಯಕ್ಷ ಸುಧೀರ ನಾಯಕ, ಕೋಶಾಧ್ಯಕ್ಷ ಪ್ರಭುರಾವ ಧೂಪೆ, ನಿರ್ದೇಶಕ ಅಶೋಕ ಲೋಖಂಡೆ, ಮುಖ್ಯಗುರು ಆನಂದ ಕಲ್ಯಾಣೆ ಸೇರಿದಂತೆ ಸಿಬ್ಬಂದಿ ವರ್ಗದವರು ಹರ್ಷ ವ್ಯಕ್ತ ಪಡಿಸಿದ್ದಾರೆ.

## ಕಮಲನಗರ:ಭಯೋತ್ಪಾದನೆ ವಿರೋದಿ ದಿನ ಪ್ರಯುಕ್ತ ಪ್ರಮಾಣ ವಚನ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಮೇ.23: ಪಟ್ಟಣದಪೊಲೀಸಠಾಣೆಯಲ್ಲಿ ಬುಧವಾರ ಪ್ರಮಾಣ ವಚನ ಸ್ವೀಕಾರಕಾರ್ಯಕ್ರಮದೊಂದಿಗೆ "ಭಯೋತ್ಪಾದನೆ ವಿರೋಧಿ ದಿನ" ವನ್ನಾಗಿ ಆಚರಣೆ ಮಾಡಲಾಯಿತು.

ಈಸಂದರ್ಭದಲ್ಲಿಕಮಲನಗರ ವೃತ್ತ ನಿರೀಕ್ಷರಾದ ಅಮರಪ್ಪ ಶಿವಬಲ ಅವರು,

ಅಹಿಂಸೆ ಹಾಗೂ ಸಹನೆಗೆ ಹೆಸರಾದ ನಮ್ಮ ರಾಷ್ಟ್ರದ ಭವ್ಯ ಪರಂಪರೆಯಲ್ಲಿದೃಢವಿಶ್ವಾಸವುಳ್ಳ ಭಾರತದ ಪ್ರಜೆಗಳಾದ ನಾವು ಎಲ್ಲಾಬಗೆಯಭಯೋತ್ಪಾದನೆ ಮತ್ತು ಹಿಂಸೆಯನ್ನು ನಮ್ಮೆಲ್ಲ ಶಕ್ತಿ ಸಾಮರ್ಥ್ಯದಿಂದ ಎದುರಿಸುತ್ತೇವೆ ಎಂದು ಈ ಮೂಲಕ ಶ್ರದ್ಧಾಪೂರ್ವಕವಾಗಿ ಪ್ರತಿಜ್ಞೆ ಮಾಡುತ್ತೇವೆ. ನಮ್ಮ ಸಹಬಾಂಧವರಲ್ಲಿ ಶಾಂತಿ, ಸಾಮಾಜಿಕ ಸೌಹಾರ್ದತೆ ಮತ್ತು ಪರಸ್ಪರ ಅರಿವನ್ನು ಸಾಧಿಸಲು ಹಾಗೂ ಉತ್ತೇಜಿಸುವ ಕೂರಿತು ಪ್ರಮಾಣ ವಚನ ಮಾಡಿಸಿದರು. ಈಸಂದರ್ಭದಲ್ಲಿ ಪಿ.ಎಸ್.ಐ ಚಂದ್ರಶೇಖರ ಸೇರಿದಂತೆ ಪೊಲೀಸ ಸಿಬ್ಬಂದಿ ವರ್ಗದವರು ಇದ್ದರು.

# ಅನುಭಾವದಿಂದ ಮನಸ್ಸಿನ ವಿಕಾಸ :ಡಾ.ಬಸವಲಿಂಗ ಪಟ್ಟದ್ದೇವರು



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಮೇ.23: ಬಸವಾದಿ ಶರಣರುತಮ್ಮಅನುಭಾವದಿಂದ ಮನಸ್ಸಿನ ಮೈಲಿಗೆಯನ್ನು ತೊಳೆಯುವಕೆಲಸಮಾಡಿದರು. ಶರಣರು ಅರ್ಚನೆ, ಅರ್ಪಣೆ, ಅನುಭಾವಕ್ಕೆ ಬಹಳ ಮಹತ್ವ ನೀಡಿದರು. ನಾವು ಪ್ರತಿನಿತ್ಯ ಅರ್ಚನೆ, ಅರ್ಪಣೆ ಅನುಭಾವ ಮಾಡಿದರೆನಮ್ಮಮನಸ್ಸಿನಲ್ಲಿರುವ ವಿಕಾರಗಳನ್ನುನಾಶವಾಗುತ್ತದೆ ಎಂದು ಬಸವಕಲ್ಯಾಣ ಅನುಭವ ಮಂಟಪಟ್ರಸ್ಟ್ನಅಧ್ಯಕ್ಷನಾಡೋಜ ಡಾ.ಬಸವಲಿಂಗಪಟ್ಟದ್ದೇವರು ಹೇಳಿದರು.

ಪಟ್ಟಣದ ಚನ್ನಬಸವಾಶ್ರಮ ಪರಿಸರದಲ್ಲಿ ಹಿರೇಮಠ ಸಂಸ್ಥಾನದ ವತಿಯಿಂದ ಗುರುವಾರ ಆಯೋಜಿಸಿದ್ದ 311ನೆಯ ಮಾಸಿಕ ಶರಣ ಸಂಗಮ ಮತ್ತುಡಾ.ಜಿ.ಬಿ.ವಿಸಾಜಿ ಪ್ರತಿಭಾ ಪುರಸ್ಕಾರ ಸಮಾರಂಭದ ದಿವ್ಯ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.

ಕಷ್ಟ, ದುಃಖ, ಯಾತನೆಗಳು ದೂರವಾಗುತ್ತವೆ. ಅದಕ್ಕಾಗಿ ಶರಣರು ಅಯ್ಯ ನಿಮ್ಮ ಅನುಭಾವದಿಂದ ಎನ್ನ ತನು, ಮನ, ಭಾವ ಹಾಳಾಯಿತ್ತು ಎಂದು ಹೇಳುತ್ತಾರೆ. ಹಾಳಾಯಿತ್ತು ಎಂದರೆ ತನು, ಮನ, ಭಾವದಲ್ಲಿದ್ದ ವಿಕಾರಗಳನ್ನು ನಾಶವಾದವು ಎಂದು ಅರ್ಥವಾಗುತ್ತದೆ. ಬಸವಣ್ಣನವರು ಸ್ಥಾಪಿಸಿದ ಅನುಭವಮಂಟಪದಲ್ಲಿ ದೇಶ ವಿದೇಶದಿಂದ ಅನೇಕ ರಾಜ ಮಹಾರಾಜರು ಕಲ್ಯಾಣಕ್ಕಾಗಿ ಆಗಮಿಸಿದರು. ಅವರು ನಿಜವಾದ ಸುಖವನ್ನು ಅನುಭವಿಸಲು ಕಲ್ಯಾಣಕ್ಕೆ ಬಂದಿದ್ದರು. ಮನಸ್ಸಿನ ಸಮಾಧಾನವೇ ನಿಜವಾದ ಶ್ರೀಮಂತಿಕೆ, ನಿಜವಾದ ಸುಖವಾಗಿರುತ್ತದೆ. ಅದಕ್ಕಾಗಿ ಅಕ್ಕಮಹಾದೇವಿ ಹೇಳುವ ಹಾಗೆ ಲೋಕದಲ್ಲಿ ಹುಟ್ಟಿದ ಬಳಿಕ ಸ್ತುತಿ ನಿಂದೆಗಳು ಬಂದರೆ ಮನದಲ್ಲಿ ಕೋಪವ ತಾಳದೆ ಸಮಾಧಾನಿಯಾಗಿರಬೇಕು ಎಂಬ ಮಾತನ್ನು ನಿಜಜೀವನದಲ್ಲಿ ಅಳವಡಿಸಿಕೊಂಡರೆ ನಮ್ಮ ಜೀವನ ಸಾರ್ಥಕವಾಗುತ್ತದೆ ಎಂದು ತಿಳಿಸಿದರು.

ಸಂತಪೂರ ಜ್ಞಾನದಾಸೋಹ ಶಿಕ್ಷಣ ಟ್ರಸ್ಟ್ನ ಅಧ್ಯಕ್ಷ ಗುರುನಾಥ ದೇಶಮುಖ ಕಾರ್ಯಕ್ರಮ ಉದ್ಘಾಟಿಸಿದರು. ಹಾನಗಲ್ ಕುಮಾರೇಶ್ವರ ಪ್ರಸಾದ ನಿಲಯದ ಮೇಲ್ವಿಚಾರಕ ಶಿವಾನಂದ ಕತ್ತೆ ಗ್ರಂಥ ಪಠಿಸಿದರು.

ಪ್ರತಿಭಾ ಪುರಸ್ಕಾರ

ಎಸ್ಸೆಸ್ಸೆಲ್ಸಿಯಲ್ಲಿ ಕನ್ನಡ ಮಾಧ್ಯಮದಲ್ಲಿ ಅತಿಹೆಚ್ಚು ಅಂಕ ಗಳಿಸಿದ ಸಂತಪೂರ ಜ್ಞಾನಭಾರತಿ ಪ್ರೌಢ ಶಾಲೆಯ ವಿದ್ಯಾರ್ಥಿ ಕುಮಾರ ಆದರ್ಶ ವಿಠಲರಾವ ಚಟ್ನಾಳ ಅವರನ್ನು ಡಾ.ಜಿ.ಬಿ.ವಿಸಾಜಿ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು. ಪ್ರಶಸ್ತಿ ದಾಸೋಹಿ ಶಾಂತಯ್ಯ ಸ್ವಾಮಿ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಿದರು.

ಸನ್ಮಾನ

ಇದೇವೇಳೆ ಬಾಬುರಾವ ದಾನಿ, ಆಶಾ ರಾಠೋಡ, ಪ್ರಭುರಾವ ಸಾವಳೆ, ವಿಜಯಕುಮಾರ ಪರ್ಮಾ ಅವರನ್ನುಶ್ರೀಮಠದವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು. ಬಸವಶ್ರೀ ಬಸವರಾಜ ಮಾಳಗೆ ಅವರಿಂದ ಭಕ್ತಿದಾಸೋಹ ನಡೆಯಿತು. ದೀಪಕ ಠಮಕೆ ನಿರೂಪಿಸಿದರು. ಚನ್ನಪ್ಪ ಅಳಸೂರು, ಈರಣ್ಣ ಹೂಗಾರ, ಸುದರ್ಶನ ರಾಠೋಡ, ಧನರಾಜ ದಾಡಗಿ ಅವರು ವಚನಸಂಗೀತನಡೆಸಿಕೊಟ್ಟರು.

## ಗ್ಯಾರಂಟಿ ಸರ್ಕಾರಕ್ಕೆ ಎರಡು ವರ್ಷದ ಸಂಭ್ರಮ: ಮಹಿಳೆಯರ ಸ್ವಾವಲಂಬಿ ಬದುಕಿಗೆ "ಗೃಹ ಲಕ್ಷ್ಮೀ" ಆಸರೆ



ನಾಡಿನ ಜನರ ಒಳಿತಿಗೆ ಮತ್ತವರ ಸುಸ್ಥಿರ ಪ್ರಗತಿಗಾಗಿ ರಾಜ್ಯ ಸರ್ಕಾರ ಜಾರಿಗೆ ತಂದಿರುವ ಪಂಚ ಗ್ಯಾರಂಟಿ ಯೋಜನೆಗಳಲ್ಲಿ "ಗೃಹ ಲಕ್ಷ್ಮೀ" ಯೋಜನೆ ಅತ್ಯಂತ ಜನಪ್ರಿಯವಾಗಿದ್ದು, ಮಹಿಳಾ ಸಬಲೀಕರಣಕ್ಕೆ ದಿಟ್ಟ ಹೆಜ್ಜೆ ಎಂದೇ ವ್ಯಾಖ್ಯಾನಿಸಲಾಗುತ್ತಿದೆ.

ಸಮಾಜವಾದಿ, ಸಮತಾ ಭಾವನೆ ಹೊಂದಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಶತಶತಮಾನದಿಂದ ಬಂದಿರುವ ಲಿಂಗ ಅಸಮಾನತೆಯನ್ನು ಹೋಗಲಾಡಿಸಬೇಕು. ಪುರುಷರಂತೆ ಮಹಿಳೆಯು ಸಮಾಜದಲ್ಲಿ ಸಮಾನವಾಗಿ ಬೆಳೆಯಬೇಕು. ಮಹಿಳೆಯರು ಆರ್ಥಿಕವಾಗಿ ಸದೃಢರಾಗಬೇಕೆಂಬ ಸದುದ್ದೇಶದಿಂದ ಮಹಿಳೆಯರಿಗೆ ಆರ್ಥಿಕ ಶಕ್ತಿ ತುಂಬಲು ರಾಜ್ಯದ ಪಡಿತರ ಚೀಟಿಯ ಯಜಮಾನಿಗೆ ಪ್ರತಿ ಮಾಹೆ 2,000 ರೂ. ಹಣ ನೀಡುವ ಯೋಜನೆ ಜಾರಿಗೊಳಿಸಿದ್ದು, ಇದು ಮಹಿಳೆಯರಿಗೆ ಆರ್ಥಿಕ ಸ್ವಾತಂತ್ರ್ಯ ದೊರಕಿದಂತಾಗಿದೆ.

ಗೃಹ ಲಕ್ಷ್ಮೀ ಯೋಜನೆಯಡಿ ಮಾಸಿಕ ಬರುವ 2,000 ರೂ. ಹಣ ಕೂಡಿಟ್ಟು ಹಲವಾರು ಮಹಿಳೆಯರು ಸ್ವಯಂ ಉದ್ಯೋಗ ಮಾಡಲು ಕಾರಣವಾಗಿದೆ. ಬಟ್ಟೆ ಅಂಗಡಿ, ಕಿರಾಣಿ ಶಾಪ್, ಹೊಲಿಗೆ ಯಂತ್ರ ಖರೀದಿ, ಹಿಟ್ಟಿನ ಗಿರಣಿ ತೆರೆಯಲು ನೆರವಾಗಿದೆ. ಮನೆಯ ಖರ್ಚು, ಮಕ್ಕಳ ವಿದ್ಯಾಭ್ಯಾಸ, ಹುಷಾರಿಲ್ಲದಾಗ ಆಸ್ಪತ್ರೆ ವೆಚ್ಚ ಹೀಗೆ ಎಲ್ಲದಕ್ಕೂ ಕುಟುಂಬದ ನಿರ್ವಹಣೆಗೆ ಹಣ ಬಳಕೆಯಾಗುತ್ತಿದೆ.

ಟಿ.ವಿ., ಫ್ರೀಜ್, ಗೃಹಪಯೋಗಿ ವಸ್ತುಗಳ ಖರೀದಿ ಒಂದೆಡೆಯಾದರೆ, ಸಾಲ ಮರುಪಾವತಿ, ಅಡವಿಟ್ಟ ಚಿನ್ನಾಭರಣಗಳ ವಾಪಸ್ ಮತ್ತು ಖರೀದಿಗೂ ಸಹಕಾರಿಯಾಗಿದೆ. ಸ್ವಾವಲಂಬನೆಯ ಹಾದಿಗೆ ಈ ಯೋಜನೆ ಮೆಟ್ಟಿಲಾಗಿದ್ದು, ಆರ್ಥಿಕ ಅಸಮಾನತೆ ಹೋಗಿ, ಮುಖ್ಯವಾಹಿನಿಗೆ ಸರ್ವರೂ ಬರುವಂತಾಗಲು ಕಾರಣವಾಗುತ್ತಿದೆ. ಒಟ್ಟಿನಲ್ಲಿ ಬಡ ಕುಟುಂಬಗಳ ಮಹಿಳೆಯರ ಮುಖದಲ್ಲಿ ಮಂದಹಾಸ ಮೂಡಿಸಿದೆ.

5.58 ಲಕ್ಷ ಜನರಿಗೆ 1,828.70 ಕೋಟಿ ರೂ. ಪಾವತಿ: ಕಲಬುರಗಿ ಜಿಲ್ಲೆಯಲ್ಲಿ ಕಳೆದ ಎರಡು ವರ್ಷದ ಅವಧಿಯಲ್ಲಿ "ಗೃಹ ಲಕ್ಷ್ಮೀ" ಯೋಜನೆಯಡಿ 5,75,422 ಜನ ನೋಂದಣಿ ಮಾಡಿಕೊಂಡಿದ್ದು, ಇದರಲ್ಲಿ ಅರ್ಹರಾದ 5,58,364 ಫಲಾನುಭವಿಗಳಿಗೆ ಜನವರಿ-2025ರ ಅಂತ್ಯದ ವರೆಗೆ 1,828.70 ಕೋಟಿ ರೂ. ಡಿ.ಬಿ.ಟಿ. ಮೂಲಕ ಹಣ ಪಾವತಿಸಿದೆ. ಅಫಜಲಪೂರ ತಾಲೂಕಿನಲ್ಲಿ 49,181, ಆಳಂದ-67,029, ಚಿಂಚೋಳಿ-60,524, ಚಿತ್ತಾಪೂರ-64,322, ಕಲಬುರಗಿ-1,52,131, ಜೇವರ್ಗಿ-43,626, ಸೇಡಂ-44,565, ಶಹಾಬಾದ-7,913, ಕಾಳಗಿ-17,499, ಯಡ್ರಾಮಿ-25,499 ಹಾಗೂ ಕಮಲಾಪೂರ ತಾಲೂಕಿನಲ್ಲಿ 26,074 ಜನ ಲಾಭ ಪಡೆಯುತ್ತಿದ್ದಾರೆ. ಇನ್ನು ಫೆಬ್ರವರಿ-2025ರ ಮಾಹೆಯ ಡಿ.ಬಿ.ಟಿ. ಹಣ ಪುಶ್ ಮಾಡುವ ಪ್ರಕ್ರಿಯೆ ಜಾರಿಯಲ್ಲಿದ್ದು, ಕೆಲವರಿಗೆ ಈಗಾಗಲೆ ಪಾವತಿಯಾಗಿದೆ. ಇನ್ನುಳಿದವರಿಗೆ ಪಾವತಿ ಪ್ರಕ್ರಿಯೆ ಜಾರಿಯಲ್ಲಿದೆ ಎನ್ನುತ್ತಾರೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ರಾಜಕುಮಾರ ರಾಠೋಡ ಅವರು.

ಹಣ ಕೂಡಿಟ್ಟು, ಶಾವಿಗೆ ಯಂತ್ರ ಖರೀದಿ: ಕಲಬುರಗಿ ತಾಲೂಕಿನ ಫರತಾಬಾದ ವಲಯದ ಕವಲಗಾ (ಬಿ) ಗ್ರಾಮದ ಗುರುಬಾಯಿ ಭೀಮಣ್ಣ ಇವರು ಪ್ರತಿ ಮಾಹೆ ಬರುವ 2,000 ರೂ. ಹಣ ಕೂಡಿಟ್ಟು ಶಾವಿಗೆ ಯಂತ್ರ ಖರೀದಿಸಿ ಸ್ವಯಂ ಉದ್ಯೋಗ ಮಾಡುವ ಮೂಲಕ ಇತರೆ ಮಹಿಳೆಯರಿಗೆ ಮಾದರಿಯಾಗಿದ್ದಾರೆ. "ಗೃಹ ಲಕ್ಷ್ಮೀ" ದುಡ್ಡಿನ ಜೊತೆಗೆ ಇನ್ನಿಷ್ಟು ಹಣ ಸೇರಿಸಿ 53,000 ರೂ. ವೆಚ್ಚದಲ್ಲಿ ಒಂದು ಶಾವಿಗೆ ಯಂತ್ರ ಖರೀದಿ ಮಾಡಿದ್ದೇನೆ. ಶಾವಿಗೆ ತಯ್ಯಾರಿಸಿ ಮಾರಾಟ ಮಾಡಿ ಬಂದ ಹಣದಿಂದ ಮಕ್ಕಳ ಶಿಕ್ಷಣ ಹಾಗೂ ಕುಟುಂಬ ನಿರ್ವಹಣೆಗೆ ಬಳಸುತ್ತಿರುವೆ. ಗ್ರಾಹಕರಿಂದಲು ಉತ್ತಮ ಸ್ಪಂದನೆ ವ್ಯಕ್ತವಾಗಿದೆ. ಯೋಜನೆ ಸ್ವಾವಲಂಬಿಯಾಗಿ ಬದುಕಲು ಹೇಳಿಕೊಟ್ಟಿದೆ ಎಂದು ಗುರುಬಾಯಿ ಹರ್ಷದಿಂದ ನುಡಿತ್ತಾರೆ.

ಬಟ್ಟೆ ವ್ಯಾಪಾರ ಪುನರಾರಂಭಿಸಿದ ವೃದ್ಧೆ: ಕಳೆದ ಹಲವಾರು ವರ್ಷಗಳಿಂದ ಮನೆಯಲ್ಲಿಯೆ ಬಟ್ಟೆ ವ್ಯಾಪಾರ ಮಾಡಿಕೊಂಡಿದ್ದ ಕಲಬುರಗಿ ಜಿಲ್ಲೆಯ ಚಿತ್ತಾಪುರ ತಾಲೂಕಿನ ದಂಡೋತಿ ಗ್ರಾಮದ ಸುಶೀಲಾಬಾಯಿ ಗಂಡ ದಿ. ಶಿವರಾಯ ಇವರು ಎರಡು ವರ್ಷಗಳ ಹಿಂದೆ ತಮ್ಮ ಪತಿ ವಯೋಸಹಜ ಕಾಯಿಲೆಯಿಂದ ನಿಧನರಾದ ಕಾರಣ ವ್ಯಾಪಾರ ಸ್ಥಗಿತ ಮಾಡಿದ್ದರು. 2023ರಲ್ಲಿ "ಗೃಹ ಲಕ್ಷ್ಮೀ" ಯೋಜನೆ ಜಾರಿಯಾದ ಪರಿಣಾಮ 2,000 ರೂ. ಬರುತ್ತಿದ್ದರಿಂದ ಮತ್ತೆ ಬಟ್ಟೆ ವ್ಯಾಪಾರ ಆರಂಭಿಸಿದ್ದು, ಸುಶೀಲಾಬಾಯಿ ಅವರಿಗೆ ಬದುಕಿನಲ್ಲಿ ಹೊಸ ಭರವಸೆ ಮೂಡಿಸಿದೆ.

-ರವಿ ಮಿರಸ್ಕರ್
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ಕಲಬುರಗಿ

## ಸಿಎಂಎಂ ಶಿಕ್ಷಣ ಮಹಾವಿದ್ಯಾಲಯದಲ್ಲಿ ಭಯೋತ್ಪಾದನಾ ವಿರೋಧಿ ದಿನದ ಪ್ರಮಾಣ ವಚನ.



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :- ಮೆ 23 ನಗರದ ಸಿ. ಎಂ. ಎಂ. ಶಿಕ್ಷಣ ಮಹಾವಿದ್ಯಾಲಯದಲ್ಲಿ ಭಯೋತ್ಪಾದನಾ ವಿರೋಧಿ ದಿನದ ಪ್ರಮಾಣ ವಚನ ಜರುಗಿತು.

ಅಹಿಂಸೆ ಹಾಗೂ ಸಹನೆಗೆ ಹೆಸರಾದ ನಮ್ಮ ರಾಷ್ಟ್ರದ ಭವ್ಯ ಪರಂಪರೆಯಲ್ಲಿ ದೃಢ ವಿಶ್ವಾಸವುಳ್ಳ ಭಾರತದ ಪ್ರಜೆಗಳಾದ ನಾವು ಎಲ್ಲಾ ಬಗೆಯ ಭಯೋತ್ಪಾದನೆ ಮತ್ತು ಹಿಂಸೆಯನ್ನು ನಮ್ಮೆಲ್ಲ ಶಕ್ತಿ ಸಾಮರ್ಥ್ಯದಿಂದ ಎದುರಿಸುತ್ತೇವೆ ಎಂದು ಈ ಮೂಲಕ ಶ್ರದ್ಧಾಪೂರ್ವಕವಾಗಿ ಪ್ರತಿಜ್ಞೆ ಮಾಡುತ್ತೇವೆ.

ನಮ್ಮ ಸಹಬಾಂಧವರಲ್ಲಿ ಶಾಂತಿ, ಸಾಮಾಜಿಕ ಸೌಹಾರ್ದತೆ ಮತ್ತು ಪರಸ್ಪರ ಅರಿವನ್ನು ಸಾಧಿಸಲು ಹಾಗೂ ಉತ್ತೇಜಿಸಲು ಮತ್ತು ಮಾನವ ಜೀವಕ್ಕೆ ಹಾಗೂ ಮೌಲ್ಯಗಳಿಗೆ ಬೆದರಿಕೆ ಒಡ್ಡುತ್ತಿರುವ ವಿಚ್ಛಿದ್ರಕಾರಿ ಶಕ್ತಿಗಳ ವಿರುದ್ಧ ಹೋರಾಡಲು ನಾವು ಪಣ ತೊಡುತ್ತೇವೆ. ಬಿ ಇಡಿ ಕಾಲೇಜಿನ ಪ್ರಾಂಶುಪಾಲರಾದ ರಾಣಿಮಾಡಿ ಬೆಂಡೆ. ಬಿ.ಇಡಿ ಪ್ರಥಮ ಮತ್ತು ತ್ರತೀಯ ಸೆಮಿಸ್ಟರನ ಪ್ರಶಿಕ್ಷಣಾರ್ಥಿಗಳು ಭಾಗವಹಿಸಿದರು.

## 27 ರಂದು ಬಾದಮಿ ಅಮಾವಾಸ್ಯೆ ಚಿಂತನಾ ಗೋಷ್ಠಿ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ, ಮೇ.23: ಬಾದಮಿ ಅಮಾವಾಸ್ಯೆ ನಿಮಿತ್ತ ಮೇ.27 ರಂದು ಜಿಲ್ಲೆಯ ವಿವಿಧ ಮಠಗಳಲ್ಲಿ ಶಿವಾನುಭವ ಚಿಂತನಾ ಗೋಷ್ಠಿ ಜರುಗಲಿದೆ. ಅಂದು ಅಬ್ಬೇತುಮಕೂರಿನ ವಿಶ್ವರಾಧ್ಯ ಮಠದಲ್ಲಿ ರಾತ್ರಿ 8.30ಕ್ಕೆ 481ನೇ ಶಿವಾನುಭವ ಗೋಷ್ಠಿ ನಡೆಯಲಿದೆ.

ಡಾ.ಗಂಗಾಧರ ಸ್ವಾಮೀಜಿ ಅಧ್ಯಕ್ಷತೆ ವಹಿಸಿ ಧಾರ್ಮಿಕ ವಿಷಯದ ಕುರಿತು ಉಪನ್ಯಾಸ ನೀಡಲಿದ್ದಾರೆ. ಜೇವರಗಿ ತಾಲೂಕಿನ ಶಾಖಾಪೂರ ವಿಶ್ವರಾಧ್ಯ ತಪೋವನ ಮಠದಲ್ಲಿ ರಾತ್ರಿ 8ಕ್ಕೆ 371ನೇ ಗೋಷ್ಠಿ ನಡೆಯಲಿದೆ. ಡಾ. ಸಿದ್ದರಾಮ ಶಿವಾಚಾರ್ಯರು ಅಧ್ಯಕ್ಷತೆ ವಹಿಸಿ ಪ್ರವಚನ ನೀಡಲಿದ್ದಾರೆ. ಕಲಬುರಗಿ ತಾಲೂಕಿನ ಶ್ರೀನಿವಾಸ ಸರಡಗಿಯ ಚಿಕ್ಕವಿರೇಶ್ವರ ಹಿರೇಮಠ ಸಂಸ್ಥಾನದಲ್ಲಿ ರಾತ್ರಿ 8ಕ್ಕೆ 316ನೇ ಗೋಷ್ಠಿ ನಡೆಯಲಿದೆ. ಡಾ. ರೇವಣಸಿದ್ಧ ಶಿವಾಚಾರ್ಯರು ನೇತೃತ್ವ ವಹಿಸಲಿದ್ದಾರೆ. ಯಾದಗಿರಿ ಜಿಲ್ಲೆಯ ಶಹಾಪೂರ ತಾಲೂಕಿನ ಅಪ್ಪನ ಶಾಖಾ ಮಠದಲ್ಲಿ ಜೂನ 1 ರಂದು ರಾತ್ರಿ 8.50ಕ್ಕೆ 298ನೇ ಶಿವಾನುಭವ ಗೋಷ್ಠಿ ನಡೆಯಲಿದೆ. ಅಬ್ಬೇತುಮಕೂರ ಮಠದ ಡಾ.ಗಂಗಾಧರ ಸ್ವಾಮೀಜಿರವರು ಅಧ್ಯಕ್ಷತೆ ವಹಿಸಿ ಆಶೀರ್ವಚನ ನೀಡಲಿದ್ದಾರೆ ಎಂದು ವಿಶ್ವರಾಧ್ಯ ಸೇವಾ ಸಮಿತಿ ನಗರ ಘಟಕದ ವಕ್ತಾರ, ಸಂಘಟನಾ ಕಾರ್ಯದರ್ಶಿ ಬಸವರಾಜ ಶೀಲವಂತ ಅವರು ತಿಳಿಸಿದ್ದಾರೆ.

## ಬೀದರ, ಕಲಬುರ್ಗಿ ಜಿಲ್ಲೆಯ ಪ್ರವಾಸ ಮಾಜಿ ಸಚಿವ ಎಚ್.ಆಂಜನೇಯಗೆ ಅದ್ದೂರಿ ಸನ್ಮಾನ



ಮಲ್ಲಮ್ಮ ನುಡಿ ವಾರ್ತೆ

ಹುಮ್ನಾಬಾದ.ಮೆ.23: ಶುಕ್ರವಾರ ಒಳ ಮೀಸಲಾತಿ ಜಾಗ್ರತಿ ಮಾಡಲು ಬೀದರ ಜಿಲ್ಲೆಗೆ ಆಗಮಿಸಿದ ಕೆ.ಪಿ.ಸಿ.ಸಿ. ಉಪಾಧ್ಯಕ್ಷರು ಹಾಗೂ ಸಮಾಜ ಕಲ್ಯಾಣ ಇಲಾಖೆಯ ಮಾಜಿ ಸಚಿವ ಎಚ್.ಆಂಜನೇಯ ಅವರು ಪಟ್ಟಣದ ಪ್ರವಾಸಿ ಮಂದಿರದಲ್ಲಿ ಮಾದಿಗ ಸಮಾಜದ ಒಳ ಮೀಸಲಾತಿ ಕುರಿತು ಸಮೀಕ್ಷೆಯಲ್ಲಿ ಕ್ರ.ಸಂ.61 ಎಂದು ಬರಿಯಿರಿ ಎಂದು ತಿಳುವಳಿಕೆ ಬಗ್ಗೆ ಮಾಹಿತಿ ನೀಡುವ ಮೂಲಕ ಮಾತನಾಡಿ " ಮಾದಿಗ " ಎಂದು ಬರಿಯಿಸಿ ಎಂದು ಹೇಳಿದರು. ಈ ಸಂದರ್ಭದಲ್ಲಿ ಹುಮ್ನಾಬಾದ ತಾಲೂಕಾ ಮಾದಿಗ ಸಮಾಜದ ಮುಖಂಡರಾದ ಅಶೋಕ ಕಟ್ಟಿ. ಜೈರಾಜ ಸದಲಾಪೂರೆ. ಜೈರಾಜ್ ವೈದ್ಯ. ವೈಜಿನಾಥ ಡಾಂಗೆ. ವಕೀಲರಾದ ವಿಜಯಕುಮಾರ್ ನಾತೆ. ಹುಮ್ನಾಬಾದ ಪುರಸಭೆ ಸದಸ್ಯರಾದ ಅಮರನಾಥ ಧುಮ್ಮನಸೂರ. ಸುನೀಲ್ ಚೀಟ್ಟೆ. ಜ್ಞಾನದೇವ ಭಾಜಿ ಭೀಮಶಾ ಎಲ್.ಹೇಗಡೆ. ದಸರಥ ಆರ್ಯ. ಬಸವಕಲ್ಯಾಣ ಯುವರಾಜ ಬೆಂಡೆ. ಹರಿಹರ ಗೋಖಲೆ. ರಾಜು ಮೇತ್ರೆ ಬೆನಚಿಂಚೋಳಿ. ರಾಹುಲ್ ಓತಗಿ. ಅಜಯಕುಮಾರ ವಾಡಿ ಉಪಸ್ಥಿತರಿದ್ದರು.

## ಮೈಸೂರು: ಡಿಪ್ಲೋಮಾ ಕೋರ್ಸುಗಳ ಪ್ರವೇಶಾತಿಗಾಗಿ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬೀದರ:ಮೇ.23:-ಮೈಸೂರಿನಲ್ಲಿ ವಿಶೇಷಚೇತನರಿಗೆ ಡಿಪ್ಲೋಮಾ ಮಟ್ಟದಲ್ಲಿ ತಾಂತ್ರಿಕ ಶಿಕ್ಷಣ ಸೌಲಭ್ಯ ಕಲ್ಪಿಸುವ ಸುದ್ದೇಶದಿಂದ ಜೆಎಸ್‌ಎಸ್ ವಿಶೇಷಚೇತನರ ಪಾಲಿಟೆಕ್ನಿಕ್ ಸ್ಥಾಪನೆ ಮಾಡಿದ್ದು, 2025-26ನೇ ಸಾಲಿಗೆ ಮೂರು ವರ್ಷಗಳ ಅವಧಿಯ ಡಿಪ್ಲೋಮಾ ಕೋರ್ಸುಗಳ ಪ್ರವೇಶಕ್ಕೆ (ಅಖಿಲ ಭಾರತ ಮಟ್ಟದಲ್ಲಿ) ವಿಶೇಷಚೇತನ ವಿದ್ಯಾರ್ಥಿ/ವಿದ್ಯಾರ್ಥಿನಿಯರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ ಎಂದು ಮೈಸೂರು ಜೆಎಸ್‌ಎಸ್ ವಿಶೇಷಚೇತನರ ಪಾಲಿಟೆಕ್ನಿಕ್ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅನುದಾನಿತ ಕೋರ್ಸುಗಳ ವಿವರ: ಆರ್ಕಿಟೆಕ್ಚರ್ ಅಸಿಸ್ಟೆಂಟ್‌ಷಿಪ್, ಕಮರ್ಷಿಯಲ್ ಪ್ರಾಕ್ಟೀಸ್, ಕಂಪ್ಯೂಟರ್ ಸೈನ್ಸ್ ಮತ್ತು ಇಂಜಿನಿಯರಿಂಗ.

ಅನುದಾನ ರಹಿತ ಕೋರ್ಸುಗಳ ವಿವರ: ಜ್ಯುಯಲರಿ ಡಿಸೈನ್ ಮತ್ತು ಟೆಕ್ನಾಲಜಿ, ಎಲೆಕ್ಟ್ರಾನಿಕ್ಸ್ ಮತ್ತು ಕಮ್ಯುನಿಕೇಷನ್ ಇಂಜಿನಿಯರಿಂಗ್, ಕಂಪ್ಯೂಟರ್ ಅಪ್ಲಿಕೇಷನ್ಸ್, ಅಪಾರೇಲ್ ಡಿಸೈನ್ ಮತ್ತು ಫ್ಯಾಬ್ರಿಕೇಷನ್ ಟೆಕ್ನಾಲಾಜಿ, ಎಲೆಕ್ಟ್ರಿಕಲ್ ಇಂಜಿನಿಯರಿಂಗ್ ಮತ್ತು ಎಲೆಕ್ಟ್ರಿಕ್ ವೆಹಿಕಲ್ ಟೆಕ್ನಾಲಜಿ.

ಅರ್ಜಿಗಳನ್ನು ಜೆಎಸ್‌ಎಸ್ ವಿಶೇಷಚೇತನರ ಪಾಲಿಟೆಕ್ನಿಕ್, ಜೆಎಸ್‌ಎಸ್ ತಾಂತ್ರಿಕ ಶಿಕ್ಷಣ ಸಂಸ್ಥೆಗಳ ಸಮುಚ್ಛಯ, ಮೈಸೂರು-570006 ವಿಳಾಸದಿಂದ (ಸಾಮಾನ್ಯವರ್ಗದ ಅಭ್ಯರ್ಥಿಗಳು 100 ರೂ. SC/ST/C-I ವರ್ಗದವರಿಗೆರ 50 ರೂ.) ನಗದು ಅಥವಾ ಡಿಡಿ ಮೂಲಕ ಮೈಸೂರಿನಲ್ಲಿ ಸಂದಾಯವಾಗುವಂತೆ ಕಳುಹಿಸಿ ಪಡೆಯಬಹುದು ಅಥವಾ ವೆಬ್‌ಸೈಟ್ ಮೂಲಕ ಡೌನಲೋಡ ಮಾಡಿಕೊಂಡು ಭರ್ತಿ ಮಾಡಿದ ಅರ್ಜಿಗಳನ್ನು ದಿನಾಂಕ:16-06-2025 ರೊಳಗೆ ತಲುಪಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ವೆಬ್‌ಸೈಟ್ www.jsspda.org ಅಥವಾ ಮೊಬೈಲ್: 9844644937 ಮೂಲಕ ಸಂಪರ್ಕಿಸ ಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

## ರಾಜ್ಯದಲ್ಲಿ 30 ವರ್ಷಗಳಿಂದ ಮೀಸಲಾತಿ ಸಿಗುತ್ತಿಲ್ಲ. ಮಾದಿಗ ಸಮಾಜಕ್ಕೆ




ಮಲ್ಲಮ್ಮ ನುಡಿ ವಾರ್ತೆ

ಕಲ್ಬುರ್ಗಿ..ಸರಕಾರದ ಯೋಜನೆಗಳಿಂದ ವಂಚಿತರಾಗಿರುವ ಮಾದಿಗ ಸಮಾಜ, ಜಾತಿಗಳೊಂದಿಗೆ ಹೋರಾಟ ಮಾಡಿ ಸೌಲಭ್ಯ ಪಡೆಯುವ ಪರಿಸ್ಥಿತಿ ಉಂಟಾಗಿದೆ ಹಾಗಾಗಿ ಸಮುದಾಯದ ಯಾರೊಬ್ಬರು ಸಹ ಜಾತಿಜನ ಗಣತಿಯಿಂದ ಹೊರಗುಳಿಯಬಾರದು ಎಂದು ಮಾಜಿ ಸಚಿವ ಎಚ್. ಆಂಜನೇಯ ಮನವಿ ಮಾಡಿದರು.

ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡುತ್ತಿದ್ದ ಅವರು, ಸುಪ್ರೀಂ ಕೋರ್ಟ್ ಒಳಮಿಸಲಾತಿ ಮಾಡುವ ಅಧಿಕಾರ ನೀಡುವ ಅಧಿಕಾರ ರಾಜ್ಯ ಸರಕಾರಗಳಿಗೆ ಇದೆ ಇಡಿ ಐತಿಹಾಸಿಕ ತೀರ್ಪು ನೀಡಿತ್ತು. ಇದನ್ನು ಸಿಎಂ ಸಿದ್ದರಾಮಯ್ಯ ಅವರು ರಾಜ್ಯದಲ್ಲಿ ಜಾರಿಗೆ ತರಲು ಬದ್ಧರಾಗಿದ್ದಾರೆ. ರಾಜ್ಯದಲ್ಲಿ ಖಾಲಿಯಿರುವ ಹುದ್ದೆ, ಬ್ಯಾಕ್ ಲಾಗ್ ಹುದ್ದೆ ಒಳಮಿಸಲಾತಿ ಬಳಿಕ ತುಂಬುವ ಭರವಸೆ ನೀಡಿದ್ದಾರೆ ಎಂದು ತಿಳಿಸಿದರು. ಮೇ 5 ರಿಂದ ಜಾತಿ ಸರ್ವೆ ಪ್ರಾರಂಭವಾಗಿದ್ದು, ಮೇ 17 ಕೊನೆ ಯಾಗಿತ್ತು. ಆದರೆ, ಸಮೀಕ್ಷೆ ಪೂರ್ಣಗೊಳ್ಳದ ಹಿನ್ನಲೆ 28 ವರೆಗೆ ಆನ್ಲೈನ್ ಮೂಲಕ ವಿಸ್ತರಣೆ ಮಾಡಲಾಗಿದೆ. ಆಯೋಗ ಪಾರದರ್ಶಕ ಸಮೀಕ್ಷೆ ಮಾಡಬೇಕು. ಯಾರಿಗೆ ಸೌಲಭ್ಯ ಸಿಕ್ಕಿಲ್ಲ ಅವರನ್ನೆಲ್ಲ ಪರಿಗಣಿಸುವ ಕೆಲಸ ಆಗಬೇಕು. ನೋಂದ, ಅವಕಾಶ ವಚಿಂತ ಸಮುದಾಯಕ್ಕೆ ನ್ಯಾಯ ನೀಡಬೇಕಿದೆ. ಒಳಮಿಸಲಾತಿ ಜಾರಿಗೆ ತರುವ ಜವಾಬ್ದಾರಿ ಅಳುವ ಸರಕಾರಕ್ಕೆ ಇದೆ ಎಂದರು. ಸಮೀಕ್ಷೆಯನ್ನು ಯಾರು ತಪ್ಪಿಸಬಾರದು, ಹುಟ್ಟಿದ ಮಗುವಿನ ಹೆಸರು ಸಮೀಕ್ಷೆಯಲ್ಲಿ ಸೇರಿಸಿ, ಎಲ್ಲಯುವ ಮುಖಂಡರು ಎಲ್ಲರಿಗೂ ಸಮೀಕ್ಷೆ ಬಗ್ಗೆ ಜಾಗೃತಿ ಮೂಡಿಸಬೇಕು. ಎಲ್ಲ ಸಮುದಾಯಗಳು ತಮ್ಮ ಮೂಲ ಜಾತಿಯ ಹೆಸರನ್ನೇ ನಮೂದಿಸಿ ಎಂದು ಕರೆ ನೀಡಿದರು. ಕಲ್ಯಾಣ ಕರ್ನಾಟಕ ಭಾಗದ ಜನರು ಅತಿ ಹೆಚ್ಚು ಗುಳೆ ಹೋದವರು ಕುಟುಂಬದವರು ಒಬ್ಬರು ಬಂದು ಎಲ್ಲರ ಹೆಸರು ಸಮೀಕ್ಷೆಯಲ್ಲಿ ಸೇರಿಸಿಬೇಕು ಎಂದರು.

ಜಾಹೀರಾತಿಗಾಗಿ ಇಂದೇ
ಸಂಪರ್ಕಿಸಿ:9632899236

## ಕಾಯಂಗೆ ಆಗ್ರಹಿಸಿ ಅನಿರ್ದಿಷ್ಟಾವಧಿ ಧರಣಿ: ಕುಡಿಯುವ ನೀರು ಪೂರೈಕೆಯಲ್ಲಿ ವ್ಯತ್ಯಯ




ಮಲ್ಲಮ್ಮ ನುಡಿ ವಾರ್ತೆ

ಬೀದರ. ಮೇ. 23:-ನಗರಸಭೆ ವ್ಯಾಪ್ತಿಯಲ್ಲಿ 24X7 ಕುಡಿಯುವ ನೀರು ಸರಬರಾಜು ಯೋಜನೆಯಡಿ ಕೆಲಸ ನಿರ್ವಹಿಸುತ್ತಿರುವವರ ಸೇವೆ ಕಾಯಂಗೊಳಿಸಬೇಕೆಂದು ಆಗ್ರಹಿಸಿ ಬೀದರ್ ಸಿಟಿ ವಾಟರ್ ಸಪ್ಲೈ ವರ್ಕರ್ಸ್ ಸೊಸೈಟಿಯಿಂದ ನಗರದ ಜಿಲ್ಲಾಧಿಕಾರಿ ಕಚೇರಿ ಸಮೀಪ ನಡೆಸುತ್ತಿರುವ ಅನಿರ್ದಿಷ್ಟಾವಧಿ ಧರಣಿ ಶುಕ್ರವಾರ ಎರಡನೇ ದಿನಕ್ಕೆ ಕಾಲಿರಿಸಿದೆ.

ಎರಡು ದಿನಗಳಿಂದ ಧರಣಿ ನಡೆಸುತ್ತಿರುವುದರಿಂದ ನಗರದಲ್ಲಿ ನೀರು ಸರಬರಾಜಿನಲ್ಲಿ ವ್ಯತ್ಯಯ ಉಂಟಾಗಿದೆ. ಇನ್ನೊಂದೆಡೆ ಬೇಡಿಕೆ ಈಡೇರಿಸುವವರೆಗೆ ಧರಣಿ ಕೈಬಿಡುವುದಿಲ್ಲ ಎಂದು ಸೊಸೈಟಿ ಮುಖಂಡರು ಸ್ಪಷ್ಟಪಡಿಸಿದ್ದಾರೆ.

ಬೀದರ್ ನಗರಕ್ಕೆ ಕುಡಿಯುವ ನೀರು ಸರಬರಾಜು ಯೋಜನೆಯಡಿ 50 ಜನರನ್ನು ಹೊರಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲಾಗಿದೆ. ಯೋಜನೆ ಶುರುವಾದ ನಂತರ ಕೆಲಸ ಕಾಯಂಗೊಳಿಸಲಾಗುವುದು ಎಂದು ಆಶ್ವಾಸನೆ ನೀಡಲಾಗಿತ್ತು. ಈಡೇರದ ಕಾರಣ ಅನಿವಾರ್ಯವಾಗಿ ಧರಣಿ ನಡೆಸಲಾಗುತ್ತಿದೆ ಎಂದು ಸೊಸೈಟಿ ಮುಖಂಡರು ತಿಳಿಸಿದ್ದಾರೆ.

ಬೀದರ್ ನಗರದ ಜನಸಂಖ್ಯೆ ಮೂರು ಲಕ್ಷಕ್ಕೂ ಅಧಿಕವಿದೆ. 50 ಜನ ಇಡೀ ನಗರಕ್ಕೆ ನೀರು ಸರಬರಾಜು ಮಾಡುವ ಜವಾಬ್ದಾರಿ ಹೊತ್ತಿಕೊಂಡು ಪ್ರಾಮಾಣಿಕವಾಗಿ ಕೆಲಸ ಮಾಡುತ್ತಿದ್ದಾರೆ. ಆದರೆ, ಎರಡು ತಿಂಗಳಿಂದ ವೇತನ ಪಾವತಿಸಿಲ್ಲ. ಸೇವೆ ಕೂಡ ಕಾಯಂಗೊಳಿಸಿಲ್ಲ ಎಂದು ಆರೋಪಿಸಿದ್ದಾರೆ. ಸೊಸೈಟಿ ಅಧ್ಯಕ್ಷ ತುಕಾರಾಮ ಕಾಂಬ್ಳೆ, ಮಹೇಶ, ದಿಗಂಬರ, ಈಶ್ವರ, ರಮೇಶ, ರವಿ, ಶಿವರಾಜ, ಮಹಾದೇವ, ಆಸಿಫ್, ಉಮೇಶ ಮತ್ತಿತರರು ಧರಣಿಯಲ್ಲಿ ಪಾಲ್ಗೊಂಡಿದ್ದರು.

## ದೇಸಿ ತಳಿಗಳ ಸಂರಕ್ಷಣೆ ಉತ್ತೇಜನ ಕಾರ್ಯಕ್ರಮಕ್ಕೆ ಮೇ.31 ರೊಳಗಾಗಿ ಹೆಸರು ನೋಂದಾಯಿಸಿಕೊಳ್ಳಲು ಮನವಿ

ಮಲ್ಲಮ್ಮ ನುಡಿ ವಾರ್ತೆ

ಬೀದರ:ಮೇ.23:-ವೈಜ್ಞಾನಿಕವಾಗಿ ಅಭಿವೃದ್ಧಿಪಡಿಸಲಾದ ಅಧಿಸೂಚಿತ ಪ್ರಭೇಧಗಳಿಗಿಂತ ಹೆಚ್ಚು ಪೋಷಕಾಂಶಗಳು ಸಮೃದ್ಧವಾಗಿರುವ ದೇಸಿ ತಳಿಗಳ ಸಂರಕ್ಷಣೆಗೆ ರಾಜ್ಯ ಸರ್ಕಾರ ಮುಂದಾಗಿದ್ದು, ದೇಸಿ ತಳಿಗಳನ್ನು ಸಂರಕ್ಷಿಸುತ್ತಿರುವ ರೈತರು ಕಾರ್ಯಕ್ರಮದ ಸದುಪಯೋಗಪಡಿಸಿಕೊಳ್ಳಲು ತಮ್ಮ ಸ್ವ-ವಿವರಗಳೊಂದಿಗೆ ತಮ್ಮ ವ್ಯಾಪ್ತಿಯ ಹೋಬಳಿ ರೈತ ಸಂಪರ್ಕ ಕೇಂದ್ರ ಅಥವಾ ಸಹಾಯಕ ಕೃಷಿ ನಿರ್ದೇಶಕರ ಕಚೇರಿಯಲ್ಲಿ ಮೇ.31 ರೊಳಗಾಗಿ ಹೆಸರು ನೋಂದಾಯಿಸಿಕೊಳ್ಳುವಂತೆ ಬೀದರ ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕಣ್ಮರೆಯಾಗುತ್ತಿರುವ ದೇಸಿ ತಳಿಗಳನ್ನು ಸಂರಕ್ಷಿಸುವ ಜೊತೆಗೆ ಆಯಾ ಸ್ಥಳೀಯ ಪ್ರದೇಶಕ್ಕೆ ಅನುಗುಣವಾಗಿ ಸೂಕ್ತ ತಳಿಗಳನ್ನು ಗುರುತಿಸಿ ಸಂರಕ್ಷಣೆ ಮಾಡುವುದು. ಗುರುತಿಸಿದ ದೇಸಿ ತಳಿಗಳನ್ನು ಕೃಷಿ ವಿಶ್ವವಿದ್ಯಾಲಯದ ಸಹಯೋಗದಲ್ಲಿ ಅಭಿವೃದ್ಧಿಪಡಿಸಿ ಬಿಡುಗಡೆ ಮಾಡುವುದು. ದೇಸಿ ತಳಿಗಳನ್ನು ಹಿಂದಿನಿಂದಲೂ ಸಂರಕ್ಷಿಸಿ ಕೃಷಿ ಮಾಡುತ್ತಿರುವ ರೈತರಿಗೆ ಬೆಂಬಲ ನೀಡುವುದು ಮತ್ತು ದೇಸಿ ತಳಿಗಳ ಜನಪ್ರಿಯತೆಗೆ ಬೆಂಬಲ ನೀಡುವುದು ಯೋಜನೆಯ ಉದ್ದೇಶವಾಗಿದೆ ಎಂದು ಹೇಳಿದ್ದಾರೆ.

ಆಯ್ಕೆಯಾದ ಬೆಳೆಗಳು: ಭತ್ತ, ರಾಗಿ, ಜೋಳ, ತೊಗರಿ, ಹುರುಳಿ, ಅವರೆ, ಅಲಸಂದೆ, ಮಡಕಿಕಾಳು, ಹುಚ್ಚೆಳ್ಳು, ಕುಸುಬೆ, ಎಳ್ಳು, ನವಣೆ, ಸಾಮೆ, ಊದಲು, ಕೊರಲೆ, ಹಾರಕ, ಬರಗು, ಹೆಸರು ಮತ್ತು ಗೋದಿ, ಮೆಣಸಿನಕಾಯಿ ಹಾಗೂ ಸಲಹಾ ಸಮಿತಿ ಶಿಫಾರಸ್ಸು ಮಾಡುವ ಇತರೆ ಬೆಳೆಗಳು ಕಾರ್ಯಕ್ರಮದಡಿ ಆಯ್ಕೆಯಾಗಿವೆ.

ಪರಿಗಣಿಸುವ ಗುಣಲಕ್ಷಣಗಳು: ತಲೆಮಾರುಗಳಿಂದ ರೈತರು ಬೆಳೆದ ಸಾಂಪ್ರದಾಯಿಕ ಪ್ರಭೇಧಗಳು ಸ್ಥಳೀಯ ಕೃಷಿ ಪದ್ಧತಿ ಮತ್ತು ಪ್ರದೇಶಕ್ಕೆ ಹೊಂದಿಕೊಂಡು ವಿಶಿಷ್ಟವಾದ ಗುಣಲಕ್ಷಣ ಹೊಂದಿರಬೇಕು. ಪಿಪಿವಿಎಫ್‌ಆರ್‌ಎ ( ಕಡಿಠಣಜಭಿಙಠಟಿ ಠಜಿ ಕಟಚಿಟಿಣ ಗಿಚಿಡಿಜಙಜಛ ಚಿಟಿಜ ಈಚಿಡಿಟಜಢ ಖಙಣ ಂಭಿಣ 2001 ) ಅಡಿಯಲ್ಲಿ ನೋಂದಾಯಿಸಿರಬಹುದು. ಆದರೆ, ಅಧಿಸೂಚಿತ ತಳಿಯಾಗಿರಬಾರದು. ಜಿಲ್ಲೆಯಲ್ಲಿ ದೇಸಿ ತಳಿಗಳ ಸಂರಕ್ಷಣೆ ಮಾಡುತ್ತಿರುವ ರೈತರನ್ನು ಇಲಾಖೆ ವತಿಯಿಂದ ಗುರುತಿಸಿ ಮೂಲ ಸಮೀಕ್ಷೆಯನ್ನು ಕೆ-ಕಿಸಾನ್ ಮೊಬೈಲ್ ಆಪ್ಲಿಕೇಷನ್‌ನಲ್ಲಿ ದಾಖಲಿಸಲಾಗುತ್ತಿದೆ. ಅರ್ಹ ರೈತರು ಈ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲು ಒಪ್ಪಿಗೆ ಪತ್ರ ನೀಡಬೇಕು. ಬೀಜ ಬ್ಯಾಂಕ್‌ನಲ್ಲಿರಿಸಲು ರೈತರು ಕಡ್ಡಾಯವಾಗಿ ಅಗತ್ಯ ಪ್ರಮಾಣದ ದೇಸಿ ತಳಿಗಳ ಬೀಜಗಳನ್ನು ನೀಡಲು ಸಿದ್ಧರಿರಬೇಕು, ಹೆಚ್ಚಿನ ಮಾಹಿತಿಗಾಗಿ ರೈತರು ಕೃಷಿ ಇಲಾಖೆಯ ಅಧಿಕಾರಿಗಳನ್ನು ಸಂಪರ್ಕಿಸಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

## ಅಂತರರಾಷ್ಟ್ರೀಯ ಬೂಕರ್ ಪುರಸ್ಕೃತರಾದ ಬಾನುಮುಷ್ತಾಕ್, ದೀಪ್ತಿ ಭಾಸ್ತಿ ಅವರಿಗೆ ಮೇ 28ಕ್ಕೆ ಅಭಿನಂದನೆ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಅಂತರರಾಷ್ಟ್ರೀಯ ಬೂಕರ್ ಪುರಸ್ಕೃತರಾದ ಬಾನುಮುಷ್ತಾಕ್, ದೀಪ್ತಿ ಭಾಸ್ತಿ ಅವರಿಗೆ ಗಾಂಧಿಭವನದಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದಿಂದ ಮೇ 28 ಬುಧವಾರ ಅಭಿನಂದನಾ ಕಾರ್ಯಕ್ರಮ ಏರ್ಪಡಿಸಲಾಗಿದೆ.

ಅಂತರಾಷ್ಟ್ರೀಯ ಬೂಕರ್ ಪ್ರಶಸ್ತಿಗೆ ಭಾಜನರಾಗಿರುವ ಬಾನುಮುಷ್ತಾಕ್ ಮತ್ತು ದೀಪಾಬಸ್ತಿ ಅವರು ಇಬ್ಬರೂ ಪತ್ರಕರ್ತರಾಗಿದ್ದವರು ಎನ್ನುವುದು ನಮ್ಮೆಲ್ಲರಿಗೆ ಹೆಮ್ಮೆಯ ಸಂಗತಿ.

ಬಾನುಮುಷ್ತಾಕ್ ಅವರು ಹಾಸನದಿಂದ ಲಂಕೇಶ್ ಪತ್ರಿಕೆಗೆ ವರದಿಗಾರ್ತಿಯಾಗಿದ್ದವರು. ಹಾಸನ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಸದಸ್ಯೆಯಾಗಿದ್ದರು.

ಬಾನುಮುಷ್ತಾಕ್ ಅವರ ಎದೆಯ ಹಣತೆ (ಹಾರ್ಟ್ಸ್ ಲ್ಯಾಂಪ್) ಕಥೆಗಳನ್ನು ಅನುವಾದ ಮಾಡಿದ ಕೊಡಗಿನ ದೀಪಾ ಬಸ್ತಿ ಅವರು ಇಂಡಿಯನ್ ಎಕ್ಸ್‌ಪ್ರೆಸ್ ಮತ್ತು ಟೈಂಮ್ಸ್ ಆಫ್ ಇಂಡಿಯಾದಲ್ಲಿ ಪತ್ರಕರ್ತೆಯಾಗಿದ್ದವರು.

ಹಾಗಾಗಿ ವೃತ್ತಿಬಾಂಧವರಾಗಿದ್ದ ಇಬ್ಬರೂ ಪ್ರಶಸ್ತಿ ಪುರಸ್ಕೃತರನ್ನು ಗೌರವಿಸಲು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ (ಕೆಯುಡಬ್ಲ್ಯೂಜೆ) ನಿರ್ಧರಿಸಿ ಈ ಕಾರ್ಯಕ್ರಮವನ್ನು ಆಯೋಜಿಸಿದೆ.

ಅಂದು ತಾವುಗಳು ಬರಬೇಕು ಎಂದು ಕೋರಿದೆ.

## ಸರ್ಕಾರಿ ಶಾಲೆಗಳು ಬಡವರ ಮಕ್ಕಳಿಗೆ ದಾರಿದೀಪ: ಮರಿರಾಮಪ್ಪ



ಮಲ್ಲಮ್ಮ ನುಡಿ ವಾರ್ತೆ

ಹಗರಿಬೊಮ್ಮನಹಳ್ಳಿ:ಮೇ.23 ಸರ್ಕಾರಿ ಶಾಲೆಗಳು ಬಡವರ ಮಕ್ಕಳ ಪಾಲಿಗೆ ದಾರಿ ದೀಪ ಎಂದು ಇಲ್ಲಿಯ ಪುರಸಭೆ ಅಧ್ಯಕ್ಷ ಮರಿರಾಮಪ್ಪ ಅಭಿಮತ ವ್ಯಕ್ತಪಡಿಸಿದರು.

ಪಟ್ಟಣದ ಗಂಗಾವತಿ ಭೀಮಪ್ಪನವರ ಸರ್ಕಾರಿ ಪ್ರೌಢಶಾಲಾ ಆವರಣದಲ್ಲಿ ಗುರುವಾರ ಹಮ್ಮಿಕೊಂಡಿದ್ದ ನಮ್ಮ ಶಾಲೆ ನಮ್ಮ ಜವಬ್ಧಾರಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಸರ್ಕಾರಿ ಶಾಲೆಗಳಲ್ಲೂ ವಿಶೇಷ ತರಗತಿಗಳು ನಡೆದರೆ ನಮ್ಮ ಪುರಸಭೆಯಿಂದ ಏನು ಸೌಲಭ್ಯ ನೀಡಲಾಗುತ್ತೋ ಅದನ್ನು ನಾವು ವಹಿಸಿಕೊಳ್ಳುತ್ತೇವೆ. ಈಗಾಗಲೇ ಪಟ್ಟಣದ ರಾಮನಗರದ ಶಾಲೆಯನ್ನು ಮಾದರಿ ಶಾಲೆಯನ್ನಾಗಿ ಮಾಡುತಿದ್ದೇವೆ. ಮುಂದೆ ಈ ವ್ಯಾಪ್ತಿಯ ಎಲ್ಲ ಶಾಲೆಗಳತ್ತ ಗಮನ ಹರಿಸುತ್ತೇವೆ ಎಂದರು. ಮಕ್ಕಳನ್ನು ಪ್ರೀತಿಯಿಂದ ಕಾಣಬೇಕು ಅದು ಕಲಿಕೆಗೆ ಪೂರಕ ಎಂದು ಶಿಕ್ಷಕರಿಗೆ ಕಿವಿಮಾತು ಹೇಳಿದರು.

ಬಿಇಒ ಮೈಲೇಶ್ ಬೇವೂರ್ ಮಾತನಾಡಿ, ಸರ್ಕಾರಿ ಶಾಲೆಗಳಲ್ಲಿ ವಿದ್ಯಾರ್ಥಿಗಳಿಗೆ ಎಲ್ಲಾ ಉಚಿತ ಗುಣಾತ್ಮಕ ಖಚಿತ, ಇದಕ್ಕೆ ಸರ್ಕಾರಿ ಪ್ರಮುಖ ಹುದ್ದೆಗಳಲ್ಲಿರುವವರು ಸರ್ಕಾರಿ ಶಾಲೆಗಳಲ್ಲಿ ಶಿಕ್ಷಣ ಪಡೆದವರು. ಇಲ್ಲಿ ಶಿಕ್ಷಣದೊಂದಿಗೆ ಜೀವನ ನಿರ್ವಹಣೆಯನ್ನು ಕೂಡ ಕಲಿಸುತ್ತೆ ಅಂತಹ ಶಕ್ತಿ ಸರ್ಕಾರಿ ಶಾಲೆಯಲ್ಲಿದೆ ನಿಮ್ಮ ಮಕ್ಕಳನ್ನು ಸರ್ಕಾರಿ ಶಾಲೆಗಳಿಗೆ ಸೇರಿಸಿ ಉತ್ತಮ ಭವಿಷ್ಯ ನಿರೀಕ್ಷಿಸಿ ಎಂದರು.

ಈ ಸಂದರ್ಭದಲ್ಲಿ ಶಾಲೆಯ ಎಸ್‌ಡಿಎಂಸಿ ಅಧ್ಯಕ್ಷ ಹುಲುಗಪ್ಪ, ಉಪಾಧ್ಯಕ್ಷೆ ಪ್ರಿಯಾಂಕ, ಹಳೇ ಊರಿನ ಸ.ಮಾ.ಹಿ.ಪ್ರಾ.ಶಾಲೆಯ ಅಧ್ಯಕ್ಷ ಮಜ್ಗಿ ವೀರೇಶ, ರಾಮನಗರ ಶಾಲೆಯ ಅಧ್ಯಕ್ಷ ಶಾಬುದ್ದೀನ್, ಪ್ರಮುಖರಾದ ಸೆರೆಗಾರ ಹುಚ್ಚಪ್ಪ, ಉಪ್ಪಾರ ಹನುಮಂತ, ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಎಂ.ಪಿ.ಎಂ.ಮಂಜುನಾಥ, ಶಿಕ್ಷಕರ ಸಂಘದ ಅಧ್ಯಕ್ಷ ಹ್ಯಾಟಿ ಲೋಕಪ್ಪ, ಬಿಸಿಯೂಟ ಅಧಿಕಾರಿ ರಾಜಕುಮಾರನಾಯ್ಕ್, ಪ್ರೌಢಶಾಲೆಯ ಮುಖ್ಯಶಿಕ್ಷಕ ಮಲ್ಲಪ್ಪ, ಸಮಾಹಿಪ್ರಾ ಶಾಲೆಯ ಮುಖ್ಯಶಿಕ್ಷಕ ವೀರನಗೌಡ, ಡಿಆರ್‌ಪಿ ಪರಮೇಶ್ವರ ಸೊಪ್ಪಿಮಠ, ಎಲ್ಲ ಸಿಆರ್‌ಪಿ ಅಧಿಕಾರಿಗಳಿದ್ದರು.

ಶಿಕ್ಷಕಿ ಗೀತಾ ಪ್ರಾರ್ಥಿಸಿದರು, ಸಿಆರ್‌ಪಿಯ ಗೌರಮ್ಮ, ಶಿಕ್ಷಕಿ ಎಚ್.ಎಂ.ವನಿತಾ ನಿರ್ವಹಿಸಿದರು.

# ಹೆಣ್ಣುಮಕ್ಕಳಿಗೆ ಉಚಿತ ಶಿಕ್ಷಣ ಯೋಜನೆ: ಭಿತ್ತಿ ಪತ್ರ ಬಿಡುಗಡೆ



ಬೀದರ. ಮೇ. 23 : ಹಮಿಲಾಪುರದ ವಿ.ಎಂ. ರಾಂಪುರೆ ಪಬ್ಲಿಕ್ ಸ್ಕೂಲ್ ಹಾಗೂ ವಿ.ಎಂ. ರಾಂಪುರೆ ಪ್ರೀ ಸ್ಕೂಲ್ ವತಿಯಿಂದ ನಗರದ ಪೂಜ್ಯ ಚನ್ನಬಸವ ಪಟ್ಟದ್ದೇವರು ರಂಗ ಮಂದಿರದಲ್ಲಿ ಮೇ 25 ರಂದು ಹಮ್ಮಿಕೊಳ್ಳಲಾದ ಹೆಣ್ಣುಮಕ್ಕಳಿಗೆ ಉಚಿತ ಶಿಕ್ಷಣ ಯೋಜನೆಯ ಉದ್ಘಾಟನೆ, ಅನಾಥ ಮಕ್ಕಳಿಗೆ ಪಠ್ಯಪುಸ್ತಕ ಹಾಗೂ ಸಮವಸ್ತ್ರ ವಿತರಣೆ ಸಮಾರಂಭದ ಕರಪತ್ರವನ್ನು ನಗರದಲ್ಲಿ ಗುರುವಾರ ಬಿಡುಗಡೆ ಮಾಡಲಾಯಿತು.

ಮಹಿಳಾ ಸಾಕ್ಷರತೆಗೆ ಉತ್ತೇಜನ ನೀಡುವುದಕ್ಕಾಗಿ ಶಾಲೆಯಿಂದ ಗ್ರಾಮೀಣ ಪ್ರದೇಶದ ಬಡ ಹೆಣ್ಣುಮಕ್ಕಳಿಗೆ ಉಚಿತ ಶಿಕ್ಷಣ ಕೊಡಲು ನಿರ್ಧರಿಸಲಾಗಿದೆ ಎಂದು ವಿ.ಎಂ. ರಾಂಪುರೆ ಪಬ್ಲಿಕ್ ಶಾಲೆಯ ಅಧ್ಯಕ್ಷ ಮಹೇಶ ಎಸ್. ರಾಂಪುರೆ ತಿಳಿಸಿದರು.

ಉಚಿತ ಶಿಕ್ಷಣ ಯೋಜನೆ ನಿರಂತರ ಇರಲಿದೆ. ಈಗಾಗಲೇ ಈ ವರ್ಷದ ಉಚಿತ ಶಿಕ್ಷಣ–ಕ್ಕೆ ನೋಂದಣಿ ಪ್ರಕ್ರಿಯೆ ಆರಂಭಿಸಲಾಗಿದೆ. ಆಸಕ್ತರು ಯೋಜನೆಯ ಪ್ರಯೋಜನ ಪಡೆಯಬೇಕು ಎಂದು ಹೇಳಿದರು.

ರಂಗ ಮಂದಿರದಲ್ಲಿ ದೇಶದ ಮೊದಲ ಮಹಿಳಾ ಶಿಕ್ಷಕಿ ಸಾವಿತ್ರಿಬಾಯಿ ಫುಲೆ ಅವರ ಜನ್ಮದಿನದ ಅಂಗವಾಗಿ ಹೆಣ್ಣುಮಕ್ಕಳ ಉಚಿತ ಶಿಕ್ಷಣ ಯೋಜನೆ ಉದ್ಘಾಟನೆ, ಅನಾಥ ಮಕ್ಕಳಿಗೆ ಪಠ್ಯಪುಸ್ತಕ ಹಾಗೂ ಸಮವಸ್ತ್ರ ವಿತರಣೆ ಸಮಾರಂಭ ಆಯೋಜಿಸಲಾಗಿದೆ ಎಂದು ತಿಳಿಸಿದರು.

ಕರ್ನಾಟಕ ದಲಿತ ಸಂಘರ್ಷ ಸಮಿತಿಯ ರಾಜ್ಯ ಸಂಘಟನಾ ಸಂಚಾಲಕ ಮಾರುತಿ ಬೌದ್ಧೆ, ನಗರಸಭೆ ಸದಸ್ಯ ಹಣಮಂತ ಮಲ್ಕಾಪುರ, ಸುಬ್ಬಣ್ಣ ಕರನಳ್ಳಿ, ಪ್ರದೀಪ್ ನಾಟೇಕರ್, ಸಂದೀಪ್ ಕಾಂಟೆ, ಚರಣಜೀತ್ ಆಣದೂ–ರೆ, ಸಂತೋಷ್ ಶೇರಿಕಾರ್, ಅವಿನಾಶ, ಶ್ರೀಕಾಂತ ಭವಾನಿ, ಶಿವಕುಮಾರ ನೀಲಿಕಟ್ಟಿ ಮತ್ತಿತರರು ಇದ್ದರು.

# ಗೃಹಸಚಿವ ಜಿ.ಪರಮೇಶ್ವರಗೆ ಕುಗ್ಗಿಸುವ ಷಡ್ಯಂತ್ರ: ಪ್ರದೀಪ ನಾಟೇಕಾರ



ಮಲ್ಲಮ್ಮ ನುಡಿ ವಾರ್ತೆ ಬೀದರ. ಮೇ. 23 : ಗೃಹಸಚಿವ ಜಿ. ಪರಮೇಶ್ವರ ಅವರ ಅಧ್ಯಕ್ಷತೆಯಲ್ಲಿ ನಡೆಯುತ್ತಿರುವ ಸಿದ್ಧಾರ್ಥ ಶಿಕ್ಷಣ ಸಂಸ್ಥೆ ಸೇರಿದಂತೆ ಅವರ ಮನೆ ಮೇಲೆ ಇಡಿ ದಾಳಿ ಮಾಡಿರುವುದರ ಹಿಂದೆ ಅವರನ್ನು ರಾಜಕೀಯವಾಗಿ ಮುಗಿಸುವ ಷಡ್ಯಂತ್ರ ನಡೆ–ಯುತ್ತಿದೆ ಎಂದು ದಲಿತ ಸಮಾಜದ ಮುಖಂಡರು ಹಾಗೂ ಭಾರತೀಯ ವಿದ್ಯಾರ್ಥಿ ಸಂಘದ ಅಧ್ಯಕ್ಷ ಪ್ರದೀಪ ನಾಟೇಕಾರ ತಿಳಿಸಿದರು.


ಈ ಕುರಿತು ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಶುಕ್ರವಾರ ಜರುಗಿದ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು ಪರಮೇಶ್ವರ ಅವರು ದಲಿತ ಸಮಾಜದ ಕಣ್ಣು. ಅವರ ಶಿಕ್ಷಣ ಸಂಸ್ಥೆಯಿಂದ ಇದುವರೆಗೆ 40 ಸಾವಿರ ಇಂಜಿನಿಯರ್ ಮತ್ತು 10 ಸಾವಿರ ವೈದ್ಯರು ಪಾಸಾಗಿ ಹೋಗಿದ್ದಾರೆ. ಅಲ್ಲದೆ ಅವರು ಮುಂದಿನ ಸಿಎಂ ಆಗುವ ಎಲ್ಲಾ ಅರ್ಹತೆ ಹೊಂದಿದ್ದಾರೆ. ಈ ಕಾರಣಕ್ಕಾಗಿ ದಲಿತ ಸಮುದಾಯದ ಒಬ್ಬ ಉತ್ತಮ ನಾಯಕನನ್ನು ತುಳಿಯುವ ಷಡ್ಯಂತ್ರ ಬಿಜೆಪಿ ಮತ್ತು ಆರ್.ಎಸ್.ಎಸ್. ಮಾಡುತ್ತಿದೆ ಎಂದು ಆರೋಪಿಸಿದರು. ಇದನ್ನು ನಾವು ಉಗ್ರವಾಗಿ ಖಂಡಿಸುತ್ತೇವೆ. ಇಡಿ ದಾಳಿ ಹಿಂಪಡೆಯದಿದ್ದರೆ ರಾಜ್ಯದಾದ್ಯಂತ ಉಗ್ರ ಹೋರಾಟ ನಡೆಸುತ್ತೇವೆ ಎಂದು ನಾಟೇಕಾರ ತಿಳಿಸಿದರು.

ಸಮಾಜದ ಮುಖಂಡರು ಹಾಗೂ ಹಿರಿಯ ಸಾಹಿತಿ ಡಾ. ಕಾಶಿನಾಥ ಚಲವಾ ಮಾತನಾಡಿ ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಅವರು ದಲಿತರನ್ನು ಸಾಮಾಜಿಕವಾಗಿ, ಆರ್ಥಿಕವಾಗಿ ಮತ್ತು ರಾಜಕೀಯವಾಗಿ ಹಿಂದುಳಿದವರಿಗೆ ಮೇಲೆ ತಂದರು. ಅದೇ ರೀತಿ ಗೃಹಸಚಿವ ಜಿ. ಪರಮೇಶ್ವರ ಅವರು ಅವರ ತಂದೆ ಸ್ಥಾಪಿಸಿದ ಸಿದ್ಧಾರ್ಥ ಶಿಕ್ಷಣ ಸಂಸ್ಥೆಯನ್ನು ಸಮರ್ಥವಾಗಿ ನಡೆಸಿಕೊಂಡು ಹೋಗುತ್ತಿದ್ದಾರೆ. ಅದೊಂದು ಸಾರ್ವಜನಿಕ ಸಂಸ್ಥೆ. ಯಾರು ಬೇಕಾದರೂ ಅಧ್ಯಕ್ಷರಾಗಬಹುದು. ಇಂತಹ ಒಳ್ಳೆಯ ಕಾರ್ಯ ಮಾಡುವ ಪರಮೇಶ್ವರ ಅವರನ್ನು ರಾಜಕೀಯವಾಗಿ ಮತ್ತು ನೈತಿಕವಾಗಿ ಕುಗ್ಗಿಸುವ ಕಾರ್ಯ ನಡೆಯುತ್ತಿದೆ. ಜೊತೆಗೆ ಪಂಚಾಯತ ರಾಜ್ ಸಚಿವ ಪ್ರಿಯಾಂಕ್ ಖರ್ಗೆ ಅವರಿಗೆ ಛಲವಾದಿ ನಾರಾಯಣಸ್ವಾಮಿ ಅವರು ನಾಯಿಗೆ ಹೋಲಿಸಿದ್ದನ್ನು ತೀವ್ರವಾಗಿ ಖಂಡಿಸುತ್ತೇವೆ. ನಾರಾಯಣಸ್ವಾಮಿ ಅವರು ಮಾತನಾಡುತ್ತಿಲ್ಲ. ಬದಲಾಗಿ ಅವರ ಹಿಂದೆ ಕಲಿಸಿಕೊಡುವವರಿದ್ದಾರೆ. ಛಲವಾದಿ ಅವರಿಗೆ ಟಿವಿಯಲ್ಲಿ ಮೆರೆಯಬೇಕೆಂಬ ಕಾರಣದಿಂದ ಈ ರೀತಿ ಅಸಾಂವಿಧಾನಿಕ ಪದ ಯಾರೂ ಬಳಸಬಾರದು ಎಂದು ತಿಳಿಸಿದರು.

ಇದೇ ವೇಳೆ ದಲಿತ ಮುಖಂಡರಾದ ಸುಂದರ ಜ್ಞಾನಿ, ಸೂರ್ಯಕಾಂತ ಸಾದುರೆ ಗೃಹಸಚಿವ ಜಿ. ಪರಮೇಶ್ವರ ಅವರ ಸಂಸ್ಥೆ ಮೇಲಿನ ದಾಳಿಯನ್ನು ಮತ್ತು ಸಚಿವ ಪ್ರಿಯಾಂಕ್ ಖರ್ಗೆಯವರಿಗೆ ನಾಯಿಗೆ ಹೋಲಿಸಿರುವ ಛಲವಾದಿ ನಾರಾಯಣಸ್ವಾಮಿ ಅವರ ಹೇಳಿಕೆಯನ್ನು ಬಲವಾಗಿ ಖಂಡಿಸಿದರು.

ಸುದ್ದಿಗೋಷ್ಠಿಯಲ್ಲಿ ಪ್ರಮುಖರಾದ ಶರಣು ಫುಲೆ, ನಾಗಸೇನ ಗಾಯಕವಾಡ, ರಾಜಕುಮಾರ ಪ್ರಸಾದೆ, ಭೀಮರಾವ ಮಾಲಗತ್ತಿ, ಪಂಡಿತ ಭಂಗೂರೆ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಗಡಿಕುಶನೂರದಲ್ಲಿ ಬಸವ ಜಯಂತ್ಯುತ್ಸವ ನಾಳೆ



ಮಲ್ಲಮ್ಮ ನುಡಿ ವಾರ್ತೆ ಬೀದರ. ಮೇ. 23 : ಔರಾದ್ ತಾಲ್ಲೂಕಿನ ಗಡಿಕುಶನೂರ ಗ್ರಾಮದಲ್ಲಿ ಬಸವ ಮಂಟಪ ಸೇವಾ ಸಮಿತಿ ವತಿಯಿಂದ ಮೇ 25 ರಂದು ಕರ್ನಾಟಕದ ಸಾಂಸ್ಕೃತಿಕ ನಾಯಕ ಬಸವಣ್ಣನವರ ಜಯಂತ್ಯುತ್ಸವ ಹಮ್ಮಿಕೊಳ್ಳಲಾಗಿದೆ.

ಜಯಂತ್ಯುತ್ಸವ ಪ್ರಯುಕ್ತ ಬೆಳಿಗ್ಗೆ 9ಕ್ಕೆ ಗ್ರಾಮದ ಪ್ರಮುಖ ಬೀದಿಗಳಲ್ಲಿ ಬಸವಣ್ಣನವರ ಭಾವಚಿತ್ರದ ಭವ್ಯ ಮೆರವಣಿಗೆ ಜರುಗಲಿದೆ. ಕಲಾ ತಂಡಗಳು ಮೆರವಣಿಗೆಗೆ ಮೆರುಗು ನೀಡಲಿವೆ.

ಬಸವ ಮಂಟಪದಲ್ಲಿ ಮಧ್ಯಾಹ್ನ 1ಕ್ಕೆ ನಡೆಯುವ ಮೊದಲ ಗೋಷ್ಠಿಯನ್ನು ಶಾಸಕ ಪ್ರಭು ಚವಾಣ್ ಉದ್ಘಾಟಿಸುವರು. ಸಂಜೆ 6ಕ್ಕೆ ಜರುಗುವ ಎರಡನೇ ಗೋಷ್ಠಿಯನ್ನು ಸಂಸದ ಸಾಗರ್ ಖಂಡ್ರೆ ಉದ್ಘಾಟಿಸುವರು.

ಕೂಡಲಸಂಗಮದ ಬಸವ ಧರ್ಮ ಪೀಠಾಧ್ಯಕ್ಷೆ ಮಾತೆ ಡಾ. ಗಂಗಾದೇವಿ, ಬಸವಕಲ್ಯಾಣದ ಅನುಭವ ಮಂಟಪದ ಅಧ್ಯಕ್ಷ ಡಾ. ಬಸವಲಿಂಗ ಪಟ್ಟದ್ದೇವರು, ಗುರುಬಸವ ದೇವರು ಸಾನಿಧ್ಯ ವಹಿಸುವರು.

ಬಸವ ಜಯಂತಿ ಉತ್ಸವ ಸಮಿತಿಯ ಅಧ್ಯಕ್ಷ ಜೈರಾಜ ಖಂಡ್ರೆ ಷಟಸ್ಥಲ ಧ್ವಜಾರೋಹಣ ಮಾಡುವರು. ಉದ್ಯಮಿ ವೀರಶೆಟ್ಟಿ ತೇಗಂಪುರ, ಮಹಮ್ಮದ್ ವಲಿಯೊದ್ದಿನ್, ಕಂಟೆಪ್ಪ ಗಂದಿಗುಡೆ, ವಿಜಯಕುಮಾರ ಪಟ್ನೆ, ಚಂದ್ರಕಾಂತ ಪಟ್ನೆ ಉಪಸ್ಥಿತರಿರುವರು.

ಕಾರ್ಯಕ್ರಮದಲ್ಲಿ ವಚನ ನೃತ್ಯ, ರೂಪಕ ಪ್ರದರ್ಶನಗೊಳ್ಳಲಿವೆ. ವಿವಿಧ ಕ್ಷೇತ್ರಗಳ ಸಾಧಕರ ಸನ್ಮಾನ ನಡೆಯಲಿದೆ ಎಂದು ಬಸವ ಜಯಂತಿ ಉತ್ಸವ ಸಮಿತಿಯ ಸಂಚಾಲಕ ಹನುಮಂತರಾವ್ ಪಾಟೀಲ ಹಾಗೂ ಅಶೋಕ ಮಾಶೆಟ್ಟಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸ್ವಯಂ ದೃಢೀಕರಣದ ಅಥವಾ ವಿಶೇಷ ಶಿಬಿರಗಳಲ್ಲಿ ಸಮೀಕ್ಷೆ ಮಾಡಿಕೊಳ್ಳಬಹುದು:ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ



ಮಲ್ಲಮ್ಮ ನುಡಿ ವಾರ್ತೆ ಬೀದರ: ಮೇ.23: ಪರಿಶಿಷ್ಟ ಜಾತಿ ಒಳ ಮೀಸಲಾತಿ ವರ್ಗೀಕರಣದ ಸಂಬಂಧಕಸಿದಂತೆ ಬೇಡ ಜಂಗಮ ಜಾತಿ ಮತ್ತು ಮಾದಿಗ ಜಾತಿಯವರು ಕ್ರೈಸ್ತ ಧರ್ಮಕ್ಕೆ ಮತಾಂತರ ಹೊಂದಿರುವ ಕುರಿತು ಈಗಾಗಲೇ ಸರ್ಕಾರಕ್ಕೆ ಪತ್ರ ವ್ಯವಹರಿಸಲಾಗಿದೆ ಹಾಗೂ ವಲಸೆ ಹೋಗಿರುವ ಪರಿಶಿಷ್ಟ ಜಾತಿ ಕುಟುಂಬದವರು ಸ್ವ–ಯಂ ದೃಢೀಕರಣದ ಮೂಲಕ ಅಥವಾ ವಿಶೇಷ ಶಿಬಿರಗಳನ್ನು ನಡೆಸುವ ದಿನಾಂಕಗಳಂದು ತಮ್ಮ ಸಮೀಕ್ಷೆಯನ್ನು ಮಾಡಿಕೊಳ್ಳಬಹುದು. ಎಂದು ಜಿಲ್ಲಾಧಿಕಾರಿಗಳಾದ ಶಿಲ್ಪಾ ಶರ್ಮಾ ತಿಳಿಸಿದರು. ಅವರು ಶುಕ್ರವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಪರಿಶಿಷ್ಟ ಜಾತಿ ಒಳ ಮೀಸಲಾತಿ ವರ್ಗೀಕರಣದ ಸಮೀಕ್ಷೆ ಕುರಿತು ಕರೆದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಉಳಿದಂತೆ, ಮಾಳೆಗಾಂವ್, ಮನ್ನಳ್ಳಿ, ಆಣದೂರ, ಮೈಲೂರು, ಮುಸ್ತರಿ, ದಾಬಕ, ಸಮೀಕ್ಷೆ ನಡೆಯುತ್ತಿಲ್ಲ ಎನ್ನುವ ಮನವಿ ಮೇರೆಗೆ, ಉಪ ನಿರ್ದೇಶರು, ಸಹಾಯಕ ನಿರ್ದೇಶಕರು ಸಮಾಜ ಕಲ್ಯಾಣ ಇಲಾಖೆಯವರು ಕ್ಷೇತ್ರ ಭೇಟಿ ನೀಡಬೇಕು. ಇನ್ನೂಳಿದ ಉಳಿದ ಎರಡು ದಿನಗಳಲ್ಲಿ ಮನೆ ಮನೆ ಸಮೀಕ್ಷೆ ಕೊನೆಗೊಳ್ಳಲಿದ್ದು ಮತಗಟ್ಟೆವಾರು ವಿಶೇಷ ಶಿಬಿರ ಹಾಗೂ ಸ್ವಯಂ ದೃಢೀಕರಣದ ಮೂಲಕ ಸಮೀಕ್ಷೆಯಲ್ಲಿ ಪಾಲ್ಗೊಳ್ಳಬೇಕೆಂದರು. ಈ ಸಭೆಯಲ್ಲಿ ಅಪರ ಜಿಲ್ಲಾಧಿಕಾರಿಗಳಾದ ಶಿವಕುಮಾರ ಶೀಲವಂತ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಉಪನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರು ಹಾಗೂ ಸಹಾಯಕ ನಿರ್ದೇಶಕರು, ಮುಖಂಡರುಗಳಾದ ರಾಜು ಕರಡ್ಯಾಳ, ಮಾರುತಿ ಬೌದ್ಧೆ, ಅನಿಲಕುಮಾರ ಬೆಲ್ದಾರ, ಕಮಲಾಕರ ಹೆಗ್ಡೆ , ಪ್ರದೀಪ ಹೆಗ್ಡೆ, ಬಾಬು ಪಾಸ್ವಾನ್, ಶ್ರೀಪತರಾವ್ ದೀನೆ, ರಮೇಶ್ ಕಟ್ಟಿತುಗಾಂವ್, ಶರಣು ಫುಲೆ ಮಹೇಶ ಗೊರನಳ್ಳಿಕರ್, ಅವಿನಾಶ್ ದೀನೆ, ಭಗತ್ ಸಿಂಧೆ, ಪ್ರದೀಪ ಜಂಝೀರೆ, ಸಂಜು ಕುಮಾರ್, ವಿಶಾಲ್ ದೊಡ್ಡಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಇಡಿ ದಾಳಿ ರಾಜಕೀಯ ಪ್ರೇರಿತ: ಟೀಕೆ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಮೇ. 23 : ಗೃಹ ಸಚಿವ ಡಾ. ಜಿ. ಪರಮೇಶ್ವರ್ ಮುಖ್ಯಸ್ಥರಾಗಿರುವ ತುಮಕೂರಿನ ಸಿದ್ಧಾರ್ಥ ಶಿಕ್ಷಣ ಸಂಸ್ಥೆಯ ಕಚೇರಿಗಳ ಮೇಲೆ ಜಾರಿ ನಿರ್ದೇಶನಾಲಯ (ಇಡಿ) ನಡೆಸಿದ ದಾಳಿ ರಾಜಕೀಯ ಪ್ರೇರಿತವಾಗಿದೆ ಎಂದು ಕರ್ನಾಟಕ ದ್ರಾಕ್ಷಾರಸ ಮಂಡಳಿಯ ಮಾಜಿ ಅಧ್ಯಕ್ಷ ಬಕ್ಕಪ್ಪ ಕೋಟೆ ಟೀಕಿಸಿದ್ದಾರೆ.

ಇಡಿ ದಾಳಿಯು ಡಾ. ಜಿ. ಪರಮೇಶ್ವರ್ ಅವರ ರಾಜಕೀಯ ಬೆಳವಣಿಗೆಗೆ ತಡೆಯೊಡ್ಡುವ ಪ್ರಯತ್ನವಾಗಿದೆ ಎಂದು ಆರೋಪಿಸಿದ್ದಾರೆ.

ಕೇಂದ್ರ ಸರ್ಕಾರವು ವಿರೋಧ ಪಕ್ಷಗಳ ನಾಯಕರನ್ನು ಗು–ರಿಯಾಗಿಸಿ ಇಡಿ ದಾಳಿ ನಡೆಸುತ್ತಿದೆ. ಬಿಜೆಪಿಯ ನಾಯಕರ ಮೇಲೆ ಈ ರೀತಿಯ ದಾಳಿ ನಡೆದ ನಿದರ್ಶನಗಳಿಲ್ಲ ಎಂದು ಆಪಾದಿಸಿದ್ದಾರೆ.

ಡಾ. ಜಿ. ಪರಮೇಶ್ವರ್ ದಲಿತ ಸಮುದಾಯದ ಹಿರಿಯ ನಾಯಕರಲ್ಲಿ ಒಬ್ಬರಾಗಿದ್ದಾರೆ. ತಮ್ಮ ಸ್ವ ಸಾಮರ್ಥ್ಯದಿಂದ ರಾಜಕೀಯದಲ್ಲಿ ಎತ್ತರಕ್ಕೆ ಬೆಳೆದಿದ್ದಾರೆ. ಸಿದ್ಧಾರ್ಥ ಶಿಕ್ಷಣ ಸಂಸ್ಥೆಯನ್ನು ಬೆಳೆಸಿದ್ದಾರೆ. ಅವರ ಸಂಸ್ಥೆಯಲ್ಲಿ ಎಲ್ಲವೂ ಪಾರದರ್ಶಕವಾಗಿದೆ ಎಂದು ಹೇಳಿದ್ದಾರೆ. ಪರಮೇಶ್ವರ್ ಅವರಿಗೆ ರಾಜಕೀಯದಲ್ಲಿ ಇನ್ನೂ ಉನ್ನತ ಹುದ್ದೆಗಳು ಒಲಿದು ಬರಲಿವೆ. ಈ ರೀತಿಯ ದಾಳಿಗಳಿಂದ ಅವರನ್ನು ಕುಗ್ಗಿಸಲು ಸಾಧ್ಯವಿಲ್ಲ ಎಂದು ತಿಳಿಸಿದ್ದಾರೆ.

# ಮೇ.26 ರಿಂದ ಜೂನ್.2 ರವರೆಗೆ ಎಸ್‌ಎಸ್‌ಎಲ್‌ಸಿ ಪರೀಕ್ಷೆ-2

## ಪರೀಕ್ಷೆ ಸುಗಮವಾಗಿ ನಡೆಸಲು ಅಪರ ಜಿಲ್ಲಾಧಿಕಾರಿ ಶಿವಕುಮಾರ ಶೀಲವಂತ ಸೂಚನೆ



ಮಲ್ಲಮ್ಮ ನುಡಿ ವಾರ್ತೆ ಬೀದರ: ಮೇ.23: ಜಿಲ್ಲೆಯಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷೆ–2 ಮೇ.26 ರಿಂದ ಜೂನ್.2 ರವರೆಗೆ ನಡೆಯಲಿದ್ದು, ಪರೀಕ್ಷೆಯು ಯಾವುದೇ ಲೋಪದೋಷವಿಲ್ಲದೆ ಸುಗಮವಾಗಿ ನಡೆಯುವಂತ ನೋಡಿಕೊಳ್ಳಬೇಕೆಂದು ಅಧಿಕಾರಿಗಳಿಗೆ ಅಪರ ಜಿಲ್ಲಾಧಿಕಾರಿ ಶಿವಕುಮಾರ ಶೀಲವಂತ ಸೂಚನೆ ನೀಡಿದರು.

ಅವರು ಶುಕ್ರವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷೆ–2 ರ ಪೂರ್ವಭಾವಿ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಜಿಲ್ಲೆಯಲ್ಲಿ ನಡೆದ ಎಸ್‌ಎಸ್‌ಎಲ್‌ಸಿ ಪರೀ–ಕ್ಷೆ–1 ರಲ್ಲಿ ಅನುತ್ತೀರ್ಣರಾಧ ಒಟ್ಟು 13632 ವಿದ್ಯಾರ್ಥಿಗಳು ಪರೀಕ್ಷೆ–2 ಬರೆಯಲು ಹೆಸರು ನೋಂದಾಯಿಸಿಕೊಂಡಿದ್ದು, ಒಟ್ಟು 566 ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆ ನಡೆಯಲಿದೆ. ಪ್ರತಿಯೊಂದು ಪರೀಕ್ಷಾ ಕೇಂದ್ರಗಳಲ್ಲಿ ಸಿಸಿ ಟಿವಿಗಳನ್ನು ಅಳವಡಿಸಲಾಗಿದೆ ಹಾಗೂ ಜಿಲ್ಲಾ ಹಂತದ ವೆಬ್ ಕೌನ್ಸಿಂಗ್ ಮಾಡಿ ವೀಕ್ಷಿಸಲು ವ್ಯವಸ್ಥೆ ಮಾಡಿಕೊಳ್ಳಲಾಗಿದೆ ಎಂದರು. ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರಾದ ಸಲೀಂ ಪಾಷಾ ಮಾತನಾಡಿ, ಪರೀಕ್ಷಾ ಕೇಂದ್ರಗಳಲ್ಲಿ ಮೊಬೈಲ್‌ಗಳನ್ನು ಕಡ್ಡಾಯವಾಗಿ ನಿಷೇಧಿಸಲಾಗಿದ್ದು ಪರೀಕ್ಷಾ ಕೇಂದ್ರಗಳ ಸುತ್ತ 200 ಮೀಟರ ಪ್ರದೇಶೌನ್ನು ನಿಷೇಧಿತ ಪ್ರದೇಶವೆಂದು ಹಾಗೂ ಪರೀಕ್ಷಾ ಕೇಂದ್ರಗಳ ಹತ್ತಿರದಲ್ಲಿರುವ ಝಿರಾಕ್ಸ್ ಮತ್ತು ಸೈಬರ ಕೇಂದ್ರಗಳನ್ನು ಪರೀಕ್ಷಾ ಸಮಯದಲ್ಲಿ ಮುಚ್ಚಿಸಲು ಆದೇಶ ಹೊರಡಿಸಲಾಗಿದೆ. ಜಿಲ್ಲೆಯಲ್ಲಿ ಒಟ್ಟು 47 ಪರೀಕ್ಷಾ ಕೇಂದ್ರಗಳಿದ್ದು ಪರೀಕ್ಷೆಯು ಜಿಲ್ಲೆಯ ಔರಾದ (05), ಬಸವಕಲ್ಯಾಣ (09), ಭಾಲ್ಕಿ (08), ಬೀದರ (15), ಹುಮನಾಬಾದ (10) ಸೇರಿದಂತೆ ಒಟ್ಟು (47) ಪರೀಕ್ಷಾ ಕೇಂದ್ರಗಳಲ್ಲಿ ವಿದ್ಯಾರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ ಎಂದು ಸಭೆಗೆ ಮಾಹಿತಿ ನೀಡಿದರು.

ಸಭೆಯಲ್ಲಿ ಎಸ್‌ಎಸ್‌ಎಲ್‌ಸಿ ನೋಡಲ್ ಅಧಿಕಾರಿಗಳು ತಾಲೂಕ ನೋಡಲ್ ಅಧಿಕಾರಿಗಳು, ಜಿಲ್ಲೆಯ ಎಲ್ಲಾ ಪರೀಕ್ಷಾ ಕೇಂದ್ರದ ಮುಖ್ಯ ಅಧೀಕ್ಷಕರು, ಉಪ ಮುಖ್ಯ ಅಧೀಕ್ಷಕರು ಸೇರಿದಂತೆ ವಿವಿಧ ಅಧಿಕಾರಿಗಳು ಉಪಸ್ಥಿತರಿದ್ದರು.

# ಮರು ಮೌಲ್ಯಮಾಪನ: ದೇವಿಗೆ ಮೂರನೇ ರ್‍ಯಾಂಕ್



ಮಲ್ಲಮ್ಮ ನುಡಿ ವಾರ್ತೆ


ಬೀದರ. ಮೇ. 23 : ಪ್ರಸಕ್ತ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ರಾಜ್ಯಕ್ಕೆ ಐದನೇ ರ್‍ಯಾಂಕ್ ಗಳಿಸಿದ್ದ ಭಾಲ್ಕಿಯ ಸೂರ್ಯೋದಯ ಪಬ್ಲಿಕ್ ಶಾಲೆಯ ವಿದ್ಯಾರ್ಥಿನಿ ದೇವಿ ಮಲ್ಲಿಕಾರ್ಜುನ ಸೀತಾ, ಮರು ಮೌಲ್ಯಮಾಪನದ ಬಳಿಕ ಮೂರನೇ ರ್‍ಯಾಂಕ್ ಪಡೆದಿದ್ದಾರೆ.

ದೇವಿ ಮೊದಲು ಶೇ 99.36 ರಷ್ಟು ಅಂಕ ಗಳಿಸಿದ್ದರು. ಅವರಿಗೆ ಹಿಂದಿ ವಿಷಯದಲ್ಲಿ 98 ಅಂಕಗಳು ಬಂದಿದ್ದವು. ಆದರೆ, ಇದರಿಂದ ತೃಪ್ತರಾಗದ ಅವರು ಹಿಂದಿ ವಿಷಯದ ಮರು ಮೌಲ್ಯಮಾಪನಕ್ಕಾಗಿ ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಗೆ ಅರ್ಜಿ ಸಲ್ಲಿಸಿದ್ದರು. ಮರು ಮೌಲ್ಯಮಾಪನದ ನಂತರ ಅವರಿಗೆ ಎರಡು ಅಂಕ ಹೆಚ್ಚಾಗಿ ಹಿಂದಿಯಲ್ಲಿ 100ಕ್ಕೆ 100 ಅಂಕ ಬಂದಿವೆ. ಈಗ ವಿದ್ಯಾರ್ಥಿನಿಯ ಒಟ್ಟಾರೆ ಫಲಿತಾಂಶ ಶೇ 99.68ಕ್ಕೆ ಏರಿಕೆಯಾಗಿದ್ದು, ರ್‍ಯಾಂಕ್‌ನಲ್ಲೂ ಎರಡು ಸ್ಥಾನ ಮೇಲಕ್ಕೆ ಏರಿದ್ದಾರೆ.

ಈ ಬಾರಿಯ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ದೇವಿ 625 ಅಂಕಗಳ ಪೈಕಿ 623 ಅಂಕ ಗಳಿಸಿ ಅಮೋಘ ಸಾಧನೆ ಮಾಡಿದ್ದಾರೆ. ಶಾಲೆ ಫಲಿತಾಂಶದಲ್ಲಿ ಸತತ ಎರಡನೇ ವರ್ಷವೂ ಕಲಬುರಗಿ ವಿಭಾಗದಲ್ಲಿ ಮೊದಲ ಸ್ಥಾನದಲ್ಲಿದೆ ಎಂದು ಶಾಲೆಯ ಅಧ್ಯಕ್ಷ ಸಂತೋಷ ಖಂಡ್ರೆ ತಿಳಿಸಿದ್ದಾರೆ.

ದೇವಿ ಅವರ ಸಾಧನೆಗೆ ಸಂತೋಷ ಖಂಡ್ರೆ, ಶಾಲೆಯ ಕಾರ್ಯದರ್ಶಿ ಉಷಾ ಖಂಡ್ರೆ, ಪ್ರಾಚಾರ್ಯ ಅನಿಲ್ ಪಾಟೀಲ, ಬೋಧಕ ಹಾಗೂ ಬೋಧ–ಕೇತರ ಸಿಬ್ಬಂದಿ ಸಂತಸ ವ್ಯಕ್ತಪಡಿಸಿದ್ದಾರೆ.

# ಸರ್ಕಾರದಿಂದ ಜಿಡಗಾ-ಮುಗಳಖೋಡ ಮಠದ ಶಿವಯೋಗಿ ಸಿದ್ದರಾಮೇಶ್ವರ ಜಯಂತಿ ಆಚರಿಸಿ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಮೇ. 23 : ರಾಜ್ಯ ಸರ್ಕಾರದ ವತಿಯಿಂದ ಜಿಡಗಾ–ಮುಗಳಖೋಡ ಮಠದ ಸಿದ್ಧರಾಮೇಶ್ವರ ಸ್ವಾಮೀಜಿ ಅವರ ಜಯಂತಿ ಆಚರಿಸಬೇಕು ಎಂದು ಕಾಂಗ್ರೆಸ್‌ನ ಕಾರ್ಮಿಕ ವಿಭಾಗದ ರಾಜ್ಯ ಕಾರ್ಯದರ್ಶಿ ಜಾನಸನ್ ಘೋಡೆ ಮನವಿ ಮಾಡಿದ್ದಾರೆ. ಬೆಂಗಳೂರಿನಲ್ಲಿ ಗುರುವಾರ ಈ ಕುರಿತು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಚಿವ ಶಿವರಾಜ ತಂಗಡಗಿ ಅವರಿಗೆ ಬೆಂಗಳೂರಿನಲ್ಲಿ ಭೇಟಿ ಮಾಡಿ ಮನವಿ ಪತ್ರ ಸಲ್ಲಿಸಿದರು. ಸಿದ್ಧರಾಮೇಶ್ವರ ಸ್ವಾಮೀಜಿ ರಾಜ್ಯ ಹಾಗೂ ದೇಶದ ವಿವಿಧೆಡೆ ಪ್ರಖ್ಯಾತಿ ಹೊಂದಿದ್ದಾರೆ. ಅವರಿಗೆ ಲಕ್ಷಾಂತರ ಭಕ್ತರಿದ್ದಾರೆ. ಜಿಡಗಾ–ಮುಗಳಖೋಡ ಮಠ ಐತಿಹಾಸಿಕ ಮಠವಾಗಿದೆ ಎಂದು ಗಮನ ಸೆಳೆದರು.

ಸೆಪ್ಟೆಂಬರ್ 18 ರಂದು ಸರ್ಕಾರದ ವತಿಯಿಂದಲೇ ಅವರ ಜಯಂತಿ ಆಚರಿಸಲು ಆದೇಶ ಹೊರಡಿಸಬೇಕು ಎಂದು ಕೋರಿದರು.

# ಬೀದರ್ ವಿಶ್ವ ವಿದ್ಯಾಲಯ ಪಠ್ಯಕ್ರಮಕ್ಕೆ ಡಾ.ಮುಮ್ತಾಜ್ ಬೇಗಂ 5 ಕವನಗಳು ಆಯ್ಕೆ



ಮಲ್ಲಮ್ಮ ನುಡಿ ವಾರ್ತೆ

ಗಂಗಾವತಿ, ಮೇ. 23– ಬೀದರ್ ವಿಶ್ವವಿದ್ಯಾಲಯದ ಸ್ನಾತಕ ಪದವಿಯ ಬಿಎ ದ್ವಿತೀಯ ಸೆಮಿಸ್ಟರ್ ಸಾಮಾನ್ಯ ಕನ್ನಡ ಪಠ್ಯಕ್ರಮಕ್ಕೆ ಕೊಪ್ಪಳ ಜಿಲ್ಲೆಯ ಗಂಗಾವತಿ ಎಸ್‌ಕೆಎನ್‌ಜಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲರಾದ ಡಾ. ಮುಮ್ತಾಜ್ ಬೇಗಂ ಅವರ ಅರಿವಿನ ಬೆಳಕು, ದೇವರು, ಕಬಂಧಬಾಹುಗಳು ಬೇಕಿಲ್ಲ ಸೇರಿದಂತೆ ಐದು ಕವನಗಳು ಪಠ್ಯಕ್ರಮಕ್ಕೆ ಆಯ್ಕೆಯಾಗಿವೆ. ಬೇಸಿಕ ಕನ್ನಡ ಪಠ್ಯಕ್ರಮಕ್ಕೆ ಇವರ ಐದು ಕವನಗಳನ್ನು ವಿಶ್ವ ವಿದ್ಯಾಲಯ ಆಯ್ಕೆ ಸಮಿತಿ ಆಯ್ಕೆ ಮಾಡಿದೆ. ಸಾಮಾಜಿಕ ಸಾಮರಸ್ಯಕ್ಕೆ ಸ್ಫೂರ್ತಿ ತುಂಬುವ ಲೇಖಕಿ ಡಾ. ಮುಮ್ತಾಜ್ ಬೇಗಂ ಅವರ ಕವನಗಳು ವಿಶ್ವ ವಿದ್ಯಾಲಯ ಪಠ್ಯಕ್ರಮಕ್ಕೆ ಆಯ್ಕೆ ಮಾಡಿದ್ದಕ್ಕೆ ಸಾಹಿತ್ಯಾಸಕ್ತರು ಸಂತಸ ವ್ಯಕ್ತಪಡಿಸಿದ್ದಾರೆ.

# ಪರಿಶಿಷ್ಟ ಜಾತಿಗಳ ಸಮಗ್ರ ಸಮೀಕ್ಷೆ -2025 ಅವಧಿ ವಿಸ್ತರಣೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮೇ 23-ಸರ್ಕಾರದ ಆದೇಶ ದಿನಾಂಕ 2024 ನೇ ನವೆಂಬರ್ 12 ರಲ್ಲಿ ರಾಜ್ಯದಲ್ಲಿ ಶಿಕ್ಷಣ ಮತ್ತು ಸರ್ಕಾರಿ ಸೇವೆಗಳಲ್ಲಿ ಪರಿಶಿಷ್ಟ ಜಾತಿಯ ವಿವಿಧ ಉಪ ಜಾತಿಗಳಿಗೆ ಸೇರಿದವರ ಪ್ರಾತಿನಿಧ್ಯತೆ ಕುರಿತು ಇಟಠಿಡುಭಿಚಿಟ ಆಚಿಣಚಿ ಪಡೆದು ಪರಿಶಿಷ್ಟ ಜಾತಿಯಲ್ಲಿ ಒಳ ಮೀಸಲಾತಿ ಬಗ್ಗೆ ಸೂಕ್ತ ಶಿಫಾರಸ್ಸಿನೊಂದಿಗೆ ವರದಿ ಸಲ್ಲಿಸಲು ಕರ್ನಾಟಕ ಉಚ್ಚನ್ಯಾಯಾಲಯದ ನಿವೃತ್ತ ನ್ಯಾಯಾಧೀಶರಾದ ಡಾ: ಹೆಚ್.ಎನ್. ನಾಗಮೋಹನ್ ದಾಸ್ ಇವರ ಅಧ್ಯಕ್ಷತೆಯಲ್ಲಿ ಏಕ ಸದಸ್ಯ ಆಯೋಗವನ್ನು ರಚಿಸಲಾಗಿರುತ್ತದೆ.

ಪರಿಶಿಷ್ಟ ಜಾತಿಯಲ್ಲಿನ 101 ಜಾತಿಗಳ ವೈಜ್ಞಾನಿಕ ವರ್ಗೀಕರಣ ಮಾಡಲು ದತ್ತಾಂಶವನ್ನು (Em-pericalData) ಸಂಗ್ರಹಿಸಲು ಹೊಸದಾದ ಸಮೀಕ್ಷೆಯನ್ನು ನಡೆಸಲು ದಿನಾಂಕ: 27-03-2025 ರ ಆಯೋಗದ ಮಧ್ಯಂತರ ವರದಿಯಲ್ಲಿ ಸರ್ಕಾರಕ್ಕೆ ಶಿಫಾರಸ್ಸು ಮಾಡಲಾದ ಹಿನ್ನಲೆಯಲ್ಲಿ ಸಮೀಕ್ಷೆಯನ್ನು ದಿನಾಂಕ: 05-05-2025 ರಿಂದ ಗಣತಿದಾರರು ಮನೆ-ಮನೆಗೆ ಭೇಟಿ ನೀಡಿ ಮಾಹಿತಿ ಸಂಗ್ರಹಿಸುವುದರ ಮೂಲಕ ರಾಜ್ಯಾದ್ಯಂತ ಈಗಾಗಲೇ ಪ್ರಾರಂಭಿಸಲಾಗಿರುತ್ತದೆ. ಜಿಲ್ಲಾ ವ್ಯಾಪ್ತಿಯ ವಲಯಗಳಲ್ಲಿ ಪರಿಶಿಷ್ಟ ಜಾತಿ ಜನಾಂಗದ ಸಮೀಕ್ಷೆ ಕಾರ್ಯವು ಇನ್ನೂ ಪ್ರಗತಿಂ ಮಾಗಬೇಕಾಗಿರುವುದರಿಂದ, ಮಳೆ/ಹವಾಮಾನ ವೈಪರೀತ್ಯ ಕಾರಣಗಳಿಂದಾಗಿ, ಅನೇಕ ಪರಿಶಿಷ್ಟ ಜಾತಿ ಸಂಘಗಳಿಂದ ಕೋರಿಕೆಯ ಮೇರೆಗೆ ಸಮೀಕ್ಷಾ ಕಾರ್ಯವನ್ನು ಪೂರ್ಣಗೊಳಿಸಲು ಅನುವಾಗುವಂತೆ ದಿನಾಂಕವನ್ನು ವಿಸ್ತರಿಸಲು ನಿರ್ಣಯಿಸಲಾಗಿದೆ.

ಮನೆ-ಮನೆ ಭೇಟಿ ನೀಡಿ ಸಮೀಕ್ಷೆಯು ದಿನಾಂಕ:26-05-2025 ರಿಂದ 29-05-2025 ರವರೆಗೆ ವಿಸ್ತರಿಸಲಾಗಿದೆ. ವಿಶೇಷ ಶಿಬಿರ (ಸಮೀಕ್ಷಾ ಬ್ಲಾಕ್ ವ್ಯಾಪ್ತಿಯಲ್ಲಿ) - 03 ದಿನಗಳ ಕಾಲ - ಮೇ 30, 31 ಹಾಗೂ 01ನೇ ಜೂನ್ -2025 ರವರೆಗೆ ಮರು ನಿಗದಿಪಡಿಸಲಾಗಿದೆ ಮತ್ತು ಆನ್ ಲೈನ್ ಮೂಲಕ ಸ್ವಯಂ ಘೋಷಣೆ- ದಿನಾಂಕ:01-06-2025ರವರೆಗೆ ಮುಂದುವರೆಯಲಿದೆ ಎಂದು ಏಕ ಸದಸ್ಯ ಆಯೋಗದ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಹೆಣ್ಣು ಮಕ್ಕಳಿಗೆ ಮದುವೆಯ ವಯಸ್ಸು 18 ಆಗಿರಬೇಕು; ಇದರ ಮಹತ್ವ ಪಾಲಕರಿಗೆ ತಿಳಿಸಿ: ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮೇ 23-ಹೆಣ್ಣು ಮಕ್ಕಳಿಗೆ ಮದುವೆಯ ವಯಸ್ಸು 18 ಆಗಿರಬೇಕು. ಇದರ ಅವಶ್ಯಕತೆ ಮತ್ತು ಮಹತ್ವದ ಬಗ್ಗೆ ಪಾಲಕರಿಗೆ ತಿಳಿಸುವ ಮೂಲಕ ಗರ್ಭಿಣಿ ಅವಧಿಯ ಗಂಡಾಂತರಗಳನ್ನು ದೂರಗೊಳಿಸಲು ಅರಿವು ಮೂಡಿಸುವ ಕಾರ್ಯವಾಗಬಾಎಕು ಎಂದು ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಹೇಳಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ಜರುಗಿದ ಜಿಲ್ಲಾ ಆರೋಗ್ಯ ಅಭಿಯಾನದ ಅಂತರ್ ಇಲಾಖೆ ಸಭೆಯಲ್ಲಿ ಅವರು ಮಾತನಾಡಿದರು.

ಶಿಶು ಜನನದ ನಂತರ ಉಂಟಾಗಬಹುದಾದ ತಾಯಿ ಮರಣಗಳನ್ನು ತಡೆಗಟ್ಟಲು ಪಾಲಕರಿಗೆ ಹೆಣ್ಣು ಮಗುವಿಗೆ 18 ವರ್ಷಗಳ ನಂತರ ಮದುವೆ ಮಾಡುವುದರ ಬಗ್ಗೆ ಮನದಟ್ಟು ಮಾಡಿಕೊಡಬೇಕು. ತಾಯ್ತನದ ಜವಾಬ್ದಾರಿ ಹಾಗೂ ವೈಜ್ಞಾನಿಕವಾಗಿ ಗರ್ಭಕೋಶದ ಸಂಪೂರ್ಣ ಬೆಳವಣಿಗೆ ಮಹತ್ವ ಸಹ ತಿಳಿಸುವ ಮೂಲಕ ಹೆಣ್ಣುಮಕ್ಕಳ ಕನಿಷ್ಠ 20 ವರ್ಷ ವಯಸ್ಸಿನ ನಂತರದ ಅವಧಿ ಗರ್ಭವತಿಯಾಗಲು ಸೂಕ್ತ ಸಮಯ ಎಂದು ಸಮುದಾಯದಲ್ಲಿ ಜಾಗೃತಿ ನೀಡುವಂತೆ ಜಿಲ್ಲಾಧಿಕಾರಿಗಳು ಸೂಚಿಸಿದರು.

ಜಿಲ್ಲೆಯಲ್ಲಿ ಗರ್ಭಿಣಿ ಮತ್ತು ಬಾಣಂತಿಯರ ಮರಣವನ್ನು ಶೂನ್ಯಕ್ಕೆ ತರಲು ಗರ್ಭಿಣಿ ಎಂದು ನೋಂದಣಿ ಮಾಡಿದ ದಿನದಿಂದಲೇ ಯಾವುದೇ ಸಣ್ಣ ಆರೋಗ್ಯ ಸಮಸ್ಯೆ ಕಂಡುಬಂದರೂ ನಿರ್ಲಕ್ಷಿಸದೇ ಎಲ್ಲಾ ಆರೋಗ್ಯ ಕೇಂದ್ರಗಳಲ್ಲಿ ಸೂಕ್ತ ಪರೀಕ್ಷೆ ಮಾಡಿಸುವ ವ್ಯವಸ್ಥೆ ಪರಿಣಾಮಕಾರಿಯಾಗಿ ಅನುಷ್ಠಾನ ಮಾಡಬೇಕು ಎಂದರು.

ಇದರ ಜೊತೆಗೆ ಗರ್ಭಿಣಿಯ ಆರೋಗ್ಯದ ಸಮಸ್ಯೆಗಳನ್ನು ಸ್ಥಳೀಯ ಮಟ್ಟದ ಆಸ್ಪತ್ರೆಗಳಲ್ಲಿ ಚಿಕಿತ್ಸೆಗೆ ಸಾಧ್ಯವಾಗದಿದ್ದರೆ ಪಾಲಕರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಮನವರಿಕೆ ಮಾಡಿ ಮೇಲ್ಮಟ್ಟದ ಆಸ್ಪತ್ರೆಗೆ ಮುಂಚಿತವಾಗಿ ಮಾಹಿತಿ ನೀಡಿ ಗರ್ಭಿಣಿಯನ್ನು ಕಳುಹಿಸಿಕೊಡುವ ವ್ಯವಸ್ಥೆ ಮಾಡಬೇಕು ಎಂದರು.

ಚೊಚ್ಚಲು ಹೆರಿಗೆ, ಅಧಿಕ ರಕ್ತದೊತ್ತಡ, ಮೊದಲ ಹೆರಿಗೆ ಸಿಸೆರಿಯನ್ ಆಗಿದ್ದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರ ಮಟ್ಟದಿಂದ ಸಕಾಲದಲ್ಲಿ ಇಲಾಖೆಯ ಆಂಬ್ಯುಲೆನ್ಸ್ ಅಥವಾ 108 ತುರ್ತು ವಾಹನ ವ್ಯವಸ್ಥೆ ಮೂಲಕ ಕಳುಹಿಸಬೇಕು. ತಾಲ್ಲೂಕ ಮಟ್ಟದಲ್ಲಿ, ಜಿಲ್ಲಾ ಮಟ್ಟದಲ್ಲಿ ಹಾಗೂ ಬಿಎಮ್‌ಸಿಆರ್.ಸಿ ಆಸ್ಪತ್ರೆಗಳಲ್ಲಿ ಸುಸಜ್ಜಿತ ಹೆರಿಗೆ ಸೌಲಭ್ಯ ಹಾಗೂ ನುರಿತ ವೈದ್ಯರು ಇರುವ ಕುರಿತು ಕ್ಷೇತ್ರ ಮಟ್ಟದಲ್ಲಿ ಜಾಗೃತಿ ನೀಡುವಂತೆ ತಿಳಿಸಿದರು.

ಗರ್ಭಿಣಿ ಎಂದು ತಿಳಿದ ದಿನದಿಂದಲೇ ಗರ್ಭಿಣಿಗೆ ಕಂಡು ಬರಬಹುದಾದ ಸಾಮಾನ್ಯ, ಗಂಭೀರ ಸಮಸ್ಯೆಗಳ ಕುರಿತು ಮುತುವರ್ಜಿ ವಹಿಸಲು ಕ್ಷೇತ್ರ ಮಟ್ಟದ ಸಿಬ್ಬಂದಿಯವರು ಸದಾ ತಾಯಿಯೊಂದಿಗೆ ಹಾಗೂ ಪಾಲಕರೊಂದಿಗೆ ಸಂಪರ್ಕದಲ್ಲಿರಬೇಕು. ಕಬ್ಬಿಣಾಂಶ ಮಾತ್ರೆ ಸೇವನೆಯಿಂದಾಗುವ ಪ್ರಯೋಜನ ತಿಳಿಸಬೇಕು ಎಂದರು.

ಜಿಪಂ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್ ಮಾತನಾಡಿ, ಆಸ್ಪತ್ರೆಯಲ್ಲಿ ಹೆರಿಗೆಯಾದಲ್ಲಿ ಸಹಜ ಹೆರಿಗೆ 48 ಗಂಟೆಗಳ ಕಾಲ, ಸಿಜರಿಯನ್ ಹೆರಿಗೆ ಐದು ದಿನಗಳ ಕಾಲ ಕಡ್ಡಾಯವಾಗಿ ದಾಖಲು ಮಾಡಿಕೊಂಡು ನಿರಂತರವಾಗಿ ತಾಯಿಯ ಆರೋಗ್ಯದ ಕುರಿತು ಪರಿಶೀಲಿಸಿ ವೈದ್ಯರು ಮತ್ತು ಸಿಬ್ಬಂದಿಯವರು ಯಾವುದೇ ಲೋಪವಿಲ್ಲದಂತೆ ಕರ್ತವ್ಯ ನಿರ್ವಹಿಸಲು ಸೂಚಿಸಿದರು.

ಜನನಿ ಶಿಶು ಸುರಕ್ಷಾ ಕಾರ್ಯಕ್ರಮ ಯೋಜನೆಯಡಿಯಲ್ಲಿ ದೊರಕುವ ಉಚಿತ ಊಟ, ಉಚಿತ ಔಷಧಿ, ಉಚಿತ ರಕ್ತ, ಉಚಿತ ಪರೀಕ್ಷೆ, ಉಚಿತ ನಗುಮಗು ವಾಹನ ಮೂಲಕ ಮನೆಗೆ ಬಿಡುವ ಕುರಿತು ಹಾಗೂ ಜನನಿ ಸುರಕ್ಷಾ ಯೋಜನೆಯಡಿ ಸಹಾಯಧನವನ್ನು ಅವರ ಖಾತೆಗೆ ಜಮೆ ಆಗುವ ಬಗ್ಗೆ ತಿಳಿಸಬೇಕು ಎಂದರು.

ಸಭೆಯಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಯಲ್ಲಾ ರಮೇಶ್ ಬಾಬು, ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎನ್ ಬಸಾರೆಡ್ಡಿ, ವೈದ್ಯಕಿಯ ಅಧೀಕ್ಷಕಿ ಡಾ.ಇಂದುಮತಿ, ಪ್ರಸೂತಿ ವಿಭಾಗದ ಡಾ.ವಿರೇಂದ್ರಕುಮಾರ, ವಿಮ್ಸ್ ಮಕ್ಕಳ ವಿಭಾಗದ ಡಾ.ವಿಶ್ವನಾಥ, ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿ ಡಾ.ಹನುಮಂತಪ್ಪ, ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಮರಿಯಂಬಿ ವಿ.ಕೆ., ಜಿಲ್ಲಾ ಕುಟುಂಬ ಕಲ್ಯಾಣ ಕಾರ್ಯಕ್ರಮ ಅಧಿಕಾರಿ ಡಾ.ಪೂರ್ಣಿಮಾ ಕಟ್ಟಿಮನಿ, ಜಿಲ್ಲಾ ಕ್ಷಯ-ರೋಗ ನಿರ್ಮೂಲನಾಧಿಕಾರಿ ಡಾ.ಇಂದ್ರಾಣಿ ವಿ., ಜಿಲ್ಲಾ ಕುಷ್ಠರೋಗ ನಿರ್ಮೂಲನಾಧಿಕಾರಿ ಡಾ.ವಿರೇಂದ್ರಕುಮಾರ, ತಜ್ಞ ವೈದ್ಯರಾದ ಡಾ.ಬಾಲುವೆಂಕಟೇಶ್, ಡಾ.ಕೊಟ್ರೇಶ್, ಡಾ.ಶ್ರೀಧರ್, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ಹೆಚ್ ದಾಸಪ್ಪನವರ ಸೇರಿದಂತೆ ತಾಲೂಕಾ ಆರೋಗ್ಯಾಧಿಕಾರಿಗಳು, ಆಡಳಿತ ವೈದ್ಯಾಧಿಕಾರಿಗಳು ಇತರರು ಉಪಸ್ಥಿತರಿದ್ದರು.

### ಮೇ 26 ರಿಂದ ಎಸ್‌ಎಸ್‌ಎಲ್‌ಸಿ ಪರೀಕ್ಷೆ-2

## ಪರೀಕ್ಷಾ ಕೇಂದ್ರಗಳ ಸುತ್ತ 200 ಮೀ. ವ್ಯಾಪ್ತಿ ನಿಷೇಧಾಜ್ಞೆ ಜಾರಿಗೊಳಿಸಿ ಡಿಸಿ ಪ್ರಶಾಂತ್ ಕುಮಾರ್ ಮಿಶ್ರಾ ಆದೇಶ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮೇ23-ಜಿಲ್ಲೆಯಾದ್ಯಂತ 24 ಪರೀಕ್ಷಾ ಕೇಂದ್ರಗಳಲ್ಲಿ ಮೇ 26 ರಿಂದ ಜೂ.02 ರವರೆಗೆ ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿ ವತಿಯಿಂದ ಎಸ್‌ಎಸ್‌ಎಲ್‌ಸಿ ಪರೀ-ಕ್ಷೆ-2 ನಡೆಯಲಿದ್ದು, ಪರೀಕ್ಷಾ ಕೇಂದ್ರಗಳ ಸುತ್ತ 200 ಮೀಟರ್ ಆವರಣವನ್ನು ಭಾರತೀಯ ನಾಗರಿಕ ಸುರಕ್ಷಾ ಸಂಹಿತಾ 2023 ರ ಕಲಂ 163 ರ ಅಡಿ ಮೇರೆಗೆ ನಿರ್ಬಂಧಿತ ಪ್ರದೇಶವೆಂದು ಘೋಷಿಸಿ ಜಿಲ್ಲಾ ದಂಡಾಧಿಕಾರಿಯೂ ಆಗಿರುವ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಆದೇಶಿಸಿದ್ದಾರೆ.

ಪರೀಕ್ಷಾ ಕೇಂದ್ರಗಳ ಸುತ್ತಲೂ 200 ಮೀಟರ್ ಆವರಣದಲ್ಲಿನ ಜೆರಾಕ್ಸ್ ಸೆಂಟರ್ ಮತ್ತು ಇಂಟರ್‌ನೆಟ್ ಸೆಂಟರ್‌ಗಳನ್ನು ಕಾರ್ಯ ನಿರ್ವಹಿಸದಂತೆ ಪ್ರತಿಬಂಧಿಸಿ ಆದೇಶಿಸಿದ್ದಾರೆ.

ಆ ಪ್ರದೇಶದಲ್ಲಿ ಅನಧಿಕೃತ ವ್ಯಕ್ತಿ ಮತ್ತು ವ್ಯಕ್ತಿಗಳ ಗುಂಪುಗಳಿಗೆ ಪ್ರವೇಶವನ್ನು ನಿಷೇಧಿಸಿದೆ. ಈ ಆದೇಶವು ಪರೀಕ್ಷೆಯ ಮೇಲ್ವಿಚಾರಣೆ

ಕಾರ್ಯನಿರ್ವಹಿಸುವ ಸಿಬ್ಬಂದಿಗಳಿಗೆ

ಅನ್ವಯಿಸುವುದಿಲ್ಲ ಎಂದು ಅವರು ಹೊರಡಿಸಿರುವ ಆದೇಶದಲ್ಲಿ ತಿಳಿಸಿದ್ದಾರೆ.

### ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಅಧ್ಯಕ್ಷತೆಯಲ್ಲಿ ಜಿಲ್ಲಾ ಮಾಸಿಕ ಕೆಡಿಪಿ ಪ್ರಗತಿ ಪರಿಶೀಲನಾ ಸಭೆ

# ಮುಂಗಾರು ಪೂರ್ವ ಮಳೆ; 72 ಗಂಟೆಯೊಳಗೆ ಹಾನಿ ಪರಿಹಾರ ನೀಡಬೇಕು: ಡಾ.ಕೆ.ವಿ ತ್ರಿಲೋಕ ಚಂದ್ರ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮೇ 23-ಪೂರ್ವ ಮುಂಗಾರು ಆರಂಭಗೊಂಡ ಹಿನ್ನಲೆಯಲ್ಲಿ ಮಳೆಯಿಂದಾಗುವ ಹಾನಿಯನ್ನು ಸೂಕ್ತ ಪರಿಶೀಲನೆ ನಡೆಸಿ 72 ಗಂಟೆಯೊಳಗೆ ಹಾನಿ ಪರಿಹಾರ ಒದಗಿಸಲು ಮುಂದಾಗಬೇಕು ಎಂದು ಜಿಪಂ ಆಡಳಿತಾಧಿಕಾರಿಯೂ ಆಗಿರುವ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಡಾ.ಕೆ.ವಿ.ತ್ರಿಲೋಕಚಂದ್ರ ಅವರು ಹೇಳಿದರು.



ನಗರದ ಜಿಲ್ಲಾ ಪಂಚಾಯತ್‌ನ ನಜೀರ್ ಸಭಾಂಗಣದಲ್ಲಿ ಶುಕ್ರವಾರ ಏರ್ಪಡಿಸಿದ್ದ ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮಗಳ (20 ಅಂಶ ಸೇರಿದಂತೆ) ಏಪ್ರಿಲ್ ಮಾಹೆಯ ಮಾಸಿಕ ಕೆಡಿಪಿ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರ ಮಾಹಿತಿಯನ್ವಯ ಈ ಬಾರಿ ವಾಡಿಕೆಗಿಂತ ಹೆಚ್ಚು ಮಳೆಯಾಗುವ ಸಂಭವವಿದ್ದು, ಈಗಾಗಲೇ ಜಿಲ್ಲೆಗೆ ಆರೆಂಜ್ ಅಲರ್ಟ್ ಘೋಷಿಸಲಾಗಿದೆ. ಹಾಗಾಗಿ ಆಯಾ ತಾಲ್ಲೂಕು ತಹಶೀಲ್ದಾರರು ಹಾಗೂ ಕಂದಾಯ ಅಧಿಕಾರಿಗಳು ಈ ಕುರಿತು ಎಚ್ಚರ ವಹಿಸಬೇಕು ಎಂದು ನಿರ್ದೇಶನ ನೀಡಿದರು.

ಜಿಲ್ಲೆಯಲ್ಲಿ ವಾರ್ಷಿಕ 599.5 ಮಿ.ಮೀ ವಾಡಿಕೆ ಮಳೆಯಿದ್ದು, ಕಳೆದ ವರ್ಷ ಮೇ 20 ರವರೆಗೆ 53.6 ಮಿ.ಮೀ ಮಳೆಯಾಗಿದೆ ಹಾಗೂ ಪ್ರಸ್ತುತ ವರ್ಷ 88.4 ಮಿ.ಮೀ ಮಳೆಯಾಗಿ ಸುಮಾರು ಶೇ.64 ರಷ್ಟು ಹೆಚ್ಚು ಮಳೆ ಸುರಿದಿದೆ. ಅದೇರೀತಿಯಾಗಿ ಜಿಲ್ಲೆಯಲ್ಲಿ ಬಿತ್ತನೆ ಬೀಜ ಹಾಗೂ ರಸಗೊಬ್ಬರದ ದಾಸ್ತಾನು ಸಮರ್ಪಕವಾಗಿದ್ದು, ಬಿತ್ತನೆ ಬೀಜ ಮತ್ತು ರಸಗೊಬ್ಬರಗಳ ಆಭಾವದ ಕೊರತೆಯಿಲ್ಲ ಎಂದು ಜಂಟಿ ಕೃಷಿ ನಿರ್ದೇಶಕ ಸೋಮಸುಂದರ್ ಅವರು ಸಭೆಗೆ ತಿಳಿಸಿದರು.

ಇದಕ್ಕೆ ಪ್ರತಿಕ್ರಿಯಿಸಿದ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು, ರೈತರಿಗೆ ಕಳಪೆ ಗುಣಮಟ್ಟದ ಬಿತ್ತನೆ ಬೀಜ ಮತ್ತು ರಸಗೊಬ್ಬರ ಪೂರೈ-ಕೆಯಾಗದಂತೆ ಎಚ್ಚರವಹಿಸಬೇಕು. ದಾಸ್ತಾನು ಲಭ್ಯತೆ ಕುರಿತು ರೈತರಿಗೆ ಮಾಹಿತಿ ನೀಡಬೇಕು. ರೈತ ಸಂಪರ್ಕ ಕೇಂದ್ರಗಳಲ್ಲಿ ದಾಸ್ತಾನಿನ ಕುರಿತು ಮಾಹಿತಿ ಪ್ರದರ್ಶಿಸಬೇಕು. ರೈತರು ಕಾಯುವುದು, ನೂಕು-ನುಗ್ಗಲು ಹಾಗೂ ಇತರೆ ವ್ಯವಸ್ಥೆಗಳಿಗೆ ತೊಂದರೆಯಾಗದಂತೆ ನೋಡಿಕೊಳ್ಳಬೇಕು ಎಂದು ತಿಳಿಸಿದರು.

ಜಿಲ್ಲೆಯಲ್ಲಿ ಕೃಷಿ ಪರಿಕರಗಳ ಪರಿವೀಕ್ಷರ ತಂಡಗಳನ್ನು ರಚಿಸಿ ಬಿತ್ತನೆ ಬೀಜ, ರಸಗೊಬ್ಬರ ಮತ್ತು ಕೀಟನಾಶಕಗಳ ಗುಣಮಟ್ಟ ಹಾಗೂ ಬೆಲೆ ನಿಯಂತ್ರಣಕ್ಕೆ ಕ್ರಮವಹಿಸಲಾಗಿದೆ. ಕೃಷಿ ಪರಿಕರ ಮಾರಾಟಗಾರರು ಗುಣಮಟ್ಟದ ಬಿತ್ತನೆ ಬೀಜ, ರಸಗೊಬ್ಬರ ಮತ್ತು ಕೀಟನಾಶಕಗಳನ್ನೇ ಮಾರಾಟ ಮಾಡಬೇಕು ತಪ್ಪಿದಲ್ಲಿ ಕಾನೂನು ರೀತ್ಯ ಕಠಿಣ ಕ್ರಮ ಜರುಗಿಸಲಾಗುವುದು ಎಂಬುದರ ಕುರಿತು ಸಭೆ ನಡೆಸುವ ಮೂಲಕ ಅವರಿಗೆ ಮಾಹಿತಿ ನೀಡಲಾಗುತ್ತಿದೆ ಎಂದು ಜಂಟಿ ಕೃಷಿ ನಿರ್ದೇಶಕ ಸೋಮಸುಂದರ್ ಅವರು ಸಭೆಗೆ ವಿವರಿಸಿದರು.

ಜಿಲ್ಲೆಯಲ್ಲಿ ಕುಡಿಯುವ ನೀರು ಸರಬರಾಜು ಮೂಲಗಳ ಬಗ್ಗೆ ನಿಗಾವಹಿಸಬೇಕು. ಕಲುಷಿತ ನೀರು ಕಲಬೆರಕೆಗೊಳ್ಳದಂತೆ ಎಚ್ಚರವಹಿಸಬೇಕು. ಮುಖ್ಯವಾಗಿ ಕುಡಿಯುವ ನೀರಿನ ಪೈಪ್ ಲೈನ್‌ಗಳು ಸೋರಿಕೆ ಕಂಡುಬಂದಲ್ಲಿ ಕೂಡಲೇ ರಿಪೇರಿ ಮಾಡಿಸಲು ಕ್ರಮವಹಿಸಬೇಕು. ಕುಡಿಯುವ ನೀರು ಸಮಸ್ಯೆದೋರುವ ಕುರಿತು ಮಾಧ್ಯಮಗಳಲ್ಲಿ ವರದಿಯಾದರೇ, ಕೂಡಲೇ ಎಚ್ಚೆತ್ತುಕೊಳ್ಳಬೇಕು. ಮುಂಗಾರು ಪೂರ್ವ ಮಳೆ ಆರಂಭಗೊಂಡಿರುವ ಹಿನ್ನಲೆಯಲ್ಲಿ ಮಳೆ ನೀರು ಸರಾಗವಾಗಿ ಹರಿಯಲು ರಾಜಕಾಲುವೆಗಳನ್ನು ಸ್ವಚ್ಛಗೊಳಿಸಬೇಕು ಎಂದು ಪಾಲಿಕೆ ಆಯುಕ್ತರು, ತಾಪಂ ಇಒಗಳು ಕಾಳಜಿವಹಿಸಬೇಕು ಎಂದು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು ಸೂಚಿಸಿದರು.

ಕೊರೊನಾ ಉಲ್ಬಣಗೊಳ್ಳುತ್ತಿರುವ ಹಿನ್ನಲೆಯಲ್ಲಿ ಸೂಕ್ತ ನಿಗಾ ವಹಿಸಬೇಕು ಎಂದು ಜಿಲ್ಲಾ ಆರೋಗ್ಯಾಧಿಕಾರಿಗಳಿಗೆ ನಿರ್ದೇಶನ ನೀಡಿದ ಉಸ್ತುವಾರಿ ಕಾರ್ಯದರ್ಶಿಗಳು, ಈವರೆಗೆ ಜಿಲ್ಲೆಯಲ್ಲಿ ವರದಿಯಾದ ಡೆ-ಂಗ್ಯೂ ಪ್ರಕರಣಗಳ ಬಗ್ಗೆ ಮಾಹಿತಿ ಪಡೆದುಕೊಂಡು ಸೂಕ್ತ ಸಲಹೆ ಸೂಚನೆ ನೀಡಿದರು.

ಜಿಲ್ಲೆಯ ಎಸ್‌ಎಸ್‌ಎಲ್‌ಸಿ ಪರೀಕ್ಷೆ ಫಲಿತಾಂತ ಬಗ್ಗೆ ವಿಚಾರಿಸಿದ ಶಾಲಾ ಶಿಕ್ಷಣ ಇಲಾಖೆಯ ಆಯುಕ್ತರಾದ ಡಾ.ಕೆ.ವಿ.ತ್ರಿಲೋಕಚಂದ್ರ ಅವರು, ಎಸ್‌ಎಸ್‌ಎಲ್‌ಸಿ-2 ಪರೀಕ್ಷೆಗೆ ಕೈಗೊಂಡಿರುವ ಸಿದ್ದತೆ ಕುರಿತು ಡಿಡಿಪಿಐ ಅಧಿಕಾರಿಗಳಿಂದ ಮಾಹಿತಿ ಪಡೆದರು.

ಇದಕ್ಕೆ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರಾದ ಉಮಾದೇವಿ ಅವರು ಮಾಹಿತಿ ನೀಡಿ, ಜಿಲ್ಲೆಯಲ್ಲಿ ಎಸ್‌ಎಸ್‌ಎಲ್‌ಸಿ-2 ಪರೀಕ್ಷೆಗೆ ಒಟ್ಟು 9,999 ವಿದ್ಯಾರ್ಥಿಗಳು ನೋಂದಾಯಿಸಿಕೊಂಡಿದ್ದು, ಎಲ್ಲಾ ಮಕ್ಕಳಿಗೆ ಶಿಕ್ಷಕರು ವಿಶೇಷ ತರಗತಿಗಳ ಮೂಲಕ ಅಭ್ಯಾಸಿಸಲು ಮಾರ್ಗದರ್ಶನ ಮಾಡಿದ್ದಾರೆ ಎಂದರು.

ಬಳಿಕ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಅವರು ಮಾತನಾಡಿ, ಇದೇ ಮೇ 29 ರಿಂದ ಶಾಲಾ ವಿಭಾಗದ ತರಗತಿಗಳು ಆರಂಭಗೊಳ್ಳಿದ್ದು, ಎಲ್ಲಾ ಶಾಲೆಗಳಲ್ಲಿ ಸ್ವಚ್ಛತೆ ಕಾರ್ಯ ಕೈಗೊಳ್ಳಬೇಕು. ಪಠ್ಯ-ಪುಸ್ತಕ ವಿತರಣೆ ಮಾಡಬೇಕು. ಶಾಲೆಗಳ ಅವರಣದಲ್ಲಿ ಹೊರಗಿನವರು ಬಾರದಂತೆ ನೋಡಿಕೊಳ್ಳಬೇಕು ಈ ಕುರಿತು ಬಿಆರ್‌ಓ ಮತ್ತು ಸಿಆರ್‌ಪಿಗಳಿಗೆ ನಿರ್ದೇಶನ ನೀಡಬೇಕು ಎಂದರಲ್ಲದೇ, ಜಿಲ್ಲೆಯಲ್ಲಿ ಶಾಲೆಗಳ ಆಸ್ತಿ ನೋಂದಣಿಗೆ ಬಾಕಿಯಿರುವ ಶಾಲೆಗಳ ಮಾಹಿತಿ ನೀಡಬೇಕು. ಈ ಬಗ್ಗೆ ಆಯಾ ತಾಲ್ಲೂಕಿನ ತಹಶೀಲ್ದಾರರಿಗೆ ಸೂಚಿಸಲಾಗುವುದು ಎಂದು ಡಿಡಿಪಿಐ ಅಧಿಕಾರಿಗಳಿಗೆ ತಿಳಿಸಿದರು.

ಜಿಲ್ಲೆಯಲ್ಲಿ ಲೋಕೋಪಯೋಗಿ ಮತ್ತು ಪಂಚಾಯತ್‌ರಾಜ್ ಅಭಿವೃದ್ಧಿ ಇಲಾಖೆಗಳ ಕಾಮಗಾರಿಗಳು ಗುಣಮಟ್ಟತೆ ಕುಂಠಿತಗೊಳ್ಳುತ್ತಿವೆ. ಶಾಲೆಯೊಂದರ ರಿಪೇರಿ ಕಾಮಗಾರಿಯು ಮತ್ತೆ ರಿಪೇರಿಗೆ ಬಂದಿದ್ದು, ಈ ಕುರಿತು ಅಸಮಾಧಾನ ವ್ಯಕ್ತಪಡಿಸಿದ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು ಕೂಡಲೇ ಕ್ರಮ ಕೈಗೊಳ್ಳಬೇಕು ಎಂದು ಜಿಪಂ ಸಿಇಒ ಅವರಿಗೆ ನಿರ್ದೇಶನ ನೀಡಿದರು.

ಸಭೆಯಲ್ಲಿ ರಾಜ್ಯಾದಾಂದ್ಯತ ನಡೆಯುತ್ತಿರುವ ಪರಿಶಿಷ್ಟ ಜಾತಿಗಳ ಸಮಗ್ರ ಸಮೀಕ್ಷೆ ಕುರಿತು ಜಿಲ್ಲೆಯಲ್ಲಿ ಈವರೆಗೆ ಆಗಿರುವ ಅಭಿವೃದ್ಧಿ ಕುರಿತು ಮಾಹಿತಿ ಪಡೆದುಕೊಂದರಲ್ಲದೇ, ಸಮಸ್ಯೆ ಕಂಡುಬಂದಲ್ಲಿ ಗಮನಕ್ಕೆ ತರಬೇಕು ಎಂದು ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರಿಗೆ ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹ್ಯಾರೀಸ್ ಸುಮೈರ್, ಜಿಪಂ ಉಪಕಾರ್ಯದರ್ಶಿ ಗಿರಿಜಾ ಶಂಕರ್, ಜಿಪಂ ಯೋಜನಾ ನಿರ್ದೇಶಕ ವಾಗೀಶ್ ಶಿವಾಚಾರ್ಯ ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ತಾಪಂ ಇಒಗಳು ಉಪಸ್ಥಿತರಿದ್ದರು.

## ವಿಕಲಚೇತನರು ಸರ್ಕಾರಿ ಸೌಲಭ್ಯ ಪಡೆದು ಅಭಿವೃದ್ಧಿಯಾಗಬೇಕು: ಗೋವಿಂದಪ್ಪ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮೇ23-ವಿಶೇಷಚೇತನರು ಸರ್ಕಾರದ ಸೌಲಭ್ಯಗಳನ್ನು ಪಡೆದು ಸ್ವಾವಲಂಬಿ ಜೀವನ ನಡೆಸಬೇಕು ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಧಿಕಾರಿ ಗೋವಿಂದಪ್ಪ ಅವರು ಹೇಳಿದರು.

ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ವತಿಯಿಂದ ಜಿಲ್ಲಾಧಿಕಾರಿಗಳ ಕಚೇರಿ ಅವರಣದಲ್ಲಿ ಶುಕ್ರವಾರ ಆಯೋಜಿಸಿದ್ದ "ಭಾರತ ಸುಗಮ್ಯ ಯಾತ್ರಾ" ಅರಿವು ಮೂಡಿಸುವ ಜಾಥಾ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ವಿಶೇಷಚೇತನರು ಸರ್ಕಾರಿ ಕಚೇರಿಗಳಲ್ಲಿ ಅವರಿಗಿರುವ ಸೌಲಭ್ಯಗಳ ಮಾಹಿತಿ ಹೊಂದಬೇಕು. ಮುಖ್ಯವಾಗಿ ಅವರಿಗೆ ಯಾವುದೇ ಅಡೆತಡೆ ಇಲ್ಲದಂತೆ ಓಡಾಡಲು ಪೂರಕ ಪರಿಸರ ಕಲ್ಪಿಸಿಕೊಟ್ಟು ಮುಖ್ಯವಾಹಿನಿಗೆ ಬರುವಂತೆ ನೋಡಿಕೊಳ್ಳಬೇಕು ಎಂದರು.

"ಭಾರತ ಸುಗಮ್ಯ ಯಾತ್ರಾ" ಅರಿವು ಮೂಡಿಸುವ ಜಾಥಾಗೆ ಜಿಲ್ಲಾಧಿಕಾರಿಗಳ ಕಚೇರಿಯ ತಹಶೀಲ್ದಾರರಾದ ಗೌಸಿಯಾ ಬೇಗಂ ಅವರು ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಅಂಗವಿಕಲರ ಕಲ್ಯಾಣ ಇಲಾಖೆಯ ಸಿಬಂದ್ದಿಗಳು ಸೇರಿದಂತೆ ವಿಶೇಷಚೇತನರು, ಹಿರಿಯ ನಾಗರೀಕರು ಮತ್ತು ಇತರರು ಭಾಗವಹಿಸಿದ್ದರು.

## ಮೆಣಸಿನಕಾಯಿ ಬೆಳೆಗಾರರು, ನರ್ಸರಿ ಮಾಲೀಕರು ಸೂಕ್ತ ಕ್ರಮ ಅನುಸರಿಸಿ: ಸಂತೋಷ್ ಸಪ್ಪಂಡಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮೇ23-ಜಿಲ್ಲೆಯ ಪ್ರಸಕ್ತ ಸಾಲಿನ ಮೆಣಸಿನಕಾಯಿ ಬೆಳೆಗಾರರು ಹಾಗೂ ನರ್ಸರಿ ಮಾಲೀಕರು ಉತ್ತಮ ಬೆಳೆ ಪಡೆಯಲು ಸೂಕ್ತ ಕ್ರಮ ಅನುಸರಿಸಬೇಕು ಎಂದು ತೋಟಗಾರಿಕೆ ಉಪನಿರ್ದೇಶಕ ಸಂತೋಷ ಸಪ್ಪಂಡಿ ಅವರು ತಿಳಿಸಿದ್ದಾರೆ. ನರ್ಸರಿ ಮಾಲೀಕರು ತಮ್ಮ ನರ್ಸರಿ ಚಟುವಟಿಕೆಗಳ ನಿಯಮಬದ್ಧಗೊಳಿಸುವ ನಿಟ್ಟಿನಲ್ಲಿ ಕಡ್ಡಾಯವಾಗಿ ಜಿ.ಎಸ್.ಟಿ ನೋಂದಾಯಿಸಿಕೊಳ್ಳಬೇಕು. ನರ್ಸರಿ ಜಾಗ ಗುತ್ತಿಗೆ ಪಡೆದಿದ್ದಲ್ಲಿ ನಿಯಾಮನುಸಾರ ಒಡಂಬಡಿಕೆ ಮಾಡಿಸಿಕೊಳ್ಳಬೇಕು. ನರ್ಸರಿ ಮುಂಭಾಗದಲ್ಲಿ ನರ್ಸರಿಯ ಹೆಸರು ಇರುವ ನಾಮ ಫಲಕ ಅಳವಡಿಸುವುದು ಕಡ್ಡಾಯವಾಗಿದೆ ಎಂದು ಹೇಳಿದ್ದಾರೆ.

ರೈತರಿಗೆ ಉತ್ತಮ ಗುಣಮಟ್ಟ ಸಸಿಗಳನ್ನು ನೀಡಲು ಅಳವಡಿಸಿಕೊಳ್ಳಬೇಕಾದ ವೈಜ್ಞಾನಿಕ ನರ್ಸರಿ ಕ್ರಮಗಳಾದ ಸ್ಟರ್ಲೈಜ್ಡ್, ಕೋಕೋಪಿಟ್ ಬಳಕೆ, ತರಕಾರಿ ನರ್ಸರಿಗಳಲ್ಲಿ ಕೀಟ ನಿರೋಧಕ ಬಲೆಗಳ ಬಳಕೆಯ ಬಗ್ಗೆ ಹಾಗೂ ಬೀಜೋಪಚಾರ ಕುರಿತು ಕಟ್ಟುನಿಟ್ಟಾಗಿ ಅಳವಡಿಸಿಕೊಳ್ಳಬೇಕು. ನಿಗಧಿತ ಬೆಲೆಗಿಂತ ಅಧಿಕ ಹಣ ಪಡೆದರೆ ಹಾಗೂ ನಿಯಮಗಳ ಪಾಲನೆ ಮಾಡಿದಲ್ಲಿ ಕಾನೂನು ಕ್ರಮ ಕೈಗೊಳಲಾಗುವುದು ಎಂದು ತಿಳಿಸಿದ್ದಾರೆ. ಮೆಣಸಿನಕಾಯಿ ಬೆಳೆಗಾರರು ಕಡ್ಡಾಯವಾಗಿ ನರ್ಸರಿ ಮೆಣಸಿನಕಾಯಿ ಸಸಿಗಳನ್ನು ಜಿ.ಎಸ್.ಟಿ ನೋಂದಣಿಯಾಗಿರುವ ನರ್ಸರಿಗಳಿಂದಲೇ ಖರೀದಿಸಿ, ಪಾವತಿ ರಸೀದಿಯನ್ನು ಪಹಣಿಯಲ್ಲಿರುವ ರೈತ ಹೆಸರಿಗೆ ಪಡೆದು ನಾಟಿ ಮಾಡಬೇಕು ಹಾಗೂ ಪಡೆದಂತಹ ಪಾವತಿ ರಸೀದಿಯನ್ನು ಬೆಳೆ ಮಾರಾಟ ಆಗುವವರೆಗೂ ಭದ್ರವಾಗಿ ಇಟ್ಟುಕೊಳ್ಳಬೇಕು.

ನರ್ಸರಿಗಳಲ್ಲಿ ಮಾಲೀಕರು ತಾವು ಉಪಯೋಗಿಸುವ ಬೀಜ, ಗೊಬ್ಬರ ಮತ್ತು ಕೀಟನಾಶಕಗಳ ವಿವರಗಳನ್ನು ಕಡ್ಡಾಯವಾಗಿ ವಹಿಯಲ್ಲಿ ನಮೂದಿಸಬೇಕು. ರೈತರಿಂದ ಬೀಜ ಪಡೆದಿರುವ ಮತ್ತು ಸಸಿಗಳನ್ನು ವಿತರಿಸಿದ ದಿನಾಂಕಗಳ ವಹಿ ಸಹ ನಿರ್ವಹಿಸಬೇಕು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ತೋಟಗಾರಿಕೆ ಇಲಾಖೆ: ವಿವಿಧ ಯೋಜನೆಗಳಡಿ ಸಹಾಯಧನಕ್ಕಾಗಿ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮೇ23-ತೋಟಗಾರಿಕೆ ಇಲಾಖೆ ವತಿಯಿಂದ ಜಿಲ್ಲೆಯಲ್ಲಿ ತೋಟಗಾರಿಕೆ ಬೆಳೆ ಬೆಳೆಯುವ ರೈತ ಫಲಾನುಭವಿಗಳಿಗೆ 2025-26ನೇ ಸಾಲಿನಲ್ಲಿ ಅನುಷ್ಠಾನಗೊಳಿಸಲಾಗುತ್ತಿರುವ ವಿವಿಧ ಯೋಜನೆಗಳಡಿ ಸಹಾಯಧನಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ ಎಂದು ತೋಟಗಾರಿಕೆ ಇಲಾಖೆಯ ಉಪನಿರ್ದೇಶಕ ಸಂತೋಷ್ ಸಪ್ಪಂಡಿ ಅವರು ತಿಳಿಸಿದ್ದಾರೆ.

*ವಿವಿಧ ಯೋಜನೆಗಳು:*

*ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣಾ ಉದ್ಯೋಗ ಖಾತರಿ ಯೋಜನೆ:*

ಹೊಸ ಪ್ರದೇಶ ವಿಸ್ತರಣೆ ಕಾರ್ಯಕ್ರಮದಡಿ (ಬಾಳೆ, ಅಂಜೂರ, ದಾಳಿಂಬೆ, ನುಗ್ಗೆ, ಪೇರಲ, ಪಪ್ಪಾಯ, ತೆಂಗು, ಡ್ರಾಗನ್ ಫ್ರೂಟ್, ನೇರಳೆ, ಸಪೋಟ, ಮಾವು, ಸೀತಾಫಲ್, ಹುಣಸೆ, ಕರಿಬೇವು, ಮತ್ತು ಗುಲಾಬಿ ಹಾಗೂ ಇತರೆ) ಬೆಳೆಗಳಿಗೆ ಮತ್ತು ಬದುಗಳಲ್ಲಿ ತೆಂಗು ಸಸಿ ನಾಟಿ, ಕೃಷಿ ಹೊಂಡ, ಬದುಗಳ ನಿರ್ಮಾಣ, ಕೊಳವೆ ಬಾವಿ ಮರುಪೂರಣ ಘಟಕ ಇತ್ಯಾದಿ ಅನುಷ್ಠಾನಗೊಳಿಸಲಾಗುವುದು.

*ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆ:*

ಹೊಸ ಪ್ರದೇಶ ವಿಸ್ತರಣೆ, ಕೃಷಿಹೊಂಡ, ಈರುಳ್ಳಿ ಶೇಖರಣ ಘಟಕ, ನೆರಳು ಪರದೆ, ಪ್ಯಾಕ್‌ಹೌಸ್ ಮತ್ತು ತಳ್ಳುವ ಗಾಡಿ ವಿವಿಧ ಘಟಕಗಳಿಗೆ ಎಲ್ಲಾ ವರ್ಗದ ರೈತರಿಗೆ ಶೇ.50 ರಷ್ಟು ಲಭ್ಯತೆಯ ಮೇರೆಗೆ ಸಹಾಯಧನ ನೀಡಲಾಗುತ್ತದೆ.

*ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆಯ-ಹನಿ ನೀರಾವರಿ:*

ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆಯ-ಹನಿ ನೀರಾವರಿ ಕಾರ್ಯಕ್ರಮದಡಿ ಸಹಾಯಧನ ನೀಡಲಾಗುತ್ತದೆ. ಹೊಸದಾಗಿ ಅಳವಡಿಸುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಫಲಾನುಭವಿಗಳಿಗೆ ಶೇ.90 ರಂತೆ ಸಹಾಯಧನ ವಿತರಿಸಲಾಗುವುದು.

*ಕೇಂದ್ರಪುರಸ್ಕೃತ ರಾಷ್ಟ್ರೀಯ ಖಾದ್ಯ ತೈಲ ಅಭಿಯಾನ-ತಾಳೆ ಬೆಳೆ ಯೋಜನೆ:*

2025-26ನೇ ಸಾಲಿನಲ್ಲಿ ತಾಳೆಬೆಳೆ ಬೆಳೆಯ ಆಸಕ್ತಿ ಇರುವ ರೈತರು ಕೇಂದ್ರ ಪುರಸ್ಕೃತ ಖಾದ್ಯ ತೈಲ ಅಭಿಯಾನ -ತಾಳೆ ಬೆಳೆ ಯೋಜನೆಯಡಿ ಹೊಸ ಪ್ರದೇಶ ವಿಸ್ತರಣೆ ಕಾರ್ಯಕ್ರಮಕ್ಕೆ ಪ್ರತೀ ಹೆಕ್ಟೇರ್‌ಗೆ ಶೇ.50 ರಂತೆ ರೂ.29000/-, ಮೊದಲನೇ ವರ್ಷದಿಂದ ನಾಲ್ಕು ವರ್ಷಗಳ ಬೇಸಾಯ ನಿರ್ವಹಣೆ ಕಾರ್ಯಕ್ರಮಕ್ಕೆ, ಪ್ರತೀ ವರ್ಷ ನಿರ್ವಹಣೆಗೆ ರೂ.5250/- ಪ್ರತೀ ಹೆಕ್ಟೇರ್‌ಗೆ ಸಹಾಯಧನ ನೀಡಲಾಗುವುದು.

ಅಂತರಬೆಳೆಗೆ ರೂ.5250/-, ಎತ್ತರವಾದ ತಾಳೆ ಮರಗಳಿಂದ ಹಣ್ಣು ಕಟಾವು ಮಾಡಲು ರೂ.1000/- ಪ್ರತೀ ಟನ್‌ಗೆ (ಗರಿಷ್ಠ 60ಟನ್ ಮಾತ್ರ) ಸಹಾಯಧನ, ಡೀಸೆಲ್ ಪಂಪ್ ಸೆಟ್ ಕೊಳ್ಳಲು ರೂ.8000/-, ಕೊಳವೆ ಬಾವಿಗೆ ರೂ.50000/- ಸಹಾಯಧನ, ತಾಳೆ ಹಣ್ಣು ಕಟಾವು ಮಾಡುವ ಉಪಕರಣ, ಮೋಟೊರೈಸ್ಡ್ ಚಿಸೆಲ್ ರೂ.15000/-, ತಾಳೆ ಹಣ್ಣು ಕಟಾವು ಏಣಿ ರೂ.5000/-, ಚಾಫ್ ಕಟ್ಟರ್ ರೂ.50000/- , ಟ್ರಾಕ್ಟರ್ ಟ್ರೋಲಿ ಖರೀದಿಸಲು ರೂ.160000/- ಶೇ.50 ರಂತೆ ಸಹಾಯಧನ ಸೌಲಭ್ಯ ನೀಡಲಾಗುವುದು.

ಮೇಲ್ಕಂಡ ಎಲ್ಲಾ ಯೋಜನೆಗಳಡಿ ಅಲ್ಪಸಂಖ್ಯಾತರಿಗೆ ಶೇ.15, ವಿಕಲಾಂಗಚೇತನರಿಗೆ ಶೇ.5 ಮತ್ತು ರೈತ ಮಹಿಳೆಯರಿಗೆ ಶೇ.33 ರಷ್ಟು ಈ ಯೋಜನೆಗಳಡಿ ಅನುದಾನ ಮೀಸಲಿರಿಸಲಾಗಿದ್ದು, ಆಸಕ್ತ ರೈತ ಫಲಾನುಭವಿಗಳು ಈ ಯೋಜನೆಗಳ ಸೌಲಭ್ಯ ಸದುಪಯೋಗ ಪಡೆದುಕೊಳ್ಳಬೇಕು.

ಆಸಕ್ತ ತೋಟಗಾರಿಕೆ ರೈತರು ಆಯಾ ತಾಲ್ಲೂಕು ರೈತ ಸಂಪರ್ಕ ಕೇಂದ್ರದ ಅಧಿಕಾರಿಗಳನ್ನು ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಸತಿ ನಿಲಯ ಪ್ರವೇಶಕ್ಕೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮೇ 23:ಸಂಡೂರು ತಾಲ್ಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯಡಿ ಕಾರ್ಯ ನಿರ್ವಹಿಸುತ್ತಿರುವ ಯಶವಂತ ನಗರದ ಮಹರ್ಷಿ ವಾಲ್ಮೀಕಿ ಆದಿವಾಸಿ ಬುಡಕಟ್ಟು ವಸತಿ ಶಾಲೆಗೆ 1 ನೇ ತರಗತಿ ಮತ್ತು 6 ನೇ ತರಗತಿಯ ಪರಿಶಿಷ್ಟ ಪಂಗಡ ವಿದ್ಯಾರ್ಥಿಗಳಿಂದ ಪ್ರಸಕ್ತ ಸಾಲಿಗೆ ವಸತಿ ನಿಲಯ ಪ್ರವೇಶಾತಿಗೆ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿಗಳನ್ನು ಇದೇ ವಸತಿ ಶಾಲೆಯಲ್ಲಿ ಪಡೆದು ಭರ್ತಿ ಮಾಡಿ ಜೂ 06 ರೊಳಗಾಗಿ ತಾಲ್ಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಕಚೇರಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ದೂ.08395-200073 ಗೆ ಸಂಪರ್ಕಿಸಬಹುದು ಎಂದು ಸಂಡೂರು ತಾಲ್ಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಾರ್ವಜನಿಕರು ಸೇವಿಸುವ ಆಹಾರದ ಗುಣಮಟ್ಟ ಕಾಪಾಡಲು ಅಗತ್ಯ ಕ್ರಮ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು,ಮೇ 23–ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಇಲಾಖೆಯ, ಔಷಧ ಆಡಳಿತವು ರಾಜ್ಯದಲ್ಲಿ ತಯಾರಾಗುವ ಮತ್ತು ಮಾರಾಟಕ್ಕಾಗಿ ಸರಬರಾಜಾಗುತ್ತಿರುವ ಗುಣಮಟ್ಟವಲ್ಲದ ಔಷಧಗಳ ಮತ್ತು ಕಾಂತಿವರ್ಧಕಗಳ ಮೇಲೆ ನಿಯಮಾನುಸಾರ ನಿಯಂತ್ರಣ ಕ್ರಮಗಳನ್ನು ಕೈಗೊಳ್ಳುವುದು ಮತ್ತು ಉತ್ತಮ ಗುಣಮಟ್ಟದ, ಸುರಕ್ಷಿತ ಹಾಗೂ ಪರಿಣಾಮಕಾರಿ ಔಷಧಗಳನ್ನು ಸರ್ಕಾರ ನಿಗದಿ ಪಡಿಸಿದ ಬೆಲೆಗಳಲ್ಲಿ ಗ್ರಾಹಕರಿಗೆ ದೊರಕುವಂತೆಮಾಡುವುದೇಇಲಾಖೆಯ ಮುಖ್ಯ ಉದ್ದೇಶವಾಗಿರುತ್ತದೆ.

ಅಂತೆಯೇ ಇಲಾಖೆಯ ಆಹಾರ ಸುರಕ್ಷತಾ ವಿಭಾಗವು ಸಾರ್ವಜನಿಕರು ಸೇವಿಸುವ ಆಹಾರದ ಗುಣಮಟ್ಟ ಮತ್ತು ಸುರಕ್ಷತಾ ಅಂಶಗಳನ್ನು ಖಾತರಿಪಡಿಸುವ ಮೂಲಕ ಸಾರ್ವಜನಿಕರ ಆರೋಗ್ಯವನ್ನು ಕಾಪಾಡುವ ನಿಟ್ಟಿನಲ್ಲಿ ಕರ್ತವ್ಯ ನಿರ್ವಹಿಸುತ್ತಿದೆ.

ಔಷಧಆಡಳಿತವು,ಏಪ್ರಿಲ್ 2025ರ ಮಾಹೆಯಲ್ಲಿ ಔಷಧ ಪರೀಕ್ಷಾ ಪ್ರಯೋಗಾಲಯ ಬೆಂಗಳೂರು, ಹುಬ್ಬಳ್ಳಿ, ಬಳ್ಳಾರಿಗಳಲ್ಲಿ ಒಟ್ಟು 1,353 ಔಷಧ ಮಾದರಿಗಳನ್ನು ವಿಶ್ಲೇಷಿಸಲಾಗಿದೆ. ಅವುಗಳಲ್ಲಿ 30 ಅನುತ್ತಮ ಗುಣಮಟ್ಟದದೆಂದು ಘೋಷಿಸಿರುತ್ತದೆ.

ಏಪ್ರಿಲ್ 2025ರ ಮಾಹೆಯಲ್ಲಿ ಅನುತ್ತಮಗುಣಮಟ್ಟದಔಷಧವೆಂದು ಘೋಷಿತವಾದ ಹಾಗೂ ಇತರ ಉಲ್ಲಂಘನೆಗಾಗಿ ವಿವಿಧ ತಯಾರಿಕ ಸಂಸ್ಥೆಗಳ ವಿರುದ್ಧ 37 ಪ್ರಕರಣಗಳಲ್ಲಿ ಮೊಕದ್ದಮೆ ಹೂಡಲು ಅನುಮತಿ ನೀಡಲಾಗಿದೆ. ಔಷಧ ಆಡಳಿತ ವಿಭಾಗದಲ್ಲಿ 26 ಸೇವೆಗಳನ್ನು ಸಕಾಲದಡಿಯಲ್ಲಿಒದಗಿಸಲಾಗುತ್ತಿದ್ದು ಏಪ್ರಿಲ್ ಮಾಹೆಯಲ್ಲಿ 903 ಅರ್ಜಿಗಳನ್ನುಸ್ವೀಕರಿಸಿದ್ದು,ಹಿಂದಿನ ಬಾಕಿ ಅರ್ಜಿಗಳು ಸೇರಿ ಒಟ್ಟು 993 ಅರ್ಜಿಗಳನ್ನು ವಿಲೇವಾರಿ ಮಾಡಲಾಗಿರುತ್ತದೆ.

ಔಷಧ ಆಡಳಿತದ ಅಮಲುಜಾರಿ ಅಧಿಕಾರಿಗಳು ಏಪ್ರಿಲ್ 2025ರ ಮಾಹೆಯಲ್ಲಿ ಒಟ್ಟು 1,340 ಔಷಧ ಮಾದರಿಗಳನ್ನು ವಿಶ್ಲೇಷಣೆಗೆ ಪಡೆದಿರುತ್ತಾರೆ. 2,229 ಔಷಧ ಮಳಿಗೆಗಳನ್ನು ಪರಿವೀಕ್ಷಣೆ ಕೈಗೊಂಡಿರುತ್ತಾರೆ. ಅವುಗಳಲ್ಲಿ ನಿಯಮ ಉಲ್ಲಂಘನೆ ಮಾಡಿರುವ ಒಟ್ಟು128 ಸಂಸ್ಥೆಗಳ ಪರವಾನಿಗೆಗಳನ್ನು ಅಮಾನತ್ತುಗೊಳಿಸಲಾಗಿದೆ ಹಾಗೂ 07 ಪರವಾನಿಗೆಗಳನ್ನು ರದ್ದುಗೊಳಿಸಲಾಗಿದೆ.

ರಾಜ್ಯದಲ್ಲಿ ಎನ್.ಎಸ್.ಕ್ಯೂ ಬಂದಂತಹ ಪ್ರಕರಣಗಳಲ್ಲಿ ಏಪ್ರಿಲ್–2025ರ ಮಾಹೆಯಲ್ಲಿ ಸುಮಾರು ರೂ 11.5 ಲಕ್ಷ ಮೌಲ್ಯದ ಅನುತ್ತಮ ಗುಣಮಟ್ಟದ ಔಷಧಗಳನ್ನು ಮಾರುಕಟ್ಟೆಯಿಂದ ಹಿಂಪಡೆದು ಜಪ್ತಿ ಮಾಡಲಾಗಿರುತ್ತದೆ ಬೆಂಗಳೂರು ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತದ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಗ್ರಾಮೀಣ ಅಭಿವೃದ್ಧಿ ಮತ್ತು ನವೀಕರಿಸಬಹುದಾದ ಇಂಧನದ ಮೂಲಗಳನ್ನು ಉತ್ತೇಜಿಸಲು ಒಡಂಬಡಿಕೆ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು,ಮೇ23–ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯ, ಹಾಗೂ ಹೋಂಡಾ ಟ್ರೇಡಿಂಗ್ ಕಾರ್ಪೊರೇಷನ್ ಇಂಡಿಯಾ ಪ್ರೈ. ಲಿಮಿಟೆಡ್, ಸಹಯೋಗದೊಂದಿಗೆ ಇಂದು ಜೈವಿಕ ಇಂಧನ ಅಭಿವೃದ್ಧಿ ಹಾಗೂ ಕೃಷಿ ಬಯೋಮಾಸ್ ಬಳಕೆಯ ಒಡಂಬಡಿಕೆಯನ್ನು ಮಾಡಿಕೊಳ್ಳಲಾಯಿತು.

ಈ ಒಡಂಬಡಿಕೆಯು ಸೂರ್ಯಕಾಂತಿ ಹೈಬಿಡ್ ಬೀಜಗಳ ಉತ್ಪಾದನೆ, ಕೃಷಿ ಸಮುದಾಯಗಳನ್ನು ಒಳಗೊಂಡ ಜೈವಿಕ ಇಂಧನ ಪೂರೈಕೆ ಸರಪಳಿ ಅಭಿವೃದ್ಧಿ, ಮಣ್ಣಿನ ಸಾವಯವ ಇಂಗಾಲವನ್ನು ಹೆಚ್ಚಿಸಲು ಬಯೋಚಾರ್ ಉತ್ಪಾದನೆಗೆ ಕೃಷಿ ಬಯೋಮಾಸ್ ತ್ಯಾಜ್ಯವನ್ನು ಬಳಸುವುದು ಮತ್ತು ಕೃಷಿ ಉಪಕರಣಗಳ ಪೂರೈಕೆಯ ಉಪಕ್ರಮಗಳನ್ನು ಒಳಗೊಂಡಿದೆ.

ಈ ಒಡಂಬಡಿಕೆಯು ಸುಸ್ಥಿರ ಕೃಷಿ, ಗ್ರಾಮೀಣ ಅಭಿವೃದ್ಧಿ ಮತ್ತು ನವೀಕರಿಸಬಹುದಾದ ಇಂಧನದ ಮೂಲಗಳನ್ನು ಉತ್ತೇಜಿಸಲು ಸಾರ್ವಜನಿಕ –ಖಾಸಗಿ ಪಾಲುದಾರಿಕೆಯನ್ನು ಬಲಪಡಿಸುವಲ್ಲಿ ಮಹತ್ವದ ಪಾತ್ರವನ್ನು ವಹಿಸುತ್ತದೆ.

ಕಾರ್ಯಕ್ರಮದಲ್ಲಿ ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯದ ಕುಲಪತಿ ಡಾ: ಎಸ್.ವಿ.ಸುರೇಶ ಅವರಿಗೆ ಹೋಂಡಾ ಟ್ರೇಡಿಂಗ್ ಕಾರ್ಪೊರೇಷನ್ ಇಂಡಿಯಾ ಪ್ರೈ. ಲಿಮಿಟೆಡ್ ನ ವ್ಯವಸ್ಥಾಪಕ ನಿರ್ದೇಶಕರು ಕೋಜಿ ಸೈತೋಹ್, ತೋಷಿಮಿಟ್ಸು ಸುಡಾ, ಕೆಂಟಾ ಮಿಜುಟಾನಿ, ಶ್ರೀಮತಿ ಅಂಜನಾ ಮುಖಿಜಾ ಮತ್ತು ಆಶ್ವಿನಿ ಅವರು ಒಡಂಬಡಿಕೆ ಪತ್ರವನ್ನು ಹಸ್ತಾಂತರಿಸಿದರು ಎಂದು ಪ್ರಕಟಣೆಯಲ್ಲಿ ತಿಳಿಸಿದೆ.

## ರಾಜ್ಯದ ಸಣ್ಣ ನೀರಾವರಿ ಸಚಿವರ ಪ್ರವಾಸ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮೇ.23–ರಾಜ್ಯದ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್. ಎಸ್. ಭೋಸರಾಜು ಅವರು ರಾಯಚೂರದಿಂದ ರಸ್ತೆ ಮೂಲಕ ಮೇ 25 ರಂದು ಭಾನುವಾರ ರಾತ್ರಿ 7.30 ಗಂಟೆಗೆ ಕಲಬುರಗಿಗೆ ಆಗಮಿಸಿ ವಾಸ್ತವ್ಯ ಮಾಡುವರು.


ಮೇ26ರಂದು ಸೋಮವಾರ ಬೆಳಿಗ್ಗೆ 10 ಗಂಟೆಗೆ ಕಲಬುರಗಿ ಜಿಲ್ಲೆಯಲ್ಲಿ ಸಣ್ಣ ನೀರಾವರಿ ಇಲಾಖೆಯ ವತಿಯಿಂದ ನಡೆಯುತ್ತಿರುವ ವಿವಿಧ ಕಾಮಗಾರಿಗಳ ಪರಿವೀಕ್ಷಣೆ ಮಾಡುವರು. ಮಧ್ಯಾಹ್ನ 3 ಗಂಟೆಗೆ ಸಣ್ಣ ನೀರಾವರಿ ಇಲಾಖೆಯ ಕಲಬುರಗಿ ವಿಭಾಗದ ಪ್ರಗತಿ ಪರಿಶೀಲನಾ ಸಭೆ ನಡೆಸುವರು. ಸಂಜೆ 5.30 ಗಂಟೆಗೆ ಕಲಬುರಗಿ ಜಿಲ್ಲಾ ಕಾಂಗ್ರೆಸ್ ಸಮಿತಿ ಕಚೇರಿಗೆ ಭೇಟಿ ನೀಡುವರು. ರಾತ್ರಿ 8.45 ಗಂಟೆಗೆ ಕಲಬುರಗಿಯಿಂದ ಸೋಲ್ಲಾಪುರ ಹಾಸನ್ ಎಕ್ಸ್‌ಪ್ರೆಸ್ ರೈಲಿನ ಮೂಲಕ ಬೆಂಗಳೂರಿಗೆ ಪ್ರಯಾಣಿಸುವರು.

## ರಾಜ್ಯದ ಸಣ್ಣ ನೀರಾವರಿ ಸಚಿವರ ಪ್ರವಾಸ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಮೇ.23:ರಾಜ್ಯದ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್. ಎಸ್. ಭೋಸರಾಜು ಅವರು ರಾಯಚೂರದಿಂದ ರಸ್ತೆ ಮೂಲಕ ಮೇ 25 ರಂದು ಭಾನುವಾರ ರಾತ್ರಿ 7.30 ಗಂಟೆಗೆ ಕಲಬುರಗಿಗೆ ಆಗಮಿಸಿ ವಾಸ್ತವ್ಯ ಮಾಡುವರು.

ಮೇ 26 ರಂದು ಸೋಮವಾರ ಬೆಳಿಗ್ಗೆ 10 ಗಂಟೆಗೆ ಕಲಬುರಗಿ ಜಿಲ್ಲೆಯಲ್ಲಿ ಸಣ್ಣ ನೀರಾವರಿ ಇಲಾಖೆಯ ವತಿಯಿಂದ ನಡೆಯುತ್ತಿರುವ ವಿವಿಧ ಕಾಮಗಾರಿಗಳ ಪರಿವೀಕ್ಷಣೆ ಮಾಡುವರು. ಮಧ್ಯಾಹ್ನ 3 ಗಂಟೆಗೆ ಸಣ್ಣ ನೀರಾವರಿ ಇಲಾಖೆಯ ಕಲಬುರಗಿ ವಿಭಾಗದ ಪ್ರಗತಿ ಪರಿಶೀಲನಾ ಸಭೆ ನಡೆಸುವರು. ಸಂಜೆ



5.30 ಗಂಟೆಗೆ ಕಲಬುರಗಿ ಜಿಲ್ಲಾ ಕಾಂಗ್ರೆಸ್ ಸಮಿತಿ ಕಚೇರಿಗೆ ಭೇಟಿ ನೀಡುವರು. ರಾತ್ರಿ 8.45 ಗಂಟೆಗೆ ಕಲಬುರಗಿಯಿಂದ ಸೋಲ್ಲಾಪುರ ಹಾಸನ್ ಎಕ್ಸ್‌ಪ್ರೆಸ್ ರೈಲಿನ ಮೂಲಕ ಬೆಂಗಳೂರಿಗೆ ಪ್ರಯಾಣಿಸುವರು.

## ಕಮ್ಯೂನಿಟಿ ಮೊಬಲೈಜರ್ ಹುದ್ದೆಗಳಿಗೆ ಅರ್ಜಿ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.23– ಬಾಗಲಕೋಟೆ ನಗರಸಭೆ ವ್ಯಾಪ್ತಿಯಲ್ಲಿ ಸ್ವಚ್ಛ ಭಾರತ್ ಮಿಷನ್ ಅಡಿಯಲ್ಲಿ ಮಾಹಿತಿ, ಶಿಕ್ಷಣ ಮತ್ತು ಸಂವಹನ (ಐಇಸಿ) ಘಟಕದಡಿಯಲ್ಲಿ ಘನ ಮತ್ತು ದ್ರವತ್ಯಾಜ್ಯ ನಿರ್ವಹಣೆಯ ಕುರಿತು ನಗರ ಸ್ಥಳೀಯ ಮಟ್ಟದಲ್ಲಿ ವಿವಿಧ ಬಗೆಯ ಚಟುವಟಿಕೆಗಳನ್ನು ಕೈಗೊಳ್ಳಲು ಎನ್‌ಯುಎಲ್‌ಎಮ್‌ಡೇ ಯೋಜನೆಯ ಸ್ವಸಹಾಯ ಸದಸ್ಯರುಗಳನ್ನು ಒಟ್ಟು 19 ಕಮ್ಯೂನಿಟಿ ಮೊಬಲೈಜರ್ ಹುದ್ದೆಗೆ ಮಾಸಿಕ ಗೌರವಧನ ಆಧಾರದ ಮೇಲೆ ತಾತ್ಕಾಲಿಕ ಸೇವೆ ಪಡೆದುಕೊಳ್ಳಲು ಅರ್ಜಿ ಆಹ್ವಾನಿಸಲಾಗಿದೆ. ಅಭ್ಯರ್ಥಿಗಳು ಕನಿಷ್ಠ ಎಸ್‌ಎಸ್‌ಎಲ್‌ಸಿ ಪಾಸ್ ಮಾಡಿರಬೇಕು. ಕನ್ನಡ ಭಾಷೆ ಓದು, ಬರಹದ ಜ್ಞಾನ ಹೊಂದಿರಬೇಕು, 18ರಿಂದ 45 ವರ್ಷದೊಳಗಿದ್ದು, ಎನ್‌ಯುಎಲ್‌ಎಮ್‌ಡೇ ಯೋಜನೆಯ ಸ್ವಸಹಾಯ ಸಂಘದ ಸಕ್ರೀಯ ಸದಸ್ಯರಾಗಿರಬೇಕು. ಕಂಪ್ಯೂಟರ್ ಜ್ಞಾನ ಮತ್ತು ಅನುಭವ ಕಡ್ಡಾಯವಾಗಿದೆ.

ಆಸಕ್ತ ಅಭ್ಯರ್ಥಿಗಳು ಅಗತ್ಯ ದಾಖಲಾತಿಯೊಂದಿಗೆ ಜೂನ್. 21ರ ಒಳಗಾಗಿ ನಿಗದಿತ ಅರ್ಜಿ ನಮೂನೆ ಪಡೆದು ಭರ್ತಿ ಮಾಡಿ ಖುದ್ದಾಗಿ ಪೌರಾಯುಕ್ತರು ನಗರಸಭೆ ಬಾಗಲಕೋಟೆ ಇವರಿಗೆ ದ್ವಿಪ್ರತಿಯಲ್ಲಿ ಸಲ್ಲಿಸತಕ್ಕದ್ದು. ಹೆಚ್ಚಿನ ಮಾಹಿತಿಗಾಗಿ ನಗರಸಭೆಯ ಆರೋಗ್ಯ ಶಾಖೆಯನ್ನು ಸಂಪರ್ಕಿಸುವಂತೆ ಪೌರಾಯಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಉತ್ತಮ ಮೌಲ್ಯಗಳಿಂದ ಬದುಕು ರೂಪಿಸಿಕೊಳ್ಳಿ : ಡಾ.ಚಂದಾವರಕರ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.23– ಸಂಸ್ಕೃತಿ, ಮೌಲ್ಯಗಳು ನಮ್ಮ ಜೀವನಾಧಾರವಾಗಿದ್ದು, ಇವುಗಳನ್ನು ಜೀವನದಲ್ಲಿ ಅಳವಡಿಸಿಕೊಂಡು ಮೌಲ್ಯಯುತ ಬದುಕನ್ನು ರೂಪಿಸಿಕೊಳ್ಳಬೇಕು ಎಂದು ನವದೆಹಲಿಯ ಎನ್‌ಸಿಟಿಇ ಅಧ್ಯಕ್ಷರಾದ ಡಾ.ಮೀನಾ ಚಂದಾವರಕರ ಹೇಳಿದ್ದಾರೆ.

ನಗರದ ಬಿ.ವ್ಹಿ.ವ್ಹಿ. ಸಂಘದ ಅಕ್ಕಮಹಾದೇವಿ ಮಹಿಳಾ ಕಲಾ, ವಿಜ್ಞಾನ ಹಾಗೂ ವಾಣಿಜ್ಯ ಮಹಾವಿದ್ಯಾಲಯದಲ್ಲಿ ಪ್ರಸಕ್ತ ಸಾಲಿನ ವಾರ್ಷಿಕೋತ್ಸವ, ಪ್ರತಿಭಾ ಪುರಸ್ಕಾರ ಹಾಗೂ ಪದವಿ ಅಂತಿಮ ವರ್ಷದ ವಿದ್ಯಾರ್ಥಿನಿಯರ ಬೀಳ್ಕೊಡುಗೆ ಸಮಾರಂಭದ ಮುಖ್ಯ ಅತಿಥಿಗಳಾಗಿ ಅವರು ಮಾತನಾಡಿದರು.

ನಾವು ಎಷ್ಟೇ ಎತ್ತರಕ್ಕೆ ಬೆಳೆದರೂ ಕೃತಜ್ಞತೆ, ದಯಾಳುತನವನ್ನು ಎಂದಿಗೂ ಮರೆಯಬಾರದು. ನಾವು ಮಾಡಿದ ಉತ್ತಮ ಕಾರ್ಯಗಳು ಸರ್ವಕಾಲಕ್ಕೂ ಆದರಣೀಯವಾಗಿರುತ್ತವೆ ಎಂದು ಹೇಳಿದ ಡಾ.ಚಂದಾವರಕರ, ಪ್ರತಿಯೊಬ್ಬ ವಿದ್ಯಾರ್ಥಿಗಳು ಆತ್ಮವಿಶ್ವಾಸ ಬೆಳೆಸಿಕೊಂಡು ಸಾಧಿಸುವ ಛಲ ಹೊಂದಿರಬೇಕು ಎಂದು ಹೇಳಿದರು.

ಉತ್ತಮ ಹವ್ಯಾಸಗಳನ್ನು ಜೀವನದುದ್ದಕ್ಕೂ ರೂಢಿಸಿಕೊಂಡು ಸಮಾಜಕ್ಕೆ ಕೊಡುಗೆ ನೀಡಬೇಕು. ಸದ್ದಿಲ್ಲದ ಸಾಧನೆ ಇರಬೇಕು, ಸಾಧನೆಯೇ ಸದ್ದಾಗಬೇಕು ಅಂದಾಗ ಮಾತ್ರ ಜೀವನದಲ್ಲಿ ಯಶಸ್ಸು ಕಾಣಲು ಸಾಧ್ಯ ಎಂದರು.

ಅಧ್ಯಕ್ಷತೆಯನ್ನು ಬ.ವಿ.ವಿ. ಸಂಘದ ಕಾಲೇಜುಗಳ ಆಡಳಿತ ಮಂಡಳಿಯ ಕಾರ್ಯಾಧ್ಯಕ್ಷ ಗುರುಬಸವ ಸೂಳಿಭಾವಿ ವಹಿಸಿದ್ದರು. ಇದೇ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯಕ್ಕೆ ರ್‍ಯಾಂಕ ಪಡೆದ ಪ್ರೇಮ ಹುನಗುಂದ, ಮಹಿಮಾ ರಾಜಪುರೋಹಿತ ಹಾಗೂ ಹೀನಾ ಕಮತರ ಹಾಗೂ ವಿಶ್ವವಿದ್ಯಾನಿಲಯದ ಬ್ಲೂಗಳಾದ ನಾಲ್ಕು ವಿದ್ಯಾರ್ಥಿನಿಯರನ್ನು ಸನ್ಮಾನಿಸಲಾಯಿತಲ್ಲದೇ, ಪ್ರತಿಭಾನ್ವಿತ ವಿದ್ಯಾರ್ಥಿನಿಯರಿಗೆ ಪಾರಿತೋಷಕ ವಿತರಿಸಲಾಯಿತು.

ಭಾಗ್ಯಶ್ರೀ ನಡಗಡ್ಡಿ

## ಮಹಾತ್ಮ ಗಾಂಧಿ ನರೇಗಾ ಯೋಜನೆ: ಎನ್.ಎಮ್.ಎಮ್.ಎಸ್. ಆ್ಯಪ್‌ದಲ್ಲಿ ಹಾಜರಾತಿ ದಾಖಲಿಸುವಲ್ಲಿ ಲೋಪದೋಷವನ್ನುಂಟು ಮಾಡಿದ ಅಧಿಕಾರಿ/ಸಿಬ್ಬಂದಿಗಳಿಗೆ ದಂಡವಿಧಿಸಿ ಆದೇಶ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮೇ.23–ಕಲಬುರಗಿ ಜಿಲ್ಲೆಯಲ್ಲಿ ಮಹಾತ್ಮ ಗಾಂಧಿ ನರೇಗಾ ಯೋಜನೆಯಡಿ ಎನ್.ಎಮ್.ಎಮ್.ಎಸ್. ಆ್ಯಪ್ (NMMS App) ಹಾಜರಾತಿ ದಾಖಲಿಸುವಲ್ಲಿ ಲೋಪದೋಷವನ್ನುಂಟು ಮಾಡಿ ಸರ್ಕಾರಕ್ಕೆ ನಷ್ಟ ಉಂಟು ಮಾಡಿರುವ ಹಿನ್ನೆಲೆಯಲ್ಲಿ ಈ ಕೆಳಕಂಡ ಅಧಿಕಾರಿ/ಸಿಬ್ಬಂದಿಗಳಿಗೆ ದಂಡವಿಧಿಸಿ ಕಲಬುರಗಿ ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಭಂವರ್ ಸಿಂಗ್ ಮೀನಾ ಅವರು ಆದೇಶ ಹೊರಡಿಸಿದ್ದಾರೆ.

ಮಹಾತ್ಮ ಗಾಂಧಿ ನರೇಗಾ ಯೋಜನೆಯು ಗ್ರಾಮೀಣ ಭಾಗದ ಜನರು ಗುಳೆ ಹೋಗುವುದನ್ನು ತಡೆಗಟ್ಟಲು ಒಂದು ಉತ್ತಮವಾದ ಯೋಜನೆಯಾಗಿದೆ. ಈ ಯೋಜನೆಯನ್ನು ಜಿಲ್ಲೆಯಾದ್ಯಂತ ಅನುಷ್ಠಾನಗೊಳಿಸಲಾಗುತ್ತಿದೆ. ಕಾಮಗಾರಿ ನಡೆಯುವ ಸ್ಥಳದಲ್ಲಿ ಕೆಲಸ ನಿರ್ವಹಿಸುತ್ತಿರುವ ಕೂಲಿಕಾರರ ಹಾಜರಾತಿಯನ್ನು ಎನ್.ಎಮ್.ಎಮ್.ಎಸ್. ಆ್ಯಪ್ (NMMS App) ಮೂಲಕ ದಾಖಲಿಸಿದ್ದು, ಎನ್.ಎಮ್. ಎಮ್.ಎಸ್. ಆ್ಯಪ್ (NMMS App) ಮೂಲಕ ದಾಖಲಿಸಿದ ಹಾಜರಾತಿಯನ್ನು ಎಮ್‌ಐಎಸ್. (MIS) ವರದಿಯನ್ನು ಪರಿಶೀಲಿಸಿದಾಗ ಲೋಪದೋಷಗಳನ್ನು ಕಂಡು ಬಂದಿರುವ ಹಿನ್ನೆಲೆಯಲ್ಲಿ ಈ ಕೆಳಕಂಡ ಅಧಿಕಾರಿ/ಸಿಬ್ಬಂದಿಗಳಿಗೆ ತಲಾ 1000 ರೂ.ಗಳ ದಂಡ ವಿಧಿಸಿ ವಸೂಲಾತಿಗೆ ಆದೇಶಿಸಲಾಗಿದೆ.

ಚಿಂಚೋಳಿ ತಾಲೂಕಿನ ಗಾರಂಪಳ್ಳಿ ಗ್ರಾಮ ಪಂಚಾಯತಿಯ ಪಂಚಾಯತ್ ಅಭಿವೃದ್ಧಿ ಅಧಿಕಾರಿ ವಾಹಿದ್ ಅಲಿ, ತಾಂತ್ರಿಕ ಸಹಾಯಕ ಅನೀಲ್ ರಾಠೋಡ, ಗ್ರಾಮ ಕಾಯಕ ಮಿತ್ರ ಯಾಸ್ಮಿನ್ ಹಾಗೂ ಕಾಯಕ ಬಂಧು ಬಸಯ್ಯಾ ಇವರಿಗೆ ದಂಡ ವಿಧಿಸಲಾಗಿದೆ. ಜೇವರ್ಗಿ ತಾಲೂಕಿನ ಬಿರಾಳ(ಬಿ) ಗ್ರಾಮ ಪಂಚಾಯತಿಯ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಅಖಂಡಪ್ಪ ಹುಗ್ಗಿ, ತಾಂತ್ರಿಕ ಸಹಾಯಕ ರೋಷನ್, ಬರೆಗಾಲು ತಜ್ಞ (BFT) ರಾದ ಮಹೆಬೂಬ್, ಕಾಯಕ ಬಂದುಗಳಾದ ಸೂರ್ಯಕಾಂತ್ ಮತ್ತು ಬಸಣ್ಣಗೌಡ ಇವರಿಗೆ ದಂಡ ವಿಧಿಸಲಾಗಿದೆ. ಜೇವರ್ಗಿ ತಾಲೂಕಿನ ಕಲ್ಲೂರ(ಕೆ) ಗ್ರಾಮ ಪಂಚಾಯತಿಯ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಶ್ರೀಕಾಂತ್ ದೊಡಮನಿ, ತಾಂತ್ರಿಕ ಸಹಾಯಕ ಅನೀಲ್ ಪಾಟೀಲ್, ಗ್ರಾಮ ಕಾಯಕ ಮಿತ್ರ ರಂಜಿತಾ ಹಾಗೂ ಕಾಯಕ ಬಂಧು ರಾಕೇಶ ಇವರಿಗೆ ದಂಡ ವಿಧಿಸಲಾಗಿದೆ.

ಜೇವರ್ಗಿ ತಾಲೂಕಿನ ಕೆಲ್ಲೂರ ಗ್ರಾಮ ಪಂಚಾಯತಿಯ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಅರವಿಂದ ಚವ್ಹಾಣ, ಕಾಯಕ ಬಂಧು ಈರಣ್ಣ ಹರಿಚಂದ್ರ, ಗ್ರಾಮ ಕಾಯಕ ಮಿತ್ರ ಭಾಗ್ಯಶ್ರೀ, ಬರೆಗಾಲು ತಜ್ಞ ನಾಗಣ್ಣಗೌಡ ಹಾಗೂ ತಾಂತ್ರಿಕ ಸಹಾಯಕ ಶಶಿಕಾಂತ ನಂದೂರ ಇವರಿಗೆ ದಂಡ ವಿಧಿಸಲಾಗಿದೆ. ಸದರಿ ಅಧಿಕಾರಿ ಹಾಗೂ ಸಿಬ್ಬಂದಿಗಳು ಈ ದಂಡದ ಮೊತ್ತವನ್ನು ಡಿ.ಡಿ. ಮೂಲಕ ಭರಿಸಿ ರಸೀದಿ ಪ್ರತಿಯನ್ನು ಕಲಬುರಗಿ ಜಿಲ್ಲಾ ಪಂಚಾಯತ್ ಕಚೇರಿಗೆ ಸಲ್ಲಿಸಬೇಕು.

ಮೇಲ್ಕಂಡ ಸಂಬಂಧಪಟ್ಟ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ದಂಡನೆಯ ಮೊತ್ತವನ್ನು ಭರಿಸಿದೇ ಇದ್ದಲ್ಲಿ ಇವರ ವಿರುದ್ಧ ಶಿಸ್ತು ಕ್ರಮ ಜರುಗಿಸಲಾಗುತ್ತದೆ. ಅದೇ ರೀತಿ ಮೇಲ್ಕಂಡ ಸಂಬಂದಪಟ್ಟ ಗ್ರಾಮ ಪಂಚಾಯಿತಿಗಳ ಗಾಯಕ ಬಂಧು, ಗ್ರಾಮ ಕಾಯಕ ಮಿತ್ರರು, ಬರೆಗಾಲು ತಜ್ಞರು ಹಾಗೂ ತಾಂತ್ರಿಕ ಸಹಾಯಕರು ದಂಡನೆಯ ಮೊತ್ತವನ್ನು ಭರಿಸಬೇಕು. ಇದ–ಕ್ಕೆ ತಪ್ಪಿದ್ದಲ್ಲಿ ತಮ್ಮ ಸೇವೆಯನ್ನು ಹಿಂಪಡೆಯ ಲಾಗುತ್ತದೆ ಎಂದು ಅವರು ತಿಳಿಸಿದ್ದಾರೆ.

### ಮೇ 26 ರಿಂದ ಎಸ್.ಎಸ್.ಎಲ್.ಸಿ–2 ಪರೀಕ್ಷೆ:

## ಪರೀಕ್ಷೆ ಸುಸೂತ್ರವಾಗಿ ನಡೆಸುವಂತೆ ಅಪರ ಜಿಲ್ಲಾಧಿಕಾರಿ ಸೂಚನೆ

ಕಲಬುರಗಿ,ಮೇ.23–ಎಸ್.ಎಸ್. ಎಲ್.ಸಿ.–2 ಪರೀಕ್ಷೆಯು ಇದೇ ಮೇ 26 ರಿಂದ ಜೂನ್ 2ರ ವರೆಗೆ ಜಿಲ್ಲೆಯಾದ್ಯಂತ 73 ಪರೀಕ್ಷಾ ಕೇಂದ್ರದಲ್ಲಿ ನಡೆಯಲಿದ್ದು, ಯಾವುದೇ ಅಹಿತಕರ ಘಟನೆಗೆ ಅವಕಾಶ ನೀಡದೆ ಪರೀಕ್ಷೆ ಸುಸೂತ್ರವಾಗಿ ಮತ್ತು ಪಾರದರ್ಶಕವಾಗಿ ನಡೆಸುವಂತೆ ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ ಅವರು ಪರೀಕ್ಷಾ ಕೇಂದ್ರದ ಮುಖ್ಯಸ್ಥರಿಗೆ ಸೂಚನೆ ನೀಡಿದರು.

## ಡೇ ಕೇರ್ ಕಿಮೋಥೆರಪಿ ಕುರಿತ ತರಬೇತಿ ಕಾರ್ಯಕ್ರಮ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.23–ಡೇಕೇರ್ ಕಿಮೋಥೆರಪಿ ಸೆಂಟರ್ ಎಂಬ ಒಂದು ದಿನದ ತರಬೇತಿಯನ್ನು ಬಿ.ವಿ.ವಿ ಸಂಘದ ಎಸ್ ನಿಜಲಿಂಗಪ್ಪ ಮೆಡಿಕಲ್ ಕಾಲೇಜಿನ ಹಾನಗಲ್ಲ ಕುಮಾರೇಶ್ವರ ಆಸ್ಪತ್ರೆ ಹಾಗೂ ಜಿಲ್ಲಾ ಆರೋಗ್ಯ ಹಾಗೂ ಕುಟುಂಬ ಕಲ್ಯಾಣ ಇಲಾಖೆ ಬಾಗಲಕೋಟೆ ಇವರ ಸಹಯೋಗದಲ್ಲಿ ಕುಮಾರೇಶ್ವರ ಆಸ್ಪತ್ರೆಯಲ್ಲಿ ಶುಕ್ರವಾರ ಹಮ್ಮಿಕೊಳ್ಳಲಾಗಿತ್ತು.

ತರಬೇತಿ ಉದ್ಘಾಟಿಸಿ ಮಾತನಾಡಿದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಎನ್.ಮಂಜುನಾಥ, ಡೇ ಕೇರ್ ಕಿಮೊಥೆರಪಿ ಸೆಂಟರ್ ಎಂಬುದು ಒಂದು ವಿಶೇಷ ಸೌಲಭ್ಯವಾಗಿದ್ದು, ರೋಗಿಗಳು ಆಸ್ಪತ್ರೆಯಲ್ಲಿ ರಾತ್ರಿಯಿಡಿ ಉಳಿಯುವ ಅಗತ್ಯವಿಲ್ಲದೆ ಆರಾಮದಾಯಕ, ಹೊರರೋಗಿ ವ್ಯವಸ್ಥೆಯಲ್ಲಿ ಕಿಮೊಥೆರಪಿ ಚಿಕಿತ್ಸೆಯನ್ನು ಪಡೆಯಬಹುದಾಗಿದೆ. ತರಬೇತಿಯಲ್ಲಿ ಭಾಗವಹಿಸಿದ ಎಲ್ಲ ಆರೋಗ್ಯ ಸಿಬ್ಬಂದಿಯವರು ತರಬೇತಿ ಪಡೆದ ಆರೋಗ್ಯ ಸಿಬ್ಬಂದಿ ರೋಗಿಗಳಿಗೆ ಉತ್ತಮ ಸೇವೆ ಸಲ್ಲಿಸಬೇಕು ಹಾಗೂ ಕ್ಯಾನ್ಸರ್ ಪೀಡಿತ ರೋಗಿಗಳು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಮೆಡಿಕಲ್ ಕಾಲೇಜಿನ ಪ್ರಾಚಾರ್ಯೆ ಡಾ.ಭುವನೇಶ್ವರಿ ಯಳಮಲಿ, ಬಿ.ವಿ.ವಿ ಸಂಘದ ಕಾರ್ಯಾಧ್ಯಕ್ಷ ವೀರಣ್ಣ ಚರಂತಿಮಠ ಹಾಗೂ ವೈದ್ಯಕೀಯ ಆಡಳಿತ ಮಂಡಳಿ ಕಾರ್ಯಾಧ್ಯಕ್ಷ ಅಶೋಕ ಸಜ್ಜನ (ಬೇವೂರ) ಅವರ ಜನಪರ ಕಾಳಜಿಯಿಂದ ಜಿಲ್ಲಾ ಆಸ್ಪತ್ರೆಯೊಂದಿಗೆ ಒಡಂಬಡಿಕೆಗೆ ಒಪ್ಪಿಕೊಂಡು ನಮ್ಮ ಆಸ್ಪತ್ರೆಯನ್ನು ಕ್ಯಾನ್ಸರ್ ಉಲ್ಲೇಖಿತ ಕೇಂದ್ರವನ್ನಾಗಿ ಮಾಡಿದ್ದಾರೆ ಎಂದು ಹೇಳಿದರು.

ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಮಹೇಶ ಕೋಣಿ, ಜಿಲ್ಲಾ ಸಮೀಕ್ಷಣಾ ಅಧಿಕಾರಿ ಡಾ.ದಯಾನಂದ, ಕುಮಾರೇಶ್ವರ ಆಸ್ಪತ್ರೆಯ ವೈದ್ಯಕೀಯ ಅಧೀಕ್ಷಕ ಡಾ.ಶ್ರೀರಾಮ ಕೋರಾ, ಸರ್ಜಿಕಲ್ ಅಂಕಾಲಾಜಿಸ್ಟ್ ಡಾ.ಬಸವರಾಜ ಅಂಕಲಕೋಟ, ಎಚ್.ಸಿ.ಜಿ.ಹುಬ್ಬಳ್ಳಿ ಆಸ್ಪತ್ರೆಯ ಅಂಕಾಲಾಜಿಸ್ಟ್ ಡಾ.ಶ್ರೀಕಾಂತ ವೇದಿಕೆ ಮೇಲೆ ಉಪಸ್ಥಿತರಿದ್ದರು.

## ‘ತಿರಂಗಾ ಯಾತ್ರೆ’ಯಶಸ್ವಿಗೆ ಸಂಘದ ಸಂಪೂರ್ಣ ಸಹಕಾರ:ರಾಮನಗೌಡ



ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟಿ:ಪಟ್ಟಣದಲ್ಲಿ ಆಪರೇಷನ್ ಸಿಂಧೂರ ಕಾರ್ಯಾಚರಣೆಯನ್ನು ಸ್ಮರಣೀಯ

ವನ್ನಾಗಿಸಲು ಹಾಗೂ ಸೈನಿಕರ ಮನೋಬಲ ಹೆಚ್ಚಿಸಲು ಪಟ್ಟಣದ ಸಮಸ್ತ ನಾಗರಿಕರ ಹಾಗೂ ವಿವಿಧ ಸಂಘ ಸಂಸ್ಥೆಗಳ ಸಹಯೋಗದಲ್ಲಿ ಮೇ 26ರಂದು "ತಿರಂಗಾ ಯಾತ್ರೆ" ಕಾರ್ಯಕ್ರಮ ನಡೆಯಲಿದ್ದು ಇದರ ಯಶಸ್ವಿಗೆ ನಮ್ಮ ಸಂಘದ ಸದಸ್ಯರು ಶಕ್ತಿ ಮೀರಿ ಪ್ರಯತ್ನಿಸಲಿದ್ದಾರೆ ಎಂದು ಮಾಜಿ ಅರೆ ಸೈನಿಕ ಪಡೆ ಸಂಘದ ಅಧ್ಯಕ್ಷ ರಾಮನಗೌಡ ಬಿರಾದಾರ(ಗೊಟಖಂಡಕಿ) ಹೇಳಿದರು. ಪಟ್ಟಣದ ಪ್ರವಾಸಿ ಮಂದಿರದಲ್ಲಿ ಗುರುವಾರ ಮಾಜಿ ಸೈನಿಕರ ಸಂಘದ ವತಿಯಿಂದ ಕರೆದ ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿದರು. ಈ ಅಭೂತಪೂರ್ವ ಕಾರ್ಯಕ್ರಮದ ಯಶಸ್ವಿಗಾಗಿ ನಮ್ಮ ಸಂಘವು ತಾಲೂಕಿನ ವ್ಯಾಪ್ತಿಗೆ ಬರುವ ಎಲ್ಲಾ ಗ್ರಾಮಗಳಲ್ಲಿರುವ ಸುಮಾರು ಎರಡು ನೂರು ಸೈನಿಕರ ಮನೆಗಳಿಗೆ ತಲುಪಿ ಅವರು ಕುಟುಂಬ ಸಮೇತವಾಗಿ ಈ ಕಾರ್ಯಕ್ರಮದಲ್ಲಿ ಭಾಗವಹಿಸುವಂತೆ ಮಾಡಲು ನಾವು ತಂಡಗಳನ್ನು ರಚಿಸಿ ಕೆಲಸ ಮಾಡಲಿದ್ದೇವೆ. ಈ ಕಾರ್ಯಕ್ರಮದ ಮೂಲಕ ದೇಶದ ಪ್ರತಿ ನಮಗಿರುವ ಬದ್ಧತೆಯನ್ನು ಪ್ರದರ್ಶಿಸುವುದರ ಜೊತೆಗೆ ರಾಷ್ಟ್ರೀಯತೆಯನ್ನು ಜಾಗೃತಿಗೊಳಿಸುವ ಹಾಗೂ ನಮ್ಮ ಯುವಕರಲ್ಲಿ ದೇಶಕ್ಕಾಗಿ ತಮ್ಮನ್ನು ತಾವು ಸಮರ್ಪಿಸಲು ಸಿದ್ಧವಾಗುವಂತೆ ಮಾಡುವ ಉದ್ದೇಶ ನಮ್ಮದಾಗಿದೆ. ನಮ್ಮ ಈ ಕಾರ್ಯವು ಮೇ 23 ರಿಂದ 25 ರವರೆಗೆ ನಡೆಯಲಿದೆ ಎಂದರು. ಪತ್ರಿಕಾಗೋಷ್ಠಿಯಲ್ಲಿ ಮಾಜಿ ಸೈನಿಕರ ಸಂಘದ ಅಧ್ಯಕ್ಷ ಶ್ರೀಪಾಲ ಸಂಗಮಿ, ಎಸ್.ಎಸ್. ಅಂಗಡಿ, ನೀಲಪ್ಪ ವಾಲಿ, ಎಸ್.ಜಿ.ಬಿರಾದಾರ, ಸಂಭಾಜಿ ಡಿಸಲೆ, ಕೆ.ಐ.ಸಜ್ಜನ, ಬಾಪುಗೌಡ, ಬಿ.ಎಸ್.ಧಲಾರಿನಹಳ್ಳಿ ಇದ್ದರು

## ಸೇಡಂ: ಮೆಟ್ರಿಕ್ ಪೂರ್ವ ವಸತಿ ನಿಲಯಗಳಿಗೆ ಪ್ರವೇಶ ಪಡೆಯಲು ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮೇ.23–ಸೇಡಂ ತಾಲೂಕಿನ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಮೆಟ್ರಿಕ್ ಪೂರ್ವ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿಗಳಿಗೆ ಮಾತ್ರ ವಸತಿ ನಿಲಯಗಳಲ್ಲಿ 2025–26 ನೇ ಸಾಲಿಗೆ ಖಾಲಿ ಇರುವ ಸ್ಥಾನಗಳ ಪ್ರವೇಶಕ್ಕೆ ಹಿಂದುಳಿದ ವರ್ಗಗಳ ಪ್ರವರ್ಗ–1, 2ಎ, 2ಬಿ, 3ಎ, 3ಬಿ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಮತ್ತು ಇತರೆ ಜನಾಂಗಗಳಿಗೆ ಸೇರಿದ ವಿದ್ಯಾರ್ಥಿಗಳಿಂದ ಅರ್ಜಿಯನ್ನು ಆಹ್ವಾನಿಸಲಾಗಿದೆ ಎಂದು ಸೇಡಂ ತಾಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು ತಿಳಿಸಿದ್ದಾರೆ.

ಪ್ರವೇಶ ಪಡೆಯಲಿಚ್ಛಿಸುವ ಅರ್ಹ ಅಭ್ಯರ್ಥಿಗಳÄhttps://shp.karnataka.gov.in/bcwd ವೆಬ್‌ಸೈಟ್‌ದಲ್ಲಿ ಆನ್‌ಲೈನ್ ಮೂಲಕ 2025ರ ಜೂನ್ 16 ರೊಳಗಾಗಿ ಅರ್ಜಿ ಸಲ್ಲಿಸಬೇಕು. ನಂತರ ವಿದ್ಯಾರ್ಥಿಯ ಆನ್‌ಲೈನ್ ಅರ್ಜಿಯ ಪ್ರತಿ ಹಾಗೂ ಅಪಲೋಡ್ ಮಾಡಲಾದ ದಾಖಲಾತಿಗಳ ಸ್ವ–ಯಂ ಧೃಢೀಕೃತ ಪ್ರತಿಗಳನ್ನು ಸಂಬಂಧಪಟ್ಟ ಕಾಲೇಜಿನ ಪ್ರಾಚಾರ್ಯರಿಂದ ಧೃಢೀಕರಿಸಿ ಸೇಡಂ ತಾಲೂಕಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿಯಲ್ಲಿ 2025ರ ಜೂನ್ 16 ರೊಳಗಾಗಿ ಕಡ್ಡಾಯವಾಗಿ ಸಲ್ಲಿಸಿ ಸ್ವೀಕೃತಿಯನ್ನು ಪಡೆಯಬೇಕು. ಒಂದು ವೇಳೆ ನಿಗದಿತ ದಿನಾಂಕದೊಳಗಾಗಿ ದಾಖಲೆ ಸಲ್ಲಿಸದಿದ್ದಲ್ಲಿ ಅಂತಹ ಅರ್ಜಿ ಅನರ್ಜಿತಗೊಳಿಸಲಾಗುವುದು.

ಹೆಚ್ಚಿನ ಮಾಹಿತಿಗಾಗಿ ಸೇಡಂ ತಾಲೂಕಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿಯನ್ನು ಹಾಗೂ https://bcwd. karnataka.gov.in ವೆಬ್‌ಸೈಟ್‌ನ್ನು ಸಂಪರ್ಕಿಸಲು ಕೋರಲಾಗಿದೆ.

## ಕಲಬುರಗಿ: ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳಲ್ಲಿ ಪ್ರವೇಶ ಪಡೆಯಲು ಅರ್ಜಿ ಆಹ್ವಾನ

ಕಲಬುರಗಿ,ಮೇ.23–ಪ್ರಸಕ್ತ 2025–26ನೇ ಸಾಲಿಗೆ ಸಮಾಜ ಕಲ್ಯಾಣ ಇಲಾಖೆಯ ಅಧೀನದಲ್ಲಿ ನಡೆಯುತ್ತಿರುವ ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳಲ್ಲಿ ಪ್ರವೇಶ ಪಡೆಯಲು ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಅಹ್ವಾನಿಸಲಾಗಿದೆ ಎಂದು ಕಲಬುರಗಿ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರು (ಗ್ರೇಡ್–1) ತಿಳಿಸಿದ್ದಾರೆ.

5ನೇ ತರಗತಿಯಿಂದ 10ನೇ ತರಗತಿಯವರೆಗೆ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಇತರೆ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯಗಳಿಗೆ ಅರ್ಜಿ ಸಲ್ಲಿಸಬಹುದಾಗಿದೆ. ಅದೇ ರೀತಿ ಮೆಟ್ರಿಕ್ ನಂತರದ ಕೋರ್ಸ್‌ಗಳಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಇತರೆ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳಿಗೆ ಅರ್ಜಿ ಸಲ್ಲಿಸಹುದಾಗಿದೆ.

ಅರ್ಹ ಅಭ್ಯರ್ಥಿಗಳು https://swd.karnataka.gov.in ವೆಬ್‌ಸೈಟ್‌ದಲ್ಲಿ ಆನ್‌ಲೈನ್ ಮೂಲಕ ಅಗತ್ಯ ದಾಖಲಾತಿಗಳೊಂದಿಗೆ 2025ರ ಆಗಸ್ಟ್ 31ರೊಳಗಾಗಿ ಅರ್ಜಿಯನ್ನು ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಕಲಬುರಗಿ ಮಿನಿ ವಿಧಾನ ಸೌಧ ಎದುರುಗಡೆಯಿರುವ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಯಲ್ಲಿ ಅಥವಾ ಸಂಬಂಧಪಟ್ಟ ವಿದ್ಯಾರ್ಥಿ ನಿಲಯಗಳ ವಾರ್ಡನ್ ಇವರನ್ನು ಸಂಪರ್ಕಿಸಲು ಕೋರಲಾಗಿದೆ.

# ಆಲಮಟ್ಟಿ ಅಣೆ ಎತ್ತರ 524 ಮೀ.ಗೆ ಹೆಚ್ಚಿಸಲು ಅಧಿಸೂಚನೆ ಹೊರಡಿಸಲು ಕೇಂದ್ರದ ಮೇಲೆ ಒತ್ತಡ: ಡಿಸಿಎಂ ಡಿ.ಕೆ. ಶಿವಕುಮಾರ್

ಮಲ್ಲಮ್ಮ ನುಡಿ ವಾರ್ತೆ

ವಿಜಯಪುರ,ಮೇ 23:"ಆಲಮಟ್ಟಿ ಅಣೆಕಟ್ಟಿನ ಎತ್ತರವನ್ನು 524 ಮೀಟರ್‌ಗೆ ಹೆಚ್ಚಿಸಲು ಅಧಿಸೂಚನೆ ಹೊರಡಿಸುವಂತೆ ಕೇಂದ್ರ ಸರ್ಕಾರದ ಮೇಲೆ ಒತ್ತಡ ಹಾಕುತ್ತಿದ್ದೇವೆ. ಜತೆಗೆ ಇದಕ್ಕೆ ಅಗತ್ಯ ಭೂಸ್ವಾಧೀನ ಪ್ರಕ್ರಿಯೆ ಮುಂದುವರಿಸಲು ತೀರ್ಮಾನಿಸಿದ್ದೇವೆ" ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ತಿಳಿಸಿದರು.

ವಿಜಯಪುರ ಜಿಲ್ಲೆಯ ಕೊಲ್ಹಾರದಲ್ಲಿ ನಾನಾ ಅಭಿವೃದ್ಧಿ ಯೋಜನೆಗಳ ಉದ್ಘಾಟನೆ ಮತ್ತು ಶಂಕುಸ್ಥಾಪನೆಯನ್ನು ಡಿಸಿಎಂ ಡಿ ಕೆ ಶಿವಕುಮಾರ್ ಅವರು ಶುಕ್ರವಾರ ನೆರವೇರಿಸಿ ಮಾತನಾಡಿದರು.

"ಬಸವಣ್ಣನವರು ಹುಟ್ಟಿದ ನಾಡಿಗೆ ಬಂದು, ಇಲ್ಲಿನ ಶರಣರನ್ನು ಭೇಟಿ ಮಾಡುವ ಅವಕಾಶ ಸಿಕ್ಕಿರುವುದು ನನ್ನ ಭಾಗ್ಯ. ಬುದ್ಧ, ಪ್ರೀತಿ ಹಾಗೂ ಶಾಂತಿ ಎಂದು ಹೇಳುತ್ತಾನೆ. ದುರ್ಯೋಧನ, ಹಠ ಹಾಗೂ ಛಲ ಎಂದು ಹೇಳುತ್ತಾನೆ. ಏಕಲವ್ಯ ಮತ್ತು ಅರ್ಜುನ, ಗುರಿ ಎಂದು ಹೇಳುತ್ತಾರೆ. ಧರ್ಮರಾಯ, ಸುಧರ್ಮ ಎನ್ನುತ್ತಾನೆ. ಕೃಷ್ಣ ತಂತ್ರ ಎಂದರೆ, ಭೀಷ್ಮ ಪ್ರತಿಜ್ಞೆ ಎನ್ನುತ್ತಾನೆ, ಸಂತರು ನಮ್ಮದು ಭಕ್ತಿ ಎನ್ನುತ್ತಾರೆ. ಅಲೆಕ್ಸಾಂಡರ್ ಯುದ್ಧ ಎನ್ನುತ್ತಾನೆ. ಬಸವಣ್ಣ ಸಮಾನತೆ, ಸರ್ವರಿಗೂ ಸಮಬಾಳು, ಸಮಪಾಲು ಎಂದು ಹೇಳುತ್ತಾರೆ" ಎಂದರು.

"ಶ್ರೀಮಂತರು ಆಸ್ತಿ ಬಗ್ಗೆ ಆಲೋಚಿಸುತ್ತಾರೆ. ಹಸಿದವರು ಉದ್ಯೋಗ, ಊಟದ ಬಗ್ಗೆ ಚಿಂತಿಸುತ್ತಾರೆ. ಶಾಂತಿ, ಪ್ರೀತಿ, ಭಕ್ತಿ, ಸಮಾನತೆ, ಅನ್ನ ನೀಡುವುದು ಕಾಂಗ್ರೆಸ್ ಪಕ್ಷದ ನಂಬಿಕೆ. ನೀವು ಶಿವಾನಂದ ಪಾಟೀಲ್ ಅವರನ್ನು ಸತತವಾಗಿ ಆಯ್ಕೆ ಮಾಡುತ್ತಿದ್ದೀರಿ. ಅವರು ಸೇರಿದಂತೆ ಈ ರಾಜ್ಯದಲ್ಲಿ 136 ಶಾಸಕರನ್ನು ಆಯ್ಕೆ ಮಾಡಿ ಬಲಿಷ್ಠ ಸರ್ಕಾರವನ್ನು ಅಧಿಕಾರಕ್ಕೆ ತಂದಿದ್ದೀರಿ. ಅದಕ್ಕಾಗಿ ನಿಮ್ಮೆಲ್ಲರ ಪಾದಗಳಿಗೆ ಸಾಷ್ಟಾಂಗ ನಮಸ್ಕಾರ ಅರ್ಪಿಸುತ್ತೇನೆ" ಎಂದರು.

"ನಾವು ಬಡವರ ಬದುಕಿನ ಬಗ್ಗೆ ಆಲೋಚಿಸುತ್ತೇವೆ. ಬಡವರ ನೋವು ಹಂಚಿಕೊಳ್ಳಲು ಬಯಸುತ್ತೇವೆ. ಬಸವಣ್ಣನವರ ಆಶಯದಂತೆ ಸರ್ವರಿಗೂ ಸಮಬಾಳು, ಸಮಪಾಲು ಎಂದು ಸರ್ಕಾರ ನಡೆಸುತ್ತಿದ್ದೇವೆ. ನಮ್ಮ ಸರ್ಕಾರ ಬಸವಣ್ಣ ಅವರನ್ನು ನಮ್ಮ ರಾಜ್ಯದ ಸಾಂಸ್ಕೃತಿಕ ನಾಯಕ



ಎಂದು ಘೋಷಣೆ ಮಾಡಿದೆ. ನಿಮ್ಮ ಬದುಕನ್ನು ಉದ್ಧಾರ ಮಾಡಬೇಕು ಎಂಬ ಹಂಬಲ ನಮ್ಮ ಶಿವಾನಂದ ಪಾಟೀಲ್ ಅವರಿಗಿದೆ. ಅವರು ನನ್ನನ್ನು ಭೇಟಿ ಮಾಡಿದಾಗೆಲ್ಲ ಕ್ಷೇತ್ರದ ಅಭಿವೃದ್ಧಿ ಬಗ್ಗೆ ಚರ್ಚೆ ಮಾಡುತ್ತಾರೆ" ಎಂದು ತಿಳಿಸಿದರು.

"ದೇವರು ನಮಗೆ ವರ ಅಥವಾ ಶಾಪ ನೀಡುವುದಿಲ್ಲ. ಕೇವಲ ಅವಕಾಶ ಮಾತ್ರ ನೀಡುತ್ತಾನೆ. ನಮಗೆ ಸಿಕ್ಕ ಅವಕಾಶದಲ್ಲಿ ನಾವು ಏನು ಮಾಡುತ್ತೇವೆ ಎಂಬುದು ಮುಖ್ಯ. ಮನುಷ್ಯನ ಹುಟ್ಟು ಆಕಸ್ಮಿಕ, ಸಾವು ಅನಿವಾರ್ಯ, ಜನನ ಉಚಿತ, ಮರಣ ಖಚಿತ. ಈ ಹುಟ್ಟು ಸಾವಿನ ಮಧ್ಯೆ ನಾವು ಏನು ಸಾಧಿಸುತ್ತೇವೆ ಎಂಬುದು ಮುಖ್ಯ" ಎಂದರು.

"ಬಂಜಾರ ಸಮುದಾಯ ತಮ್ಮ ಸಮಸ್ಯೆಗಳನ್ನು ಹೇಳಿಕೊಂಡಿದ್ದಾರೆ. ನಿಮ್ಮ ನೋವು ನಮಗೆ ಅರ್ಥವಾಗುತ್ತದೆ. ನೀವು ಯಾವುದೇ ಅಪಪ್ರಚಾರಕ್ಕೆ ಈಡಾಗಬೇಡಿ. ರಾಜ್ಯದಲ್ಲಿ ಬಲಿಷ್ಠ ಸರ್ಕಾರ ಅಧಿಕಾರದಲ್ಲಿದೆ. ಎಲ್ಲಾ ಸಮಾಜಕ್ಕೂ ನ್ಯಾಯವನ್ನು ಒದಗಿಸುವ ಕೆಲಸವನ್ನು ನಾವು ಮಾಡುತ್ತೇವೆ. ಎಲ್ಲರಿಗೂ ಸಮಾನತೆ ಶಕ್ತಿ ತುಂಬುವ ಕೆಲಸ ಮಾಡುತ್ತೇವೆ. ಹೀಗಾಗಿ ಯಾರೂ ಚಿಂತಿಸುವ ಅಗತ್ಯವಿಲ್ಲ" ಎಂದು ಭರವಸೆ ತುಂಬಿದರು.

"ಆಲಮಟ್ಟಿ ಅಣೆಕಟ್ಟಿನ ಎತ್ತರವನ್ನು 524 ಮೀಟರ್ ಗೆ ಎತ್ತರಿಸಲು ನಮ್ಮ ಸರ್ಕಾರ ಸಂಕಲ್ಪ ಮಾಡಿದೆ. ಈ ವಿಚಾರವಾಗಿ ಶಾಸಕರ ಜತೆ ಚರ್ಚೆ ಮಾಡಿದ್ದು, ಭೂಸ್ವಾಧೀನ ಪ್ರಕ್ರಿಯೆ ಮುಂದುವರಿಸಲು ತೀರ್ಮಾನಿಸಿದ್ದೇವೆ. ಇತ್ತೀಚೆಗೆ ನಾನು ಹಾಗೂ ಸಿಎಂ ಕೇಂದ್ರದ ಮಂತ್ರಿಗಳನ್ನು ಭೇಟಿ ಮಾಡಿ ಈ ಬಗ್ಗೆ ಅಧಿಸೂಚನೆ ಹೊರಡಿಸಲು ಒತ್ತಡ ಹಾಕಿದ್ದೇವೆ. ಇದಕ್ಕಾಗಿ ಕೇಂದ್ರ ಸಚಿವರು ಸಭೆಯನ್ನು ಕರೆದಿದ್ದರು. ಆದರೆ ಕಾರಣಾಂತರಗಳಿಂದ ಅದನ್ನು ಮುಂದಕ್ಕೆ ಹಾಕಲಾಗಿದೆ" ಎಂದು ಮಾಹಿತಿ ನೀಡಿದರು.

"ಮಂಡ್ಯ ನಂತರ ಈ ಭಾಗದ ಜಿಲ್ಲೆಗಳು ಸಕ್ಕರೆ ನಾಡಾಗಿ ಮಾರ್ಪಟ್ಟಿವೆ. ಈ ಭಾಗದ ರೈತರ ಬದುಕು ಹಸನಾಗಿಸಲು ನಾವು ಬದ್ಧರಾಗಿದ್ದೇವೆ. ಈ ಭಾಗದಲ್ಲಿ ಕಾರ್ಖಾನೆಗಳು ಆರಂಭವಾಗಿ, ಉದ್ಯೋಗಗಳು ಸೃಷ್ಟಿಯಾಗುತ್ತಿವೆ" ಎಂದರು.

"ಬಿಜೆಪಿ ಸರ್ಕಾರದ ಅವಧಿಯಲ್ಲಿ ನೀವೆಲ್ಲರೂ ಬೆಲೆ ಏರಿಕೆ ಸೇರಿದಂತೆ ಅನೇಕ ಸಮಸ್ಯೆಗಳಿಂದ ತತ್ತರಿಸಿದ್ದೀರಿ. ನಿಮಗೆ ಸಹಾಯ ಮಾಡಲು ಗ್ಯಾರಂಟಿ ಯೋಜನೆ ತರಲಾಗಿದೆ. ಬಡ ಕುಟುಂಬದ ಮಹಿಳೆಗೆ 2 ಸಾವಿರ, 200 ಯೂನಿಟ್ ವರೆಗೂ ಉಚಿತ ವಿದ್ಯುತ್, ಉಚಿತ ಬಸ್ ಪ್ರಯಾಣ, 10 ಕೆ.ಜಿ ಅಕ್ಕಿ, ನಿರುದ್ಯೋಗ ಭತ್ಯೆ ನೀಡಿದ್ದೇವೆ. ಆ ಮೂಲಕ ಬಸವಣ್ಣನವರ ಮಾರ್ಗದರ್ಶನದಂತೆ ನುಡಿದಂತೆ ನಡೆದಿದ್ದೇವೆ. ಕೊಟ್ಟ ಮಾತನ್ನು ಉಳಿಸಿಕೊಂಡಿದ್ದೇವೆ" ಎಂದು ಹೇಳಿದರು.

"ವಿರೋಧ ಪಕ್ಷದವರು ಅಭಿವೃದ್ಧಿ ಆಗಿಲ್ಲ ಎಂದು ಟೀಕೆ ಮಾಡುತ್ತಿದ್ದಾರೆ. ನಾವು ಈ ಭಾಗದ ಅಭಿವೃದ್ಧಿಗೆ ಅನೇಕ ಕಾರ್ಯಕ್ರಮ ರೂಪಿಸಿದ್ದೇವೆ. ಕಲ್ಯಾಣ ಕರ್ನಾಟಕ ಅಭಿವೃದ್ಧಿಗೆ ಪ್ರತಿ ವರ್ಷ 5 ಸಾವಿರ ಕೋಟಿ, ಬೀದರ್ ಜಿಲ್ಲೆಯ ಅಭಿವೃದ್ಧಿಗೆ ? 2025 ಕೋಟಿ ಮೊತ್ತದ ವಿವಿಧ ಯೋಜನೆಗೆ ಚಾಲನೆ ನೀಡಿದ್ದೇವೆ. ಈ ಭಾಗದಲ್ಲಿ ಈ ವರ್ಷ ಎರಡನೇ ಬೆಳೆಗೆ ನೀರನ್ನು ಕೊಟ್ಟಿದ್ದೇವೆ. ಕೃಷ್ಣಾ ಮೇಲ್ದಂಡೆ ಯೋಜನೆ ಪೂರ್ಣಗೊಳಿಸುವುದು ಈ ಸರ್ಕಾರದ ಸಂಕಲ್ಪ. ಇದನ್ನು ರಾಷ್ಟ್ರೀಯ ಯೋಜನೆ ಮಾಡಬೇಕು ಎಂದು ನಮ್ಮ ಸರ್ಕಾರ ಒತ್ತಡ ಹಾಕುತ್ತಿದೆ" ಎಂದು ತಿಳಿಸಿದರು.

"ಬಿಜೆಪಿ ಸರ್ಕಾರ ತಾನು ಕೊಟ್ಟ ಮಾತನ್ನು ಉಳಿಸಿಕೊಳ್ಳಲಿಲ್ಲ. ಭದ್ರಾ ಮೇಲ್ದಂಡೆ ಯೋಜನೆಗೆ ಬಜೆಟ್‌ನಲ್ಲಿ ಘೋಷಿಸಿದ ರೂ.5,300 ಕೋಟಿ ಅನುದಾನವನ್ನು ನೀಡಲಿಲ್ಲ. ನೀರಾವರಿ ಯೋಜನೆಗಳಿಗೆ ಸಹಾಯ ಮಾಡಲಿಲ್ಲ. ಆದರೂ ನಮ್ಮ ರಾಜ್ಯದ ಅಭಿವೃದ್ಧಿ ನಿಮ್ಮ ಸರ್ಕಾರದ ಗುರಿ. ನಮ್ಮ ಸರ್ಕಾರ 2 ವರ್ಷ ಪೂರೈಸಿದ ಸಂದರ್ಭದಲ್ಲಿ 1,11,111 ಕುಟುಂಬಗಳ ಜಮೀನಿಗೆ ಪಟ್ಟಾ ಖಾತೆ ನೀಡಿ ಭೂ ಗ್ಯಾರಂಟಿ ಯೋಜನೆ ನೀಡಿದ್ದೇವೆ" ಎಂದು ಹೇಳಿದರು.

"ಮುಂದಿನ ಮೂರು ವರ್ಷಗಳ ನಂತರ ನಡೆಯಲಿರುವ ಚುನಾವಣೆಯಲ್ಲಿ ಮತ್ತೆ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬರಲಿದೆ. ಶಿವಾನಂದ ಪಾಟೀಲ್ ಅವರು ವಹಿಸಿಕೊಂಡಿರುವ ಇಲಾಖೆಗಳನ್ನು ಸಮರ್ಥವಾಗಿ ನಿಭಾಯಿಸುತ್ತಿದ್ದಾರೆ. ಅವರು ಉಸ್ತುವಾರಿ ಹೊತ್ತಿರುವ ಹಾವೇರಿ ಜಿಲ್ಲೆಯಲ್ಲಿ ನಡೆದ ಉಪಚುನಾವಣೆಯಲ್ಲಿ ಮಾಜಿ ಸಿಎಂ ಬೊಮ್ಮಾಯಿ ಅವರ ಸುಪುತ್ರನ ವಿರುದ್ಧ ಕಾಂಗ್ರೆಸ್ ಅಭ್ಯರ್ಥಿ ಗೆಲುವು ಸಾಧಿಸಿದ್ದಾರೆ. ಶಿವಾನಂದ ಪಾಟೀಲ್ ಅವರ ನೇತೃತ್ವದಲ್ಲಿ ಅನೇಕ ಕೆಲಸಗಳು ನಡೆಯುತ್ತಿವೆ" ಎಂದು ತಿಳಿಸಿದರು.

## ಛಲವಾದಿ ಕ್ಷಮೆ ಕೇಳಿರುವಾಗ ಬಿಜೆಪಿ ಸತ್ಯಾಗ್ರಹ ಅನಗತ್ಯ: ಶಾಸಕ ಅಲ್ಲಮಪ್ರಭು ಪಾಟೀಲ್




ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ: ಮೇ.23: ರಾಜ್ಯದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯಿತಿರಾಜ್, ಐಟಿಬಿಟಿ ಮತ್ತು ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಅವರಿಗೆ ನಾಯಿ ಎಂದು ಕರೆದು ನಂತರ ಆಗಿರುವ ತಪ್ಪಿಗೆ ಕ್ಷಮೆಯನ್ನು ರಾಜ್ಯ ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ಅವರು ಕೇಳಿದ್ದಾರೆ. ಆದಾಗ್ಯೂ, ಶನಿವಾರ ಮೇ 24ರಂದು ಬಿಜೆಪಿಯವರು ಮಾಡುವ ಸತ್ಯಾಗ್ರಹಕ್ಕೆ ಯಾವುದೇ ರೀತಿಯಲ್ಲಿ ಅರ್ಥವಿಲ್ಲ ಎಂದು ದಕ್ಷಿಣ ಕ್ಷೇತ್ರದ ಶಾಸಕ ಅಲ್ಲಮಪ್ರಭು ಪಾಟೀಲ್ ಅವರು ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಚಿತ್ತಾಪುರಕ್ಕೆ ತಿರಂಗಾ ಯಾತ್ರೆಗೆ ಹೋಗುವ ಮುನ್ನ ಛಲವಾದಿ ನಾರಾಯಣಸ್ವಾಮಿ ಅವರು ನಗರದಲ್ಲಿ ಸುದ್ದಿಗೋಷ್ಠಿಯಲ್ಲಿ ಸಚಿವ ಪ್ರಿಯಾಂಕ್ ಖರ್ಗೆ ಅವರಿಗೆ ನಾಯಿಗೆ ಹೋಲಿಕೆ

ಮಾಡಿದ್ದು ತಪ್ಪು. ಅಂತಹ ಅವಹೇಳನ ಮಾಡಿ ಅವರು ಚಿತ್ತಾಪುರಕ್ಕೆ ಹೋದಾಗ ಸಚಿವ ಖರ್ಗೆಯವರ ಬೆಂಬಲಿಗರು, ಕಾಂಗ್ರೆಸ್ಸಿಗರು ಆಕ್ರೋಶಗೊಂಡು ಕ್ಷಮೆ ಕೇಳಲು ಪ್ರತಿಭಟನೆ ಮಾಡಿದ್ದಾರೆ. ಅಂತಹ ಸಂದರ್ಭದಲ್ಲಿ ಛಲವಾದಿ ನಾರಾಯಣಸ್ವಾಮಿ ಅವರೊಂದಿಗೆ ಮಾತನಾಡಬೇಕಿತ್ತು. ಅದನ್ನು ಬಿಟ್ಟು ಪ್ರವಾಸಿ ಮಂದಿರದೊಳಗೆ ಕುಳಿತು ನಂತರ ಕ್ಷಮೆ ಕೇಳಿದರು. ಇದ-ರಿಂದಾಗಿ ಕಾಂಗ್ರೆಸ್ಸಿಗರು ಪ್ರತಿಭಟನೆ ಹಿಂಪಡೆದಿದ್ದರು. ಈಗ ಅದೇ ವಿಷಯ ಮುಂದಿಟ್ಟುಕೊಂಡು ಬಿಜೆಪಿ ಸತ್ಯಾಗ್ರಹ ಮಾಡುವ ಮೂಲಕ ರಾಜಕೀಯ ಬೆರೆಸುತ್ತಿದೆ ಎಂದು ಆರೋಪಿಸಿದರು. ಸಚಿವ ಪ್ರಿಯಾಂಕ್ ಖರ್ಗೆ ಅವರು ತಮ್ಮ ಇಲಾಖೆಯ ಮೂಲಕ ರಾಜ್ಯಾದ್ಯಂತ ಜನಪ್ರೀಯರಾಗಿದ್ದಾರೆ. ಅನೇಕ ಅಭಿವೃದ್ಧಿ ಕಾರ್ಯಗಳನ್ನು ಮಾಡಿದ್ದಾರೆ.

ಹಿಂದೆ ವಿರೋಧ ಪಕ್ಷದಲ್ಲಿದ್ದಾಗ ಆಡಳಿತ ಬಿಜೆಪಿ ಪಕ್ಷದ ವೈಫಲ್ಯಗಳನ್ನು ಪರಿಣಾಮಕಾರಿಯಾಗಿ ಬಯಲಿಗೆ ತಂದಿದ್ದಾರೆ. ಹೀಗಾಗಿ ಸಚಿವ ಖರ್ಗೆಯವರ ಮೇಲೆ ಬಿಜೆಪಿಯವರಿಗೆ ಹೊಟ್ಟೆಕಿಚ್ಚು ಇದೆ. ಅವರ ಏಳಿಗೆಯನ್ನು ಸಹಿಸಲು ಬಿಜೆಪಿಯವರಿಗೆ ಆಗುತ್ತಿಲ್ಲ. ಹಾಗಾಗಿ ಉಪಯೋಗವಿಲ್ಲದ

ಸತ್ಯಾಗ್ರಹ ಮಾಡುತ್ತಿದ್ದಾರೆ ಎಂದು ಅವರು ಹರಿಹಾಯ್ದರು. ಸುದ್ದಿಗೋಷ್ಠಿಯಲ್ಲಿ ಪಕ್ಷದ ಜಿಲ್ಲಾಧ್ಯಕ್ಷ ಹಾಗೂ ರಾಜ್ಯ ವಿಧಾನ ಪರಿಷತ್ ಸದಸ್ಯ ಜಗದೇವ್ ಗುತ್ತೇದಾರ್ ಕಾಳಗಿ, ಅಫಜಲಪುರ ಶಾಸಕ ಎಂ.ವೈ. ಪಾಟೀಲ್, ಶಿವಾನಂದ್ ಪಾಟೀಲ್, ಡಾ. ಕಿರಣ್ ದೇಶಮುಖ್, ಸಂಗಮೇಶ್ ನಾಗನಳ್ಳಿ ಮುಂತಾದವರು ಉಪಸ್ಥಿತರಿದ್ದರು.

## ಧರ್ಮವೇ ಜೀವನದ ಧ್ಯೇಯವಾಗಬೇಕು: ರಂಭಾಪುರಿ ಜಗದ್ಗುರುಗಳು

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಮೇ.23: ತಾಲೂಕಿನ ಗಡಿ ಭಾಗದ ಮೇಹಕರ ಗ್ರಾಮದಲ್ಲಿ ರಾಜೇಶ್ವರ ಶಿವಾಚಾರ್ಯರ ಪಟ್ಟಾಧಿಕಾರ ರಜತ ಮಹೋತ್ಸವ ಯಶಸ್ವಿಯಾಗಿ ಸಮಾರೋಪಗೊಂಡಿತು. ರಂಭಾಪುರಿ ಪೀಠದ ಜಗದ್ಗುರು ಡಾ. ವೀರಸೋಮೇಶ್ವರ ಶಿವಾಚಾರ್ಯ ಸಾನ್ನಿಧ್ಯ ಮತ್ತು ರಾಜೇಶ್ವರ ಶಿವಾಚಾರ್ಯ ಅವರ ನೇತೃತ್ವದಲ್ಲಿ

ಮೂರು ದಿನಗಳ ಕಾಲ ನಡೆದ ಮಹೋತ್ಸವದಲ್ಲಿ ಇಷ್ಟಲಿಂಗ ಮಹಾಪೂಜೆ, ವಿವಿಧ ಧಾರ್ಮಿಕ ವಿಧಿವಿಧಾನಗಳು, ಜ್ಞಾನಮಯ ಧರ್ಮಸಭೆಗಳು ನಡೆದು ಸಾವಿರಾರು ಭಕ್ತರ ಭಕ್ತಿ, ಶ್ರದ್ಧೆ ಮತ್ತು ಸೇವಾಭಾವನೆಗೆ ವೇದಿಕೆಯಾಗಿತು.

ಸಾನ್ನಿಧ್ಯ ವಹಿಸಿದ್ದ ರಂಭಾಪುರಿ ಜಗದ್ಗುರುಗಳು ಮಾತನಾಡಿ, ಧರ್ಮವೇ ಜೀವನದ ಧ್ಯೇಯವಾಗಬೇಕು. ಇಂತಹ ರಜತ ಮಹೋತ್ಸವಗಳು ಸಮಾಜದಲ್ಲಿ ನೈತಿಕ ಮೌಲ್ಯಗಳನ್ನು ಸಾರುವ ಉಪನ್ಯಾಸ ವೇದಿಕೆಯಾಗುತ್ತವೆ. ಮಾನವಧರ್ಮಕ್ಕೆ ಜಯವಾಗಲಿ, ಧರ್ಮದಿಂದಲೇ ವಿಶ್ವಕ್ಕೆ ಶಾಂತಿ ಎಂಬ ಘನ ಸಂದೇಶವನ್ನು ಈ ಕಾರ್ಯಕ್ರಮ ನೀಡುತ್ತಿದೆ ಎಂದು ತಿಳಿಸಿದರು.



ನೇತೃತ್ವ ವಹಿಸಿದ ರಾಜೇಶ್ವರ ಶಿವಾಚಾರ್ಯರು ಮಾತನಾಡಿ, 25 ವರ್ಷದ ಸೇವಾ ಪಯಣದಲ್ಲಿ ಶ್ರೀಮಠದ ಆಶೀರ್ವಾದ, ಶ್ರದ್ಧಾವಂತ ಭಕ್ತರ ಬೆಂಬಲ, ಹಾಗೂ ಗುರುಪಾದ ಶಕ್ತಿಯೇ ನನ್ನ ಶಕ್ತಿ. ಈ ರಜತ ಮಹೋತ್ಸವದಲ್ಲಿ ಭಕ್ತರ ಅಪಾರ ಪ್ರೀತಿ ಕಂಡು, ಮುಂದಿನ ದಿನಗಳಲ್ಲಿ ಇನ್ನಷ್ಟು ಧಾರ್ಮಿಕ ಸೇವೆ, ಶಿಕ್ಷಣ, ಮತ್ತು ಸಮಾಜಮುಖಿ ಕಾರ್ಯಗಳಲ್ಲಿ ನಿರಂತರ ತೊಡಗಿಕೊಳ್ಳುವ ಸಂಕಲ್ಪ ಮಾಡಿಕೊಂಡಿದ್ದೇನೆ ಎಂದು ತಿಳಿಸಿದರು.

## ವಿಜೃಂಭಣೆಯಿಂದ ಜರುಗಿದ ಶ್ರೀ ಹುಲಿಗೆಮ್ಮ ದೇವಿ ಮಹಾರಥೋತ್ಸವ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ:ಮೇ.23: ಜಿಲ್ಲೆಯ ಕೊಪ್ಪಳ ತಾಲೂಕಿನ ಹುಲಿಗೆ ಗ್ರಾಮದ ಶ್ರೀ ಹುಲಿಗೆಮ್ಮ ದೇವಿ ದೇವಸ್ಥಾನದ ಮಹಾರಥೋತ್ಸವವು ಬುಧವಾರ ಅಪಾರ ಜನ ಸಾಗರದ ನಡುವೆ ವಿಜೃಂಭಣೆಯಿಂದ ಜರುಗಿತು.

ಕರ್ನಾಟಕದ ಪ್ರಸಿದ್ಧ ಧಾರ್ಮಿಕ ಕ್ಷೇತ್ರಗಳಲ್ಲಿ ಒಂದಾದ ಶ್ರೀ ಹುಲಿಗೆಮ್ಮ ದೇವಿ ದೇವಸ್ಥಾನದ ಪ್ರಸಕ್ತ ಸಾಲಿನ ಜಾತ್ರಾ ಮಹೋತ್ಸವದ ಅಂಗವಾಗಿ ಮೇ 24ರವರೆಗೆ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ನಡೆಯುತ್ತಿದ್ದು, ಜಾತ್ರೆಯ ಮುಖ್ಯ ಭಾಗವಾದ ಮಹಾರಥೋತ್ಸವವು ಮೇ 21ರ ಸಾಯಂಕಾಲ 5-30 ಗಂಟೆಗೆ ಲಕ್ಷಾಂತರ ಭಕ್ತಾಧಿಗಳ ಸಮೂಹದ ನಡುವೆ ಅದ್ದೂರಿಯಾಗಿ ರಥೋತ್ಸವ ಜರುಗಿತು. ಮಳೆಯ ನಡುವೆಯೂ ಮಹಾರಥೋತ್ಸವಕ್ಕೆ ಭಕ್ತರು ಸಾಗರದಂತೆ ಹರಿದು ಬಂದಿರುವುದು ವಿಶೇಷವಾಗಿತ್ತು.*ಲಕ್ಷಾಂತರ ಭಕ್ತಾದಿಗಳು ಭಾಗಿ:*ಶ್ರೀ ಹುಲಿಗೆಮ್ಮ ದೇವಿ ಮಹಾರಥೋತ್ಸವದಲ್ಲಿ ಭಕ್ತರ



ಉಧೋ ಉಧೋ ಘೋಷಣೆ ಮುಗಿಲು ಮುಟ್ಟಿತ್ತು. ಭಕ್ತವೃಂದ ರಥಕ್ಕೆ ಬಾಳೆಹಣ್ಣು, ಉತ್ತತ್ತಿ ಸಮರ್ಪಿಸಿ, ಭಕ್ತಿ ಭಾವ ಮೆರೆದರು. ಕರ್ನಾಟಕದ ವಿವಿಧ ಜಿಲ್ಲೆಗಳ ಮತ್ತು ಆಂಧ್ರಪ್ರದೇಶದ, ತೆಲಂಗಾಣ, ತಮಿಳುನಾಡು, ಮಹಾರಾಷ್ಟ್ರ ಹಾಗೂ ಇತರೆ ರಾಜ್ಯಗಳ ಸೇರಿದಂತೆ ಲಕ್ಷಾಂತರ ಭಕ್ತಾದಿಗಳು ಜಾತ್ರೆಗೆ ಆಗಮಿಸಿ, ಮಹಾರಥೋತ್ಸವವನ್ನು ಕಣ್ತುಂಬಿಕೊಂಡರು. ರಥವು ಪಾಜಕಟ್ಟಿ ವರೆಗೆ ಹೋಗಿ ದೇವಸ್ಥಾನ ಬಳಿ ಮರಳುತ್ತಿದ್ದಂತೆ ಎಲ್ಲರೂ ಚಪ್ಪಾಳೆ ತಟ್ಟಿ ಸಂಭ್ರಮಿಸಿದರು.*ಅಚ್ಚುಕಟ್ಟು ವ್ಯವಸ್ಥೆ:* ಶ್ರೀ ಹುಲಿಗೆಮ್ಮ ದೇವಿ ಜಾತ್ರಾ ಮಹೋತ್ಸವಕ್ಕೆ ಕೊಪ್ಪಳ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಪೊಲೀಸ್ ಇಲಾಖೆ, ಶ್ರೀ ಹುಲಿಗೆಮ್ಮ ದೇವಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ಸೇರಿದಂತೆ ವಿವಿಧ ಇಲಾಖೆಗಳು ಹಾಗೂ ದೇವಸ್ಥಾನದ ಆಡಳಿತ ಮಂಡಳಿಯು ಭಕ್ತಾದಿಗಳಿಗೆ ಕುಡಿಯುವ ನೀರು, ಶೌಚಾಲಯ, ಸ್ನಾನಗೃಹ, ಸಾರಿಗೆ ಮತ್ತು ವಾಹನಗಳ ಪಾರ್ಕಿಂಗ್ ವ್ಯವಸ್ಥೆಗಳನ್ನು ಕಲ್ಪಿಸಿ ಅಚ್ಚುಕಟ್ಟಾಗಿ ವ್ಯವಸ್ಥೆ ಮಾಡಿದೆ. ಈ ಬಾರಿ ಜಾತ್ರಾ ಮಹೋತ್ಸವಕ್ಕೆ ಆಗಮಿಸುವ ಭಕ್ತಾಧಿಗಳಿಗೆ ಪ್ರತಿನಿತ್ಯ ಪ್ರಸಾದದ ವ್ಯವಸ್ಥೆಯನ್ನು ಸಹ ಉತ್ತಮ ರೀತಿಯಲ್ಲಿ ಮಾಡಲಾಗಿರುತ್ತದೆ. ರಥೋತ್ಸವ ಸಂದರ್ಭದಲ್ಲಿ ಕೊಪ್ಪಳ ಸಂಸದರಾದ ಕೆ.ರಾಜಶೇಖರ ಬಸವರಾಜ ಹಿಟ್ನಾಳ, ವಿಧಾನ ಪರಿಷತ್ ಸದಸ್ಯರಾದ ಹೇಮಲತಾ ನಾಯಕ, ಮಾಜಿ ಸಂಸದ ಕರಡಿ ಸಂಗಣ್ಣನ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ರಾಮ್ ಎಲ್. ಅರಸಿದ್ದಿ, ಉಪವಿಭಾಗಾಧಿಕಾರಿ ಕ್ಯಾಪ್ಟನ್ ಮಹೇಶ್ ಮಾಲಗಿತ್ತಿ, ಅಪರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಹೇಮಂತ ಕುಮಾರ್, ಶ್ರೀ ಹುಲಿಗೆಮ್ಮ ದೇವಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿ ಎಂ.ಹೆಚ್. ಪ್ರಕಾಶ್‌ರಾವ್ ಕೊಪ್ಪಳ ಮತ್ತು ಗಂಗಾವತಿ ಡಿವೈಎಸ್‌ಪಿಗಳು, ಇತರೆ ಜನಪ್ರತಿನಿಧಿಗಳು ಹಾಗೂ ಇತರರು ಸೇರಿದಂತೆ ಅಪಾರ ಸಂ-ಖ್ಯೆಯ ಭಕ್ತವೃಂದ ಉಪಸ್ಥಿತರಿದ್ದು, ರಥೋತ್ಸವ ಯಶಸ್ವಿಗೆ ಸಾಕ್ಷಿಯಾದರು.

## ಆಸ್ಪತ್ರೆಗೆ ಬಂದು ಚಿಕಿತ್ಸೆ ಪಡೆದ ಕೋತಿ!



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.23-ಗುದದ್ವಾರಕ್ಕೆ ಆಗಿರುವ ಗಾಯಕ್ಕೆ ಚಿಕಿತ್ಸೆ ಪಡೆಯಲು ಕೋತಿಯೊಂದು ತಾನೇ ಪಶು ಆಸ್ಪತ್ರೆಗೆ ಬಂದು ವೈದ್ಯರಿಗೆ ಕೈ ಸನ್ನೆ ಮೂಲಕ ಗಾಯ ತೋರಿಸಿ ಚಿಕಿತ್ಸೆ ಪಡೆದಿರುವ ಸಚಿತ್ರ ಘಟನೆ ಜಿಲ್ಲೆಯ ಹುನಗುಂದ ತಾಲೂಕಿನ ಗುಡೂರ ಗ್ರಾಮದಲ್ಲಿ ನಡೆದಿದೆ. ಗ್ರಾಮದ ಪಶು ಚಿಕಿತ್ಸಾಲಯದಲ್ಲಿ ಪಶು ವೈದ್ಯ ಜಿ.ಜಿ.ಬಿಲ್ಲೋರ ಅವರು ತಮ್ಮ ಬೈಕ್ ಮೇಲೆ ಬಂದು ಕುಳಿತ ಕೋತಿಯ ಬೆನ್ನು ಸವರಿದಾಗ ಕೋತಿ ತನಗಾದ ಗಾಯವನ್ನು ಕೈ ಮಾಡಿ ತೋರಿಸಿದೆ. ಇದನ್ನು ಗಮನಿಸಿದ ವೈದ್ಯ ಬಿಲ್ಲೋರ, ಕೋತಿಗಾದ ಗಾಯವನ್ನು ನೋಡಿದಾಗ ಗಾಯದಲ್ಲಿ ಹುಳಗಳಾಗಿವೆ. ಕೂಡಲೇ ಅದನ್ನು ಸ್ವಚ್ಛವಾಗಿ ತೊಳೆದು ಔಷಧಿ ಹಚ್ಚಿ ಚಿಕಿತ್ಸೆ ನೀಡಿದ್ದಾರೆ. ಈ ಕುರಿತಾದ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದೆ.

## 35 ವರ್ಷದ ಹೋರಾಟಕ್ಕಿಂತ ಮೇ ತಿಂಗಳು ಮಾದಿಗರ ಭವಿಷ್ಯ ಬರೆಯುವ ತಿಂಗಳು

### ಪ್ರತಿಯೊಬ್ಬರೂ ಜಾತಿ ಜನಗಣತಿಯಲ್ಲಿ ಭಾಗವಹಿಸಿ ಸರ್ಕಾರಿ ಸೌಲಭ್ಯ ಪಡೆಯಿರಿ: ಹೆಚ್.ಆಂಜನೇಯ

ಬೀದರ. ಮೇ. 23 : ಪ್ರತಿಯೊಬ್ಬ ಮಾದಿಗ ಸಮಾಜದ ಜನರು ನಿಮ್ಮ ಮನೆಗೆ ಜಾತಿ ಜನಗಣತಿಗಾಗಿ ಅಧಿಕಾರಿಗಳು ಬಂದಾಗ ತಪ್ಪದೇ ಮಾದಿಗ ಎಂದು ಬರೆಸಬೇಕು. 35 ವರ್ಷಗಳ ಹೋರಾಟಕ್ಕಿಂತ ಈ ಮೇ ತಿಂಗಳ ಸಮೀಕ್ಷೆ ನಮ್ಮ ಭವಿಷ್ಯ ಬರೆಯುವ ತಿಂಗಳಾಗಿದೆ. ನಮ್ಮ ಬದುಕನ್ನು ಕಟ್ಟಿಕೊಳ್ಳುವ ತಿಂಗಳಾಗಿದೆ. ಆದ್ದರಿಂದ ತಪ್ಪದೇ ಪ್ರತಿಯೊಬ್ಬರೂ ಜಾತಿ ಜನಗಣತಿಯಲ್ಲಿ ಪಾಲ್ಗೊಂಡು, ಮನೆಮನೆಗೆ ತೆರಳಿ ನಮ್ಮ ಸಮಾಜದವರಿಗೆ ಜಾಗೃತಿ ಮೂಡಿಸಿ ಮುಂದಿನ ದಿನಗಳಲ್ಲಿ ಸರ್ಕಾರಿ ಸೌಲಭ್ಯ ಪಡೆಯಿರಿ ಎಂದು ಮಾಜಿ ಸಚಿವ ಹೆಚ್ ಆಂಜನೇಯ ತಿಳಿಸಿದರು. ನಗರದ



ಜಿಲ್ಲಾ ಪತ್ರಿಕಾ ಭವನದಲ್ಲಿ ಶುಕ್ರವಾರ ಕರೆದ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು ಮುಂದಿನ ದಿನಗಳಲ್ಲಿ ನಮ್ಮ ಸಮಾಜದವರಿಗೆ ಸರ್ಕಾರದಿಂದ ಆರ್ಥಿಕ ಸಹಾಯ, ನಿಗಮ ಮಂಡಳಿಯಿಂದ ಧನಸಹಾಯ, ಶೈಕ್ಷಣಿಕ ಸಹಾಯಕ್ಕಾಗಿ ನಿಮ್ಮ ನಿಮ್ಮ ಜಾತಿಯನ್ನು ತಪ್ಪದೇ ನಮೂದಿಸಿ. ಈ ಸಮೀಕ್ಷೆ ಮುಖಾಂತರ ನ್ಯಾ. ನಾಗಮೋಹನದಾಸ ಅವರು ನಮಗೆ ನ್ಯಾಯ ಒದಗಿಸಿಕೊಡುತ್ತಾರೆ ಎನ್ನುವ ಭರವಸೆ ನಮಗಿದೆ. ಮುಖ್ಯಮಂತ್ರಿ ಸಿದ್ಧರಾಮಯ್ಯನವರು ಸಾಮಾಜಿಕ ನ್ಯಾಯದ ಹರಿಕಾರರಾದ ಕಾರಣ ನಮಗೆ ಅವರೇ ಅಂಬೇಡ್ಕರ್ ಇದ್ದಂತೆ ಎಂದು ಪ್ರತಿಪಾದಿಸಿದರು. ಮುಂದುವರೆದು ಮಾತನಾಡಿದ ಹೆಚ್ ಆಂಜನೇಯ ಅವರು ಇಂದಿನ ಜಾತಿ ಜನಗಣತಿಯಲ್ಲಿ ಕೆಲವು ನಕಲಿ ಜಾತಿಗಳು ಸೇರಿಕೊಳ್ಳುತ್ತಿವೆ. ಬೇಡಜಂಗಮ ಎಂಬುದು ವೀರಶೈವ ಲಿಂಗಾಯತದಲ್ಲಿ ಬರುತ್ತದೆ. ಹೀಗಾಗಿ ಬೇಡಜಂಗಮ ಬರೆಸಿದವರ ಬಗ್ಗೆ ಪರಿಶೀಲನೆ ನಡೆಸುವಂತೆ ಸಿಎಂ ಅವರಿಗೆ ತಿಳಿಸಿದ್ದೇನೆ. ಈ ಹಿಂದೆ-ಯೂ ಬೇಡಜಂಗಮ ಪ್ರಮಾಣ ಪತ್ರ ನೀಡಿದ ಅಧಿಕಾರಿಗಳಿಗೆ ನೇರವಾಗಿ ಜೈಲಿಗೆ ಕಳುಹಿಸುವಂತೆ ಸಿಎಂ ಅವರಿಗೆ ಮನವಿ ಮಾಡಿಕೊಳ್ಳುತ್ತೇನೆ ಎಂದು ತಿಳಿಸಿದರು. ಔರಾದ ಬಿ. ಮೀಸಲು ಕ್ಷೇತ್ರದ ಶಾಸಕರಾದ ಪ್ರಭು ಚವ್ಹಾಣ ಅವರು ನಾಲ್ಕು ಬಾರಿ ನಕಲಿ ಜಾತಿ ಪ್ರಮಾಣ ಪತ್ರ ಪಡೆದುಕೊಂಡು ರಾಜಕೀಯ ಲಾಭ ಪಡೆದುಕೊಂಡಿದ್ದಾರೆ. ಅವರ ವಿರುದ್ಧ ಹೋರಾಟ ಮಾಡಿ ಕ್ರಮ ಕೈಗೊಳ್ಳುವ ಕುರಿತು ಅಧಿಕಾರಿಗಳ ಜೊತೆ ಚರ್ಚಿಸುತ್ತೇನೆ ಎಂದರು. ಇದೇ ವೇಳೆ ಪ್ರಮುಖರಾದ ವಿಜಯಕುಮಾರ ಜಿ. ರಾಮಕೃಷ್ಣ, ಚಂದ್ರಕಾಂತ ಹಿಪ್ಪಳಗಾಂವ, ರಾಜು ಕಡ್ಯಾಳ, ವಿಜಯಕುಮಾರ ಕೌಡ್ಯಾಳ, ದೇವದಾಸ ಚಿಂತಲಗೇರಾ, ಕಲಪ್ಪ ವೈದ್ಯ, ಶಾಮಣ್ಣ ಬಂಬುಳಗಿ, ದೇವದಾಸ ತುಮಕುಂಟೆ, ರಮೇಶ ಕಟ್ಟಿತುಗಾಂವ, ಕಮಲಾಕರ ಹೆಗಡೆ, ಸುಧಾಕರ ಕೊಳ್ಳುರ, ಪಿಟೀರ ಶ್ರೀಮಂಡಲ್, ಜೀವನ ರಿಕ್ಕೆ, ಶಿವಣ್ಣ ಹಿಪ್ಪಳಗಾಂವ, ಹರೀಶ ಗಾಯಕವಾಡ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಇಂದು ಯುಜಿ ಸಿಇಟಿ ಫಲಿತಾಂಶ ಪ್ರಕಟ : ಕೆಇಎ

ಬೆಂಗಳೂರು:ಮೇ.23: ಏ.15, 16, 17ರಂದು ನಡೆದಿದ್ದ ಪ್ರಸಕ್ತ ಸಾಲಿನ ಯುಜಿ ಸಿಇಟಿ ಪರೀ-ಕ್ಷೆ ಫಲಿತಾಂಶ ಮೇ 24ರಂದು ಪ್ರಕಟಗೊಳ್ಳಲಿದೆ ಎಂದು ಕರ್ನಾಟಕ ಪರೀಕ್ಷಾ ಪ್ರಾಧಿಕಾರ ತಿಳಿಸಿದೆ.

ಬೆಳಿಗ್ಗೆ 11:30ಕ್ಕೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಕಚೇರಿಯಲ್ಲಿ ಉನ್ನತ ಶಿಕ್ಷಣ ಸಚಿವ ಡಾ. ಸುಧಾ-ಕರ್ ಸುದ್ದಿಗೋಷ್ಠಿ ನಡೆಸಲಿದ್ದು, ಫಲಿತಾಂಶ ಪ್ರಕಟಿಸಲಿದ್ದಾರೆ. ಮಧ್ಯಾಹ್ನ 2 ಗಂಟೆ ನಂತರ ಇಲಾಖೆಯ ವೆಬ್ ಸೈಟ್‌ನಲ್ಲಿ ಫಲಿತಾಂಶ ಲಭ್ಯವಾಗಲಿದೆ.

ಇದೇ ಏ.15,16 ಹಾಗೂ 17 ರಂದು ಪರೀಕ್ಷೆ ನಡೆದಿದ್ದು, ಸುಮಾರು 3.30 ಲಕ್ಷ ವಿದ್ಯಾರ್ಥಿಗಳು ಪರೀಕ್ಷೆಗೆ ನೋಂದಣಿಯಾಗಿದ್ದರು.

https://cetonline.Karnataka.gov.in/ugcetrank2025/checkresult.aspx ಹಾಗೂ https://karresults.nic.in ಈ ವೆಬ್‌ಸೈಟ್‌ನಲ್ಲಿ ಫಲಿತಾಂಶ ಪ್ರಕಟವಾಗಲಿದೆ.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.